ಸಂಪುಟ: 04 ಸಂಚಿಕೆ: 189 ಪುಟಗಳು: 08 ಶನಿವಾರ 21 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ನನ್ನ ಹೃದಯದಲ್ಲಿ ಪ್ರಾಮಾಣಿಕತೆ ತುಂಬಿದ್ದರೆ ನಿನ್ನ ಶತ್ರು ಮಾತ್ರವಲ್ಲ, ಇಡೀ ಪ್ರಪಂಚ ನಿನ್ನೆದುರು ಆಯುಧವನ್ನು ಕೆಳಗಿಡುತ್ತದೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ನಾಗಮಂಗಲ ಗಲಭೆ ತನಿಖೆ ಎನ್ಐಎಗೆ ವಹಿಸಬೇಕು: ಮಾಜಿ ಡಿಸಿಎಂ

• **ಉದಯವಾಹಿನಿ, ಮಂಡ್ಯ**

ಮಂಡ್ಯದ ನಾಗಮಂಗಲದಲ್ಲಿ ನಡೆದ ಗಲಭೆಗೆ ಸಂಬಂಧಪಟ್ಟಂತೆ ಮಾಜಿ ಡಿಸಿಎಂ ಅಶ್ವಥ್ ನಾರಾಯಣ್ ನೇತೃತ್ವದ ಬಿಜೆಪಿಯ ಸತ್ಯಶೋಧನಾ ಸಮಿತಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರರಿಗೆ ವರದಿಯನ್ನು ಸಲ್ಲಿಕೆ ಮಾಡಿದ್ದು ಇದೇ ವೇಳೆ, ಕೃತ್ಯದ ಹಿಂದೆ ನಿಷೇಧಿತ ಪಿಎಫ್ ಐ ಸಂಘಟನೆಯ ಕೈವಾಡವಿದ್ದು, ತನಿಖೆಯನ್ನು ಎನ್ಐಎಗೆ ವಹಿಸಬೇಕೆಂದು ಆಗ್ರಹಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಮಾಜಿ ಡಿಸಿಎಂ ಅಶ್ವತ್ ನಾರಾಯಣ ಈ ಗಲಭೆಗೆ ಪೊಲೀಸರ ವೈಫಲ್ಯವೇ ಕಾರಣ ಎಂಬ ಆರೋಪ ಮಾಡಿದ್ದಾರೆ ಸರ್ಕಾರ ಒಂದು ಕೋಮುವಿನ ಓಲೈಕೆ ತುಷ್ಟಿಕರಣದ ಸಲುವಾಗಿ ಪೊಲೀಸರ ಕೈಗಳನ್ನು ಕಟ್ಟಿ ಹಾಕಿದೆ ಹೀಗಾಗಿ ನಾಗಮಂಗಲದಲ್ಲಿ ಇಷ್ಟು ದೊಡ್ಡ ಗಲಭೆ ನಡೆದಿದೆ ಎಂದು ಹೇಳಿದ್ದಾರೆ.

## ಟಿಪ್ಪು ಸುಲ್ತಾನ್ ಒಬ್ಬ ಹರಾಮ ಕೋರ ಸೂ' ಮಗ!: ಯತ್ನಾಳ್

• **ಉದಯವಾಹಿನಿ, ವಿಜಯಪುರ**

ಟಿಪ್ಪು ಸುಲ್ತಾನ್ ಒಬ್ಬ ಹರಾಮಕೋರ ಸೂ' ಮಗ, ಲಕ್ಷಾಂತರ ಹಿಂದೂಗಳನ್ನು ಟಿಪ್ಪು ಸುಲ್ತಾನ್ ಕೊಲೆ ಮಾಡಿದ್ದಾನೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತೆ ನಾಲಿಗೆ ಹರಿಬಿಟ್ಟಿದ್ದಾರೆ. ಕೋರ್ಟ್ ಚಾಟಿ ಬೀಸಿದರೂ ಮತ್ತೆ ವಿಜಯಪುರದಲ್ಲಿ ವಿವಾದಿತ ಹೇಳಿಕೆ ನೀಡಿದ ಯತ್ನಾಳ್, ನನ್ನ ಮೇಲೆ ಎಷ್ಟು ಎಫ್ಐಆರ್ ಹಾಕ್ತೀರಿ? ನಮ್ಮ ಮೇಲೆ ಈಗಲೇ 36–37 ಕೇಸ್ ಇವೆ. ನನ್ನ ಮೇಲೆ ಮುಧೋಳದಲ್ಲೂ ನಾಲ್ಕೈದು ಕೇಸ್ ಹಾಕಿದ್ದೀರಿ. ಇದಕ್ಕೆಲ್ಲಾ ನಾವು ಅಂಜುವವರಲ್ಲ, ಹಿಂದೂಗಳೇನೂ ಷಂಡರಲ್ಲ ಎಂದಿದ್ದಾರೆ.

## ಅತ್ಯಾಚಾರ ಪ್ರಕರಣದಲ್ಲಿ ಶಾಸಕ ಮುನಿರತ್ನಗೆ ಜೈಲೇ ಗತಿ

• **ಉದಯವಾಹಿನಿ, ಬೆಂಗಳೂರು**

ಅತ್ಯಾಚಾರ ಪ್ರಕರಣದಲ್ಲಿ ಜಾಮೀನಿಗೆ ಅರ್ಜಿ ಸಲ್ಲಿಸಿದ್ದ ಶಾಸಕ ಮುನಿರತ್ನಗೆ ಕೋರ್ಟ್ ಶಾಕ್ ನೀಡಿದ್ದು, ಜಾಮೀನು ಅರ್ಜಿ ವಿಚಾರಣೆಯನ್ನು ಸೆಪ್ಟೆಂಬರ್ 23 ಕ್ಕೆ ಮುಂದೂಡಿದೆ. ಶಾಸಕ ಮುನಿರತ್ನ ಅವರು ಅತ್ಯಾಚಾರ ಪ್ರಕರಣದಲ್ಲಿ ಜಾಮೀನು ಅರ್ಜಿ ಸಲ್ಲಿಸಿದ್ದರು. ಇಂದು ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ಕೋರ್ಟ್ ಅರ್ಜಿ ವಿಚಾರಣೆ ನಡೆಸಿದ್ದು, ವಿಚಾರಣೆಯನ್ನು ಸೆಪ್ಟೆಂಬರ್ 23 ಕ್ಕೆ ಮುಂದೂಡಿದೆ. ಈ ಮೂಲಕ ಶಾಸಕ ಮುನಿರತ್ನಗೆ ಜೈಲೇ ಗತಿ ಆಗಿದೆ. 2020 ರಿಂದ 2022ರವರೆಗೆ ಶಾಸಕ ಮುನಿರತ್ನ ತನ್ನ ಮೇಲೆ ಅತ್ಯಾಚಾರ ಎಸಗಿದ್ದಾರೆ ಮತ್ತು ಬ್ಲ್ಯಾಕ್‌ಮೇಲ್ ಮಾಡಿದ್ದಾರೆ ಎಂದು ರಾಜರಾಜೇಶ್ವರಿ ನಗರದ 40 ವರ್ಷದ ಮಹಿಳೆ ದೂರು ದಾಖಲಿಸಿದ್ದಾರೆ.

## ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ: ಶೆಟ್ಟರ್

• **ಉದಯವಾಹಿನಿ, ಬೆಳಗಾವಿ**

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಕಾಂಗ್ರೆಸ್ ಸರಕಾರ ಬಂದ ನಂತರ ಕೋಮುಗಲಭೆಗಳು ಹೆಚ್ಚುತ್ತಿವೆ ಎಂದು ಬೆಳಗಾವಿಯಲ್ಲಿ ಸಂಸದ ಜಗದೀಶ್ ಶೆಟ್ಟರ್ ಹೇಳಿದರು. ಕಾಂಗ್ರೆಸ್ ಸರ್ಕಾರದ ಅಲ್ಪಸಂಖ್ಯಾತರ ತುಷ್ಟೀಕರಣ ನೀತಿಯಿಂದಾಗಿ ರಾಜ್ಯದಲ್ಲಿ ಪಾಕಿಸ್ತಾನ ಮತ್ತು ಪಾಲಿಸ್ತೈನ್ ಧ್ವಜಗಳು ಹಾರಾಡುತ್ತಿವೆ. ಗಲಭೆಗೆ ಕಾರಣರಾದವರು ಮತ್ತು ಕಲ್ಲುತೂರಾಟ ಮಾಡಿದವರ ರಕ್ಷಣೆಯನ್ನು ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದರು. ತಿರುಪತಿ ಲಾಡುವಿನಲ್ಲಿ ಪ್ರಾಣಿಕೊಬ್ಬು ಮಿಶ್ರಣ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇದು ಬಹಳ ಗಂಭೀರವಾದ ಆರೋಪ. ಇದರ ಬಗ್ಗೆ ಸಮಗ್ರ ತನಿಖೆ ಆಗಬೇಕು ಎಂದು ಒತ್ತಾಯಿಸಿದರು.

## ರಾಜ್ಯದ ಪವಿತ್ರ ಕ್ಷೇತ್ರಗಳ ಪ್ರಸಾದ ಪರೀಕ್ಷಿಸಬೇಕು: ಜೋಶಿ ಆಗ್ರಹ

• **ಉದಯವಾಹಿನಿ, ಹುಬ್ಬಳ್ಳಿ**

ತಿರುಪತಿ ಲಡ್ಡು ಪ್ರಕರಣದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಪವಿತ್ರ ಕ್ಷೇತ್ರಗಳಲ್ಲಿ ನೀಡುವ ಪ್ರಸಾದವನ್ನೂ ಪರೀಕ್ಷೆಗೆ ಒಳಪಡಿಸಲು ರಾಜ್ಯ ಸರ್ಕಾರ ಮುಂದಾಗಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಒತ್ತಾಯಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ 'ತಿರುಪತಿಯಲ್ಲಿ ಭಕ್ತರಿಗೆ ನೀಡುವ ಪ್ರಸಾದ ಪ್ರಕರಣದ ವಿಚಾರವಾಗಿ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರನ್ನು ಶಿಕ್ಷೆಗೆ ಒಳಪಡಿಸಬೇಕು. ತಿರುಪತಿಯಲ್ಲಿ ಲಾಡು ಪ್ರಸಾದಕ್ಕೆ ಪ್ರಾಣಿಗಳ ಕೊಬ್ಬು, ಮೀನು ಎಣ್ಣೆ ಬಳಕೆ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಪವಿತ್ರ ಕ್ಷೇತ್ರಗಳ ಪ್ರಸಾದಕ್ಕೆ ಬಳಸುವ ಪದಾರ್ಥಗಳನ್ನು ಪರೀಕ್ಷೆಗೆ ಒಳಪಡಿಸಬೇಕು' ಎಂದು ಒತ್ತಾಯಿಸಿದ್ದಾರೆ. ಆಂಧ್ರಪ್ರದೇಶದಲ್ಲಿ ಜಗಮೋಹನ್ ರೆಡ್ಡಿ ಸಿಎಂ ಆಗಿದ್ದಾಗ ತಿರುಪತಿಯಲ್ಲಿ ಪ್ರಸಾದಕ್ಕೆ ಜಾನುವಾರು ಕೊಬ್ಬು, ಮೀನು ಎಣ್ಣೆ ಬಳಸಿ ಹಿಂದೂ ವಿರೋಧಿ ಕ್ರಮಗಳಿಗೆ ಬೆಂಬಲವಾಗಿ ನಿಂತಿದ್ದರು. ಜಗನ್ ಮೋಹನ ರೆಡ್ಡಿ ಅವರು ಹಿಂದೂಯೇತರರನ್ನು ತಿರುಪತಿಯ ಟ್ರಸ್ಟ್ ಸದಸ್ಯರನ್ನಾಗಿ ನೇಮಕ ಮಾಡಿದ್ದರು. ಹಿಂದೂ ಧಾರ್ಮಿಕ ಟ್ರಸ್ಟ್‌ಗಳಿಗೆ ಹಿಂದೂಯೇತರರನ್ನು ಸದಸ್ಯರನ್ನಾಗಿ ನೇಮಕ ಮಾಡಬಾರದು' ಎಂದು ಸಚಿವ ಜೋಶಿ ಹೇಳಿಕೆ ನೀಡಿದ್ದಾರೆ.


● ತಿರುಪತಿ ಲಡ್ಡುನಲ್ಲಿ ಪ್ರಾಣಿಗಳ ಕೊಬ್ಬು ● ರಾಜಕೀಯ ಮಾಡಬೇಡಿ ಅಂದ್ರು ಜಗನ್ ರೆಡ್ಡಿ ● ನಂದಿನಿ ತುಪ್ಪವನ್ನೇ ಬಳಸುವಂತೆ ದೇವಸ್ಥಾನಗಳಿಗೆ ರಾಜ್ಯ ಸರ್ಕಾರ ಸೂಚನೆ

# ತಿರುಪತಿಗೇ ಲಡ್ಡಾ... ತಿಂದಿದ್ದೇನು ಕೊಬ್ಬಾ...





### ಸಿಬಿಐ ತನಿಖೆಗೆ ಆಗ್ರಹಿಸಿದ ಜಗನ್ ರೆಡ್ಡಿ ಸಹೋದರಿ ಶರ್ಮಿಳಾ



ತಿರುಪತಿ ಲಡ್ಡು ತಯಾರಿಸಲು ಬಳಸಿದ ತುಪ್ಪದಲ್ಲಿ ನಿಜವಾಗಿ ಪ್ರಾಣಿಗಳ ಕೊಬ್ಬು ಬಳಸಲಾಗುತ್ತಿದೆಯೇ ಎಂದು ತಿಳಿಯಲು ಕೂಡಲೇ ಸಿಬಿಐ ತನಿಖೆಗೆ ಆದೇಶಿಸುವಂತೆ ಒತ್ತಾಯಿಸಿ ಆಂಧ್ರಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷೆ ವೈ.ಎಸ್. ಶರ್ಮಿಳಾ ಅವರು ಕೇಂದ್ರ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದಿದ್ದಾರೆ. ಬುಧವಾರ ನಡೆದ ಎನ್‌ಡಿಎ ಸಭೆಯಲ್ಲಿ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ವೈಎಸ್‌ಆರ್‌ಪಿ ಆಡಳಿತವು ತಿರುಪತಿ ಲಡ್ಡುಗಳನ್ನು ತಯಾರಿಸಲು ಪ್ರಾಣಿಗಳ ಕೊಬ್ಬನ್ನು ಬಳಸಿದೆ ಎಂದು ಪ್ರತಿಪಾದಿಸುವ ಮೂಲಕ ವಿವಾದವನ್ನು ಹುಟ್ಟು ಹಾಕಿದರು. ತಿರುಪತಿ ಲಡ್ಡು ಪ್ರಸಾದ ತಯಾರಿಸಲು ಬಳಸಿದ ತುಪ್ಪದಲ್ಲಿ ದನ ಹಾಗೂ ಹಂದಿ ಮಾಂಸದ ಕೊಬ್ಬು, ಮೀನಿನ ಎಣ್ಣೆ ಅಲ್ಲದೆ ಪಾಮ್ ಆಯಿಲ್, ಸೂರ್ಯಕಾಂತಿ ಮತ್ತು ಸೋಯಾಬೀನ್ ಮುಂತಾದ ಅಂಶಗಳು ಇರುವುದು ಲ್ಯಾಬ್ ಪರೀಕ್ಷೆಯಿಂದ ಬಹಿರಂಗವಾಗಿದೆ. ಆಂಧ್ರ ಸಿಎಂ ಹೇಳಿಕೆಯಿಂದ ತಿರುಪತಿಯ ಕೋಟ್ಯಂತರ ಭಕ್ತರ ಭಾವನೆಗೆ ಘಾಸಿಯಾಗಿದೆ. ಹಾಗಾಗಿ ಆಂಧ್ರ ಸರ್ಕಾರ ಕೂಡಲೇ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಲಿ ಎಂದು ರಾಜ್ಯ ಕಾಂಗ್ರೆಸ್ ಘಟಕದ ಅಧ್ಯಕ್ಷೆ ವೈಎಸ್ ಶರ್ಮಿಳಾ ಆಗ್ರಹಿಸಿದ್ದಾರೆ.

• **ಉದಯವಾಹಿನಿ, ಬೆಂಗಳೂರು**

ತಿರುಪತಿ ಲಡ್ಡು ಭಾರೀ ವಿವಾದಕ್ಕೆ ಕಾರಣವಾದ ಬೆನ್ನಲ್ಲೇ ಎಚ್ಚೆತ್ತುಕೊಂಡ ರಾಜ್ಯ ಸರ್ಕಾರ ಶುಕ್ರವಾರ ಈ ಸಂಬಂಧ ಸುತ್ತೋಲೆ ಹೊರಡಿಸಿದ್ದು, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ದತ್ತಿ ಇಲಾಖೆಗೆ ಒಳಪಡುವ ಎಲ್ಲಾ ದೇವಾಲಯಗಳಲ್ಲಿ ತಯಾರಿಸುವ ಪ್ರಸಾದದಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಸೂಚನೆ ನೀಡಿದೆ. ದೇವಸ್ಥಾನಗಳಲ್ಲಿ ಕರ್ನಾಟಕ ಹಾಲು ಒಕ್ಕೂಟದ(ಕೆಎಂಎಫ್) ನಂದಿನಿ ಬ್ರ್ಯಾಂಡ್ ತುಪ್ಪವನ್ನು ಮಾತ್ರ ಬಳಸುವಂತೆ ದೇವಸ್ಥಾನಗಳಿಗೆ ರಾಜ್ಯ ಸರ್ಕಾರ ಸೂಚಿಸಿದೆ. ಕರ್ನಾಟಕ ರಾಜ್ಯ ಧಾರ್ಮಿಕ ದತ್ತಿ ಇಲಾಖೆಯ ಅಡಿಯಲ್ಲಿ ಬರುವ ಎಲ್ಲಾ ಅಧಿಸೂಚಿತ ದೇವಾಲಯಗಳಲ್ಲಿ 'ಸೇವೆ' (ಸೇವೆಗಳು), ದೀಪಗಳು, ಎಲ್ಲಾ ರೀತಿಯ ಪ್ರಸಾದಗಳ ತಯಾರಿಕೆ ಮತ್ತು 'ದಾಸೋಹ ಭವನ'ಗಳಲ್ಲಿ ಹೋಮ್ ಬ್ರ್ಯಾಂಡ್ ನಂದಿನಿ ತುಪ್ಪವನ್ನು ಕಡ್ಡಾಯವಾಗಿ ಬಳಸಬೇಕೆಂದು ಆದೇಶಿಸಲಾಗಿದೆ. ದೇವಸ್ಥಾನಗಳಲ್ಲಿ ಪ್ರಸಾದದಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಸೂಚನೆ ನೀಡಲಾಗಿದೆ ಎಂದು ಸುತ್ತೋಲೆ ತಿಳಿಸಿದೆ.

ವಿಶ್ವವಿಖ್ಯಾತ ತಿರುಪತಿ ಲಡ್ಡು ತಯಾರಿಕೆಯಲ್ಲಿ ಗುಣಮಟ್ಟವಿಲ್ಲದ ಪದಾರ್ಥಗಳು ಮತ್ತು ಪ್ರಾಣಿಗಳ ಕೊಬ್ಬನ್ನು ಬಳಸಲಾಗುತ್ತಿದೆ ಎಂದು ಸ್ವತಃ ಆಂಧ್ರ ಪ್ರದೇಶ ಮುಖ್ಯಮಂತ್ರಿ ಆರೋಪಿಸಿದ ಬೆನ್ನಲ್ಲೇ, ತಿರುಪತಿ ಲಡ್ಡುವಿನಲ್ಲಿ ದನದ ಕೊಬ್ಬು, ಮೀನಿನ ಎಣ್ಣೆ ಬಳಸಿರುವುದು ಲ್ಯಾಬ್ ವರದಿಯಲ್ಲಿ ದೃಢಪಟ್ಟಿದೆ.

ಇತಿಹಾಸ ಪ್ರಸಿದ್ಧ ತಿರುಪತಿ ಲಡ್ಡು ತಯಾರಿಕೆಯಲ್ಲಿ ಗುಣಮಟ್ಟವಿಲ್ಲದ ಪದಾರ್ಥಗಳು ಮತ್ತು ಪ್ರಾಣಿಗಳ ಕೊಬ್ಬನ್ನು ಬಳಸಲಾಗುತ್ತಿದೆ ಎಂದು ಸ್ವತಃ ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರನಾಯ್ಡು ಆರೋಪಿಸಿದ ಬೆನ್ನಲ್ಲೇ, ತಿರುಪತಿ ಲಡ್ಡುವಿನಲ್ಲಿ ದನದ ಕೊಬ್ಬು, ಮೀನಿನ ಎಣ್ಣೆ ಬಳಸಿರುವುದು ಲ್ಯಾಬ್ ವರದಿಯಲ್ಲಿ ದೃಢಪಟ್ಟಿದ್ದು ತುಪ್ಪದ ಗುಣಮಟ್ಟವನ್ನು ಪರೀಕ್ಷಿಸಲು ದೇವಸ್ಥಾನದ ಆಡಳಿತ ಸಮಿತಿಯೊಂದನ್ನು ಸ್ಥಾಪಿಸಿದೆ.

ಡಾ.ಸುರೇಂದ್ರನಾಥ್, ಡಾ.ವಿಜಯ್ ಭಾಸ್ಕರ್ ರೆಡ್ಡಿ, ಡಾ.ಸ್ವರ್ಣಲತಾ ಮತ್ತು ಡಾ.ಮಹದೇವನ್ ಅವರನ್ನೊಳಗೊಂಡ ನಾಲ್ಕು ತಜ್ಞರ ಸಮಿತಿ ರಚಿಸಲಾಗಿದ್ದು, ಒಂದು ವಾರದೊಳಗೆ ವರದಿ ಸಲ್ಲಿಸುವ ನಿರೀಕ್ಷೆಯಿದೆ ಎಂದು ತಿರುಮಲ ತಿರುಪತಿ ದೇವಸ್ಥಾನದ (ಟಿಟಿಡಿ) ಕಾರ್ಯನಿರ್ವಾಹಕ ಅಧಿಕಾರಿ ಜೆ.ಶ್ಯಾಮಲಾ ರಾವ್ ತಿಳಿಸಿದ್ದಾರೆ. ಟೆಂಡರ್‌ಗಳಲ್ಲಿ ಗುಣಮಟ್ಟದ ತುಪ್ಪ ಖರೀದಿಸಲು ಸೇರಿಸಬೇಕಾದ ನಿಯಮಗಳು ಮತ್ತು ಷರತ್ತುಗಳ ಬಗ್ಗೆ ಸಮಿತಿಯು ಸಲಹೆ ನೀಡಲಿದೆ ಎಂದು ಅವರು ಹೇಳಿದರು.

ಗುತ್ತಿಗೆದಾರರು ಕಲಬೆರಕೆ ಮತ್ತು ಕಡಿಮೆ ಗುಣಮಟ್ಟದ ತುಪ್ಪವನ್ನು ಸರಬರಾಜು ಮಾಡಿದರೆ ಕಠಿಣ ಕ್ರಮದ ಎಚ್ಚರಿಕೆಯನ್ನೂ ನೀಡಲಾಗಿದೆ. ಯಾವುದೇ ಕಲಬೆರಕೆ ಪರೀಕ್ಷಾ ಸಾಧನಗಳಿಲ್ಲದ ಕಾರಣ ಸಂಗ್ರಹಣೆಯ ಮೂಲಕ ಕಚ್ಚಾವಸ್ತುಗಳು ಮತ್ತು ತುಪ್ಪವನ್ನು ಸಂಸ್ಕರಿಸುವ ವ್ಯವಸ್ಥೆಗಳಲ್ಲಿ ಮಿತಿಗಳು ಮತ್ತು ನಿರ್ಬಂಧಗಳಿವೆ ಎಂದು ಒಪ್ಪಿಕೊಂಡಿದ್ದರು.

**ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ ಪ್ರಕರಣ!**

ಇದೀಗ ತಿರುಪತಿ ಲಡ್ಡುನಲ್ಲಿ ಪ್ರಾಣಿಗಳ ಕೊಬ್ಬು ಬಳಕೆ ಮಾಡಲಾಗಿದೆ ಅನ್ನೋ ವಿಚಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ. ಈ ವಿಚಾರದಲ್ಲಿ ಸಂವಿಧಾನದ ಆರ್ಟಿಕಲ್ 25 ಉಲ್ಲಂಘನೆಯಾಗಿದೆ ಎಂದು ಅರ್ಜಿಯಲ್ಲಿ ಆಪಾದನೆ ಮಾಡಲಾಗಿದೆ. ಈ ಆರ್ಟಿಕಲ್ ಅಡಿ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಉಲ್ಲಂಘನೆಯಾಗಿದೆ ಎಂದು ವಾದಿಸಲಾಗಿದೆ. ಇನ್ನು ಈ ಕುರಿತಾಗಿ ಆರೋಗ್ಯ ಸಚಿವಾಲಯ ಕೂಡಾ ಸಮಗ್ರ ವರದಿ ಕೇಳಿದೆ.

### ಆಂಧ್ರ ಸರ್ಕಾರದಿಂದ ವಿಸ್ತೃತ ವರದಿ ಕೇಳಿದ ಕೇಂದ್ರ

ತಿರುಮಲ ಲಡ್ಡು ಪ್ರಸಾದದಲ್ಲಿ ಕಲಬೆರಕೆ ಮಾಡುತ್ತಿರುವ ಬಗ್ಗೆ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ್ದು, ಆಂಧ್ರಪ್ರದೇಶ ಸರ್ಕಾರದಿಂದ ವಿಸ್ತೃತ ವರದಿ ಕೇಳಿರುವುದಾಗಿ ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ತಿಳಿಸಿದರು. ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ



ಪ್ರಾಧಿಕಾರ (ಎಫ್‌ಎಸ್‌ಎಸ್‌ಎಐ) ವರದಿಯನ್ನು ಪರಿಶೀಲಿಸಿ ಸಂಪೂರ್ಣ ತನಿಖೆ ನಡೆಸಲಿದೆ. ಬಳಿಕ ಆಹಾರ ಸುರಕ್ಷತಾ ಮಾನದಂಡಗಳ ಪ್ರಕಾರ ಸೂಕ್ತ ಕ್ರಮಕೈಗೊಳ್ಳಲಾಗುತ್ತದೆ ಎಂದು ಹೇಳಿದರು. ಬುಧವಾರ ನಡೆದ ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯಲ್ಲಿ ಹಿಂದಿನ ವೈಎಸ್ ಜಗನ್ ಮೋಹನ್ ರೆಡ್ಡಿ ನೇತೃತ್ವದ ಸರ್ಕಾರವು ತಿರುಪತಿ ದೇವಸ್ಥಾನವನ್ನು ಸಹ ಬಿಡಲಿಲ್ಲ ಎಂದು ನಾಯ್ಡು ಹೇಳಿದ್ದಾರೆ. ಲ್ಯಾಬ್ ವರದಿಗಳನ್ನು ತಿರುಮಲ ತಿರುಪತಿ ದೇವಸ್ಥಾನ (ಟಿಟಿಡಿ) ನೀಡಿದೆ. ಅದರಲ್ಲಿ ನೀಡಲಾದ ತುಪ್ಪದ ಮಾದರಿಯಲ್ಲಿ ಬೀಫ್ ಟ್ಯಾಲೋ, ಮೀನಿನ ಎಣ್ಣೆ ಇರುವುದು ದೃಢಪಟ್ಟಿದೆ ಎಂದು ವರದಿಯಾಗಿದೆ. ತುಪ್ಪದ ಮಾದರಿಗಳನ್ನು 2024 ಜುಲೈ 9 ರಂದು ತೆಗೆದುಕೊಳ್ಳಲಾಗಿದ್ದು, ಜುಲೈ 16ರಂದು ವರದಿ ಹೊರಬಂದಿದೆ ಎಂದು ಟಿಡಿಪಿ ವಕ್ತಾರರು ಹೇಳಿದ್ದಾರೆ.

**ವೈಎಸ್‌ಆರ್‌ಪಿ ಟಿಡಿಪಿ ಲಡ್ಡು ಲಡಾಯಿ**

## ಕುಮಾರಸ್ವಾಮಿ ಹಿಟ್ &ರನ್ ಗಿರಾಕಿ ಇದ್ದಂತೆ: ಸಿಎಂ

• **ಉದಯವಾಹಿನಿ, ಮೈಸೂರು**

ಕುಮಾರಸ್ವಾಮಿಯವರು ಹಿಟ್ ರನ್ ಗಿರಾಕಿ, ಅವರು ತಮ್ಮ ಯಾವ ಆರೋಪಕ್ಕೂ ತಾರ್ಕಿಕ ಅಂತ್ಯ ಕಾಣಿಸುವುದಿಲ್ಲ ಸಿಎಂ ಸಿದ್ದರಾಮಯ್ಯ ಟೀಕಿಸಿದ್ದಾರೆ.

ಹೆಚ್.ಡಿ.ಕುಮಾರಸ್ವಾಮಿ ವಿರುದ್ಧದ ಡಿನೋಟಿಫಿಕೇಷನ್ ಆರೋಪ ಪ್ರಕರಣ ಬಹಳ ಗಂಭೀರವಾಗಿದ್ದು, ಈ ಸಂಬಂಧ ನಿನ್ನೆ ಸಚಿವರು ದಾಖಲೆಗಳನ್ನ ಬಿಡುಗಡೆ ಮಾಡಿದ್ದು, ಈ ಬಗ್ಗೆ ಪರಿಶೀಲನೆ ಮಾಡುವುದಾಗಿ ಸಿಎಂ ತಿಳಿಸಿದ್ದಾರೆ. ಕುಮಾರಸ್ವಾಮಿ ಹಾಗೂ ಯಡಿಯೂರಪ್ಪರವರ ವಿರುದ್ಧದ ಡಿನೋಟಿಫಿಕೇಷನ್ ಪ್ರಕರಣದಲ್ಲಿ ತನಿಖೆಗೆ ಆದೇಶವಾಗಿದೆ. ಆದರೆ 2021 ಲೋಕಾಯುಕ್ತದವರು ತನಿಖೆ ಮಾಡಿಲ್ಲ, ನಿನ್ನೆ ದಿನೇಶ್ ಗುಂಡೂರಾವ್, ಕೃಷ್ಣಬೈರೇಗೌಡ, ಸಂತೋಷ್ ಲಾಡ್ ಸೇರಿದಂತೆ ನಮ್ಮ ಸಚಿವರು ದಾಖಲೆಗಳನ್ನು ಬಿಡುಗಡೆ ಮಾಡಿದ್ದಾರೆ. ಡಿನೋಟಿಫೈ ಪ್ರಕರಣದ ಜಮೀನು ಬಹಳ ಬೆಲೆಬಾಳುವಂಥದ್ದಾಗಿದ್ದು, ಕುಮಾರಸ್ವಾಮಿಯವರು ತಮ್ಮ ಸಂಬಂಧಿಕರಿಗೆ ಅದರಲ್ಲೂ ಬಾಮೈದನಿಗೆ ಮಾತ್ರ ಅಲ್ಲ ಅತ್ತೆಗೆ ಡಿನೋಟಿಫೈ ಮಾಡಿ, ಜಿಪಿಓ ಆಗಿದೆ ಎಂಬ ಮಾಹಿತಿ ಇದೆ. ಅಧಿಕಾರಿಗಳು ಈ ಕ್ರಮವನ್ನು ಕಾನೂನಾತ್ಮಕವಲ್ಲವೆಂದರೂ ಈ ರೀತಿ ಮಾಡಿದ್ದಾರೆ. ಇದಕ್ಕೆ ಸಂಬಂಧಿಸಿದ ಮಾಹಿತಿಗಳನ್ನು ಪಡೆದು ಪರಿಶೀಲನೆ ನಡೆಸಲಾಗುವುದು. ವಿಪಕ್ಷಗಳು ಗಾಜಿನ ಮನೆಯಲ್ಲಿ ಕುಳಿತು ಸರ್ಕಾರದ ಮೇಲೆ ಆರೋಪ ಹೊರಸುತ್ತಿವೆ. ನಾವು ಯಾರ ಮೇಲೆಯೂ ಆರೋಪ ಹೊರಿಸುವ ಕೆಲಸವನ್ನು ಮಾಡುತ್ತಿಲ್ಲ ಎಂದು ಹೇಳಿದ್ದಾರೆ.

**ಪ್ರಕರಣ ಬಹಳ ಗಂಭೀರ**

**ಎಸ್‌ಐಟಿ ರಚನೆಗೆ ಕ್ರಮ**

ಜೀವಬೆದರಿಕೆ, ಜಾತಿನಿಂದನೆ, ಅತ್ಯಾಚಾರ ಹಾಗೂ ಬ್ಲಾಕ್ ಮೇಲ್ ಪ್ರಕರಣಕ್ಕೆ ಸಂಬಂಧಪಟ್ಟಂತೆ ಜೈಲು ಪಾಲಾಗಿರುವ ಬಿಜೆಪಿ ಶಾಸಕ ಮುನಿರತ್ನರವರ ಪ್ರಕರಣದ ಬಗ್ಗೆ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯಿಸಿದ್ದಾರೆ . ಶಾಸಕ ಮುನಿರತ್ನ ಮೇಲೆ ಬಹಳಷ್ಟು ಗಂಭೀರ ಪ್ರಕರಣಗಳು ಇದೆ. ಹೀಗಾಗಿ ವಿಶೇಷ ತನಿಖಾ ತಂಡದ ಅಗತ್ಯ ಇದೆ ಎಂದು ಕೇಳಿದ್ದಾರೆ ಸದ್ಯದಲ್ಲೆ ಗೃಹ ಸಚಿವರು ಕ್ರಮ ಕೈಗೊಳ್ಳುತ್ತಾರೆ ಎಂದರು.

ಶಾಸಕ ಮುನಿರತ್ನ ವಿರುದ್ಧ ಎಸ್‌ಐಟಿ ತನಿಖೆ ಮಾಡಲು ಸಚಿವರು ಶಾಸಕರೇ ಖುದ್ದು ಪತ್ರ ಕೊಟ್ಟಿದ್ದಾರೆ. ಪತ್ರ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಿ ಎಂದು ಗೃಹ ಸಚಿವ ಪರಮೇಶ್ವರ್ ಗೆ ತಿಳಿಸಿದ್ದೇನೆ. ಈ ಬಗ್ಗೆ ಗೃಹ ಸಚಿವರು ಪರಿಶೀಲಿಸಿ ಕ್ರಮ ಕೈಗೊಳ್ಳುತ್ತಾರೆ ಎಂದರು.



### ಪೊಲೀಸ್ ಕಾನ್ಸ್ಟೇಬಲ್ ಹುದ್ದೆಗಳ ವಯೋಮಿತಿ 27 ರಿಂದ 33 ವರ್ಷಕ್ಕೆ

ಪೊಲೀಸ ಕಾನ್ಸ್ಟೇಬಲ್ ಹುದ್ದೆಗಳ ವಯೋಮಿತಿ 27 ರಿಂದ 33 ವರ್ಷಕ್ಕೆ ಏರಿಕೆ ಮಾಡಲಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ಮೈಸೂರಿನ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಮರು ಪರೀಕ್ಷೆಯನ್ನು ಆದಷ್ಟು ಶೀಘ್ರದಲ್ಲಿಯೇ ಏರ್ಪಡಿಸುವಂತೆ ಕೆ.ಪಿ.ಎಸ್.ಸಿ ಗೆ ಸೂಚಿಸಲಾಗಿದೆ. ಕಾನ್ಸ್ಟೇಬಲ್ ಹುದ್ದೆಗಳಿಗೆ ವಯೋಮಿತಿಯನ್ನು 27 ರಿಂದ 33 ವರ್ಷಕ್ಕೆ ಏರಿಸಬೇಕೆಂಬ ಬೇಡಿಕೆ ಇದ್ದು, ಒಂದು ಬಾರಿಯ ತೀರ್ಮಾನ ಕೈಗೊಳ್ಳುವಂತೆ ಗೃಹ ಸಚಿವರಿಗೆ ತಿಳಿಸಿದ್ದೇನೆ.

## ವಿಶೇಷ ತನಿಖಾ ತಂಡಕ್ಕೆ ಡಿ.ಕೆ.ಸುರೇಶ್‌ರನ್ನು ಮುಖ್ಯಸ್ಥರನ್ನಾಗಿ ಮಾಡಿ

### ಈ ಪ್ರಕರಣದಲ್ಲಿ ಬಿಜೆಪಿಗೆ ಯಾವುದೇ ಮುಜುಗರ ಇಲ್ಲ. ನಮಗೆ ಸತ್ಯಸತ್ಯತೆ ಹೊರಬರಬೇಕು ಎಂಬುದು ಒತ್ತಾಯ

• **ಉದಯವಾಹಿನಿ, ಬೆಂಗಳೂರು**

ಶಾಸಕ ಮುನಿರತ್ನ ಪ್ರಕರಣ ಕುರಿತಂತೆ ಸಿಎಂ ಸಿದ್ದರಾಮಯ್ಯನವರು ಸುತ್ತಿ ಬಳಸಿ ಮಾತನಾಡುವ ಬದಲು ವಿಶೇಷ ತನಿಖಾ ತಂಡ(ಎಸ್ಐಟಿ) ರಚಿಸಿ ಅದಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಸಂಸದ ಡಿ.ಕೆ.ಸುರೇಶ್ ಅವರನ್ನು ಮುಖ್ಯಸ್ಥರನ್ನಾಗಿ ಮಾಡಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವ್ಯಂಗ್ಯವಾಡಿದ್ದಾರೆ.

ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಈ ಪ್ರಕರಣದಲ್ಲಿ ಬಿಜೆಪಿಗೆ ಯಾವುದೇ ಮುಜುಗರ ಇಲ್ಲ. ನಮಗೆ ಸತ್ಯಸತ್ಯತೆ ಹೊರಬರಬೇಕು ಎಂಬುದು ಒತ್ತಾಯವಾಗಿದೆ. ಸಿಎಂ ಅವರು ಇದನ್ನು ಸುತ್ತಿಬಳಸಿ ಯಾರ್ಯಾರಿಗೊ ತಲೆ ಕಟ್ಟಲು ಮುಂದಾಗಿದ್ದಾರೆ. ಅವರಿಗೆ ನನ್ನ ಮನವಿ ಏನೆಂದರೆ ಎಸ್ಐಟಿಗೆ ಡಿ.ಕೆ.ಶಿವಕುಮಾರ್ ಮತ್ತು ಡಿ.ಕೆ.ಸುರೇಶ್ ಅವರನ್ನು ಅಧ್ಯಕ್ಷರನ್ನಾಗಿ ಮಾಡಿದರೆ ನಿಷ್ಪಕ್ಷಪಾತ ತನಿಖೆ ನಡೆಸಲು ಸಾಧ್ಯ ಎಂದು ಕುಹುಕವಾಡಿದರು.

ಎಲುಬಿಲ್ಲದ ನಾಲಿಗೆ ಏನೇನೊ ಹೇಳಬಹುದು. ಇದು 2020ರಲ್ಲಿ ಘಟನೆ ನಡೆದಿದೆ ಎನ್ನುತ್ತಾರೆ. 2024ರಲ್ಲಿ ಏಕೆ ಹೊರಬಂದಿತು? ಲೋಕಸಭೆ ಚುನಾವಣೆ ಸೋಲು ಕೆಲವರಿಗೆ ತಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಸೇಡಿನ ರಾಜಕಾರಣ ಮಾಡಲು ಹೊರಟಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

**ಪೊಲೀಸ್ ವ್ಯವಸ್ಥೆ ಇದೆಯೇ ಎಂಬ ಅನುಮಾನ**

ರಾಜ್ಯದಲ್ಲಿ ನಡೆಯುತ್ತಿರುವ ಸಾಲು ಸಾಲು ಕೋಮುಗಲಭೆಗಳನ್ನು ಅವಲೋಕಿಸಿದರೆ ಇಲ್ಲೊಂದು ಚುನಾಯಿತ ಸರ್ಕಾರ ಹಾಗೂ ಪೊಲೀಸ್ ವ್ಯವಸ್ಥೆ ಇದೆಯೇ ಎಂಬ ಅನುಮಾನ ಜನತೆಗೆ ಮೂಡಿದೆ ಎಂದು ಅವರು ಸಂಶಯ ವ್ಯಕ್ತಪಡಿಸಿದ್ದಾರೆ. ನಾಗಮಂಗಲದಲ್ಲಿ ಹಿಂದೂ ಯುವಕರು ಗಣೇಶ ವಿಸರ್ಜನೆ ಸಮಯದಲ್ಲಿ ಏಕಾಏಕಿ ದಾಳಿ ಮಾಡಿದ ಕೋಮಿನ ಜನರು ದೇಶದ್ರೋಹಿಗಳು , ಕತ್ತಿ, ತಲ್ವಾರ್ ತೆಗೆದುಕೊಂಡು ಪೆಟ್ರೋಲ್ ಬಾಂಬ್ ಎಸೆದಿದ್ದಾರೆ. ಹಿಂದು ಅಂಗಡಿಗಳ ಮೇಲೆ ಹಾರೆ ಹಾಕಿ ದಾಳಿ ಮಾಡಿ ಬೆಂಕಿ ಹಾಕಿದ್ದಾರೆ ಎಂದು ಉಲ್ಲೇಖಿಸಿದರು.

ಪೊಲೀಸರ ಕಣ್ಣೆದುರೇ ನಡೆದಿರುವ ದುರ್ಘಟನೆ ಇದು. ಘಟನೆ ನಡೆದ ಮಾರನೆಯ ದಿನ ನಾಗಮಂಗಲಕ್ಕೆ ಭೇಟಿ ನೀಡಿದ್ದೇವೆ. ಅಲ್ಲಿರುವವರನ್ನ ಭೇಟಿ ಮಾಡಿದ್ದೇವೆ. ಶಾಸಕ ಡಾ ಅಶ್ವತ್ ನಾರಾಯಣ್ ನೇತೃತ್ವದಲ್ಲಿ ಸತ್ಯ ಶೋಧನ ಸಮಿತಿಯನ್ನು ಕಳಹಿಸಲಾಗಿದೆ. ಅಲ್ಲಿ ಎಲ್ಲಾರನ್ನು ಭೇಟಿ ಮಾಡಿ ಸತ್ಯಾಸತ್ಯತೆ ಅರ್ಥ ಮಾಡಿಕೊಂಡು ವ್ಯವಸ್ಥಿತ ಪಿತೂರಿಯ ಬಗ್ಗೆ ವರದಿ ಕೊಟ್ಟಿದ್ದಾರೆ ಎಂದರು.



### ಪೊಲೀಸ್ ವ್ಯವಸ್ಥೆ ಇದೆ ಎಂಬುದೇ ಅನುಮಾನವಾಗಿದೆ

ಸಂಘದ ಕಾರ್ಯಾಲಯಕ್ಕೆ ನುಗ್ಗುತ್ತಾರೆ, ದಾವಣಗೆರೆಯಲ್ಲಿ ಶಾಂತಿಯುತವಾಗಿ ಗಣೇಶ ವಿಸರ್ಜನೆ ವೇಳೆ ಹಿಂದೂಗಳ ಮೇಲೆ ದಾಳಿಯಾಗಿದೆ, ಪೊಲೀಸ್ ಅಧಿಕಾರಿಗಳಿಗೂ ಕಲ್ಲು ಪೆಟ್ಟು ಬಿದ್ದಿದೆ. ಇದನ್ನ ಅವಲೋಕನ ಮಾಡಿದರೆ ರಾಜ್ಯದಲ್ಲಿ ಚುನಾಯಿತ ಸರ್ಕಾರ , ಪೊಲೀಸ್ ವ್ಯವಸ್ಥೆ ಇದೆ ಎಂಬುದೇ ಅನುಮಾನವಾಗಿದೆ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಇದೆ. ಗೃಹ ಸಚಿವ ಪರಮೇಶ್ವರ್ ಇದ್ದಾರೆ. ಏನೆ ಗಲಭೆ ಆದರೂ ಸರ್ಕಾರ ಕೈಕಟ್ಟಿ ಇರುತ್ತದೆ ಎಂಬುದು ದೇಶದ್ರೋಹಿಗಳಿಗೆ ಭಾವನೆ ಬಂದಿದೆ. ಕಾಂಗ್ರೆಸ್ ಸರ್ಕಾರ ಮೃದು ಧೋರಣೆ ಅನುಸರಿಸುತ್ತದೆ. ಇದರ ಪರಿಣಾಮ ಶಾಂತಿ ವ್ಯವಸ್ಥೆ ಕದಡುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಹಿಂದುಗಳ ಮೇಲೆ ದಾಳಿ ಆಗುತ್ತಿದೆ. ಪೊಲೀಸರು ಕಣ್ಮುಚ್ಚಿ ಕುಳಿತ್ತಿದ್ದಾರೆ. ಅವರಿಗೆ ಅಧಿಕಾರ ಇಲ್ಲವೇ? ಅಲ್ಪಸಂಖ್ಯಾತರಿಂದಲೆ ಕಾಂಗ್ರೆಸ್ ಸರ್ಕಾರ ಬಂದಿದೆ ಎಂದು ಭಾವನೆಯಲ್ಲಿದ್ದಾರೆ. ಬಿಜೆಪಿ ಇದನ್ನ ಗಂಭೀರವಾಗಿ ತೆಗೆದುಕೊಂಡಿದೆ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,511/Gram24ct ₹6,885/Gram22ct ಬೆಳ್ಳಿ: ₹92.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಶಿವಲಿಂಗದ ಮೇಲೆ ಪಾದ: ಖಂಡನೆ

ಈ ಸಪ್ಟೆಂಬರ್ ಏಳರಂದು ಶಿವಲಿಂಗದ ಮೇಲೆ ಪಾದವಿಟ್ಟು ಪೂಜೆ ಮಾಡಿಸಿಕೊಂಡಿದ್ದನ್ನು ದಿಗ್ಗಾಂವದ ಸಿದ್ಧವೀರ ಶಿವಾಚಾರ್ಯರು ಮಹಾಂತೇಶ ಶಾಸ್ತ್ರಿಯ ವೀರಶೈವ ನವರತ್ನ ಹಾಗೂ ಚೆನ್ನವೀರಶಾಸ್ತ್ರಿಯ ವೀರಶೈವ ದಶರತ್ನ ಪೂಜಾವಿಧಾನ ಪುಸ್ತಕ ಪುರಾವೆ ನೀಡಿ ಸಮರ್ಥಿಸಿಕೊಂಡಿದ್ದು ನಾಚಿಕೆಗೇಡು. ಜಗತ್ತು ಭಾವನಾತ್ಮಕ. ಯದ್ಭಾವಂ ತದ್ಭವತಿ=ಅಂದುಕೊಂಡಂತೆ ನಡೆಯುವುದು. ಆದರೆ ನಮ್ಮ ಯಾವುದೇ ಭಾವನೆ ಬಹುಸಂಖ್ಯಾತರ ಸದ್ಭಾವನೆಗೆ ಧಕ್ಕೆ ತರಬಾರದು. ಯದ್ಯಪಿ ಶುದ್ಧಂ ಲೋಕವಿರುದ್ಧಂ ನಾಚರಣೀಯಂ = ಸರಿಯಾಗಿಯೇ ಇದ್ದರೂ ಸಮಾಜವಿರೋಧಿ ಎನಿಸಿದರೆ ಆಚರಿಸಬಾರದು ಎಂಬ ಆದಿಶಂಕರಾಚಾರ್ಯರ ಮಾತು ಮನನೀಯ. ಬ್ರಾಹ್ಮಣರಿಗೆ ತಾವೇನು ಕಡಿಮೆ! ಎಂಬ ಹೆಚ್ಚುಗಾರಿಕೆಗೋ ಏನೋ ವೀರಶೈವ ಧಾರ್ಮಿಕ ವಿಧಿ ವಿಧಾನಗಳಲ್ಲಿ ಹಾಗೆ ಹೇಳಿರಬಹುದು, ತಿಳಿದಿಲ್ಲ. ಆದರೆ ಆಸ್ಥಾನ ವಿದ್ವಾನ್ ಎಂ. ಜಿ. ನಂಜುಂಡಾರಾಧ್ಯರು ಸಂಪಾದಿಸಿದ ವೀರಶೈವ ಪೂರ್ವ ಪ್ರಯೋಗರತ್ನದಲ್ಲಿ ಹಾಗಿಲ್ಲ. ಇಲ್ಲಿ ನಲವತ್ನಾಲ್ಕನೇ ಪುಟದಿಂದ ಐವತ್ತಾರನೇ ಪುಟದವರೆಗೂ ಶಿವಲಿಂಗಸಂಸ್ಕಾರ, ಪ್ರಾಣಪ್ರತಿಷ್ಠಾಪನೆ ಹೇಳಲಾಗಿದೆ. ಪಾದವನ್ನು ಶಿವಲಿಂಗದ ಮೇಲಿಟ್ಟು ಪೂಜಿಸಬೇಕೆಂದು ಎಲ್ಲೂ ಹೇಳಿಲ್ಲ. ಶಿವಲಿಂಗವನ್ನು ಬಲಗೈಯಿಂದ ಮುಟ್ಟಿ ಶುದ್ಧೋದಕಾದಿಗಳಿಂದ ಅಭಿಷೇಕ ಪೂಜೆ ಮಾಡಬೇಕು. ಬಳಿಕ ಹೊಸ ಬಟ್ಟೆಯಿಂದ ತನ್ನನ್ನು ಹಾಗೂ ಶಿವಲಿಂಗವನ್ನು ಮುಚ್ಚಿಕೊಂಡು ಬಲಗೈಯಿಂದ ಶಿವಲಿಂಗವನ್ನು ಮುಟ್ಟಿ ಪ್ರಾಣ ಪ್ರತಿಷ್ಠಾಪನೆ ಮಾಡಬೇಕು ಎಂದು ಹೇಳಿದೆ.

# 21 ಲಕ್ಷ ಆಸ್ತಿಗಳ ಜಿಪಿಎಸ್ ತಂತ್ರಾಂಶದಲ್ಲಿ ದಾಖಲಿಸಿದ ಬಿಬಿಎಂಪಿ


## ಇ-ಖಾತಾ ಪಡೆಯಲು ಅಗತ್ಯವಿರುವ ಜಿಪಿಎಸ್ ನಿರ್ದೇಶಾಂಕಗಳನ್ನು ಸೆರೆಹಿಡಿಯಲು ಬಿಬಿಎಂಪಿ ಸಿಬ್ಬಂದಿ ತಮ್ಮ ಆಸ್ತಿಗೆ ಭೇಟಿ

• **ಉದಯವಾಹಿನಿ ಬೆಂಗಳೂರು**

ಮುಂದಿನ ಮೂರು ವಾರಗಳಲ್ಲಿ ಬೆಂಗಳೂರಿನ ಎಲ್ಲಾ 20 ಲಕ್ಷ ಆಸ್ತಿ ಮಾಲೀಕರಿಗೆ ಬಿಬಿಎಂಪಿಯಿಂದ ಹೊಸ ಇ-ಖಾತಾ ವಿತರಣಾ ವ್ಯವಸ್ಥೆಯ ಭಾಗವಾಗಿ ಎಸ್‌ಎಂಎಸ್ ಸಿಗಲಿದೆ. ಅದಕ್ಕೂ ಮುನ್ನವೇ ಬಿಬಿಎಂಪಿಯಿಂದ 21 ಲಕ್ಷ ಆಸ್ತಿಗಳನ್ನು ಜಿಪಿಎಸ್ ತಂತ್ರಾಂಶದಲ್ಲಿ ಬಿಬಿಎಂಪಿ ಅಳವಡಿಸಿದೆ.

ಇಲ್ಲಿಯವರೆಗೆ, ಅಧಿಕಾರಿಗಳು ಸುಮಾರು ಮೂರು ಲಕ್ಷ ಆಸ್ತಿಗಳಿಗೆ ಪ್ರಸಾರ ಸಂದೇಶಗಳನ್ನು ಕಳುಹಿಸಿದ್ದಾರೆ. ಇ-ಖಾತಾ ಪಡೆಯಲು ಅಗತ್ಯವಿರುವ ಜಿಪಿಎಸ್ ನಿರ್ದೇಶಾಂಕಗಳನ್ನು ಸೆರೆಹಿಡಿಯಲು ಬಿಬಿಎಂಪಿ ಸಿಬ್ಬಂದಿ ತಮ್ಮ ಆಸ್ತಿಗೆ ಭೇಟಿ ನೀಡುತ್ತಾರೆ ಎಂದು ಎಸ್‌ಎಂಎಸ್ ಸ್ವೀಕರಿಸುವವರಿಗೆ ತಿಳಿಸುತ್ತದೆ.

ಎಸ್‌ಎಂಎಸ್‌ನಲ್ಲಿ ಹೀಗೆ ಬರೆಯಲಾಗಿದೆ: ಬಿಬಿಎಂಪಿ ಪ್ರತಿ ಆಸ್ತಿಗೆ ಇ-ಖಾತಾ ರಚಿಸುತ್ತಿದೆ. ಇ-ಖಾತಾ ಪಡೆಯಲು ಜಿಪಿಎಸ್ ನಿರ್ದೇಶಾಂಕಗಳು ಕಡ್ಡಾಯ. ಜಿಪಿಎಸ್ ವಿವರ ಗಳನ್ನು ಸೆರೆಹಿಡಿಯಲು ಬಿಬಿಎಂಪಿ ಸಿಬ್ಬಂದಿ ಕೆಲವೇ ದಿನಗಳಲ್ಲಿ ನಿಮ್ಮ ಆಸ್ತಿಗೆ ಭೇಟಿ ನೀಡುತ್ತಾರೆ. ದಯವಿಟ್ಟು ನಿಮ್ಮ ಆಸ್ತಿ ತೆರಿಗೆ ರಸೀದಿಯನ್ನು ಸಿದ್ಧವಾಗಿರಿಸಿಕೊಳ್ಳಿ ನಿಖರವಾದ ಜಿಪಿಎಸ್ ಟ್ಯಾಗಿಂಗ್ ಖಚಿತಪಡಿಸಿಕೊಳ್ಳಲು ಬಿಬಿಎಂಪಿ ಸಿಬ್ಬಂದಿಯೊಂದಿಗೆ ಸಹಕರಿಸಿ. ಆಸ್ತಿ ಜಿಪಿಎಸ್ ಬಿಎಚ್ಯು ಆಧಾರ್ ಆಗಿ ಕಾರ್ಯನಿರ್ವಹಿಸುತ್ತದೆ, ಆಸ್ತಿಯ ವಿಶಿಷ್ಟ



ಉದಯವಾಹಿನಿ ಚಿತ್ರ

**ಸುಮಾರು ಮೂರು ಲಕ್ಷ ಆಸ್ತಿಗಳಿಗೆ ಪ್ರಸಾರ ಸಂದೇಶ**

ಗುರುತಿಸುವಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಕಳೆದ ಮೂರ್ನಾಲ್ಕು ದಿನಗಳಲ್ಲಿ ಅನೇಕ ನಿವಾಸಿಗಳು ಈ ಸಂದೇಶವನ್ನು ಸ್ವೀಕರಿಸಿದ್ದಾರೆ ಎಂದು ವರದಿಯಾಗಿದೆ. ಬಿಬಿಎಂಪಿ ವಿಶೇಷ ಆಯುಕ್ತ (ಕಂದಾಯ) ಮುನೀಶ್ ಮೌದ್ಗಿಲ್ ಮಾತನಾಡಿ, ಬಿಬಿಎಂಪಿಯು ದಿನಕ್ಕೆ ಒಂದು ಲಕ್ಷ ಎಸ್‌ಎಂಎಸ್ ಸಂದೇಶಗಳನ್ನು ಕಳುಹಿಸುತ್ತಿದೆ. ಈ ಉಪಕ್ರಮವು ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ, ಆದ್ದರಿಂದ ನಮ್ಮ ಸಿಬ್ಬಂದಿ ಕೆಲಸವನ್ನು ಹೆಚ್ಚು ಪರಿಣಾಮಕಾರಿಯಾಗಿ ಪೂರ್ಣಗೊಳಿಸಬಹುದು. ಮುಂದಿನ ಆರು ತಿಂಗಳಲ್ಲಿ ಪ್ರತಿ ಆಸ್ತಿಯ ಅಕ್ಷಾಂಶ ಮತ್ತು ರೇಖಾಂಶ ನಿರ್ದೇಶಾಂಕಗಳನ್ನು ಸೆರೆಹಿಡಿಯಲು ನಾವು ಯೋಜಿಸಿದ್ದೇವೆ ಎಂದು ಅವರು ಹೇಳಿದರು.

> **ಆದ್ದರಿಂದ, ನಿಮಗೆ ಉತ್ತಮ ಸೇವೆ ನೀಡಲು ಬಿಬಿಎಂಪಿಯನ್ನು ಬಲಪಡಿಸಲು ನಿಮ್ಮ ಸಂಪೂರ್ಣ ಸಹಕಾರವನ್ನು ನೀಡುವಂತೆ ವಿನಂತಿಸುತ್ತೇನೆ. ಬಿಬಿಎಂಪಿಯು ಸದಾ ನಿಮ್ಮ ಸೇವೆಯಲ್ಲಿ ಹಾಗೂ ನಾವೆಲ್ಲ ಇಷ್ಟಪಡುವ ನಗರವನ್ನು ರಚಿಸಲು ಸಹಕರಿಸಿ ತಿಳಿಸಿರುತ್ತಾರೆ.**
> **ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್**

ಖಾಲಿ ನಿವೇಶನಗಳಿಗೆ ಹೋಲಿಸಿದರೆ ಅಪಾರ್ಟ್ಮೆಂಟ್‌ಗಳು ಮತ್ತು ಸ್ವತಂತ್ರ ಮನೆಗಳಿಗೆ ಜಿಪಿಎಸ್ ನಿರ್ದೇಶಾಂಕಗಳನ್ನು ಸೆರೆಹಿಡಿಯುವುದು ಸುಲಭ ಎಂದು ಮೌದ್ಗಿಲ್ ಹೇಳಿದರು. ನಾವು ಪ್ರತಿ ಫ್ಲ್ಯಾಟ್ ಮಾಲೀಕರಿಂದ ತೆರಿಗೆ ರಸೀದಿಯನ್ನು ವಿನಂತಿಸುತ್ತೇವೆ, ಅದೇ ಜಿಪಿಎಸ್ ಡೇಟಾವನ್ನು ಬಳಸುತ್ತೇವೆ. ಹೆಚ್ಚುವರಿಯಾಗಿ, ನಾವು ಮೊಬೈಲ್ ಅಪ್ಲಿಕೇಶನ್ ಅನ್ನು ಪ್ರಾರಂಭಿಸುತ್ತಿದ್ದೇವೆ, ಅದು ನಾಗರಿಕರಿಗೆ ತಮ್ಮ ನಿರ್ದೇಶಾಂಕಗಳನ್ನು ನೇರವಾಗಿ ಇನ್ಪುಟ್ ಮಾಡಲು ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದರು.

ಕೇಂದ್ರ ಸರ್ಕಾರದ ಉಪಕ್ರಮವಾದ ಬಿಎಚ್ಯು ಆಧಾರ್, ಬೆರಳಚ್ಚುಗಳಂತೆಯೇ ಗುಣಲಕ್ಷಣಗಳನ್ನು ವಿಶಿಷ್ಟವಾಗಿ ಗುರುತಿಸಲು ಜಿಪಿಎಸ್ ನಿರ್ದೇಶಾಂಕಗಳನ್ನು ಬಳಸುತ್ತದೆ.

ಉಪ ಮುಖ್ಯಮಂತ್ರಿ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ ಶಿವಕುಮಾರ್ ರವರ ನೇತೃತ್ವ ಮತ್ತು ನಿರ್ದೇಶನದಲ್ಲಿ ಬಿಬಿಎಂಪಿಯು ಫೇಸ್‌ಲೆಸ್, ಸಂಪರ್ಕರಹಿತ ಪ್ರಾರಂಭಿಸುತ್ತಿದೆ. ಮತ್ತು ಆನ್‌ಲೈನ್ ಡಿಜಿಟಲ್ - ವ್ಯವಸ್ಥೆಯನ್ನು ಪ್ರಾರಂಭಿಸುತ್ತಿದೆ.ಬಿಬಿಎಂಪಿಯು ರಿಜಿಸ್ಟರ್‌ಗಳಲ್ಲಿನ ಎಲ್ಲಾ 21 ಲಕ್ಷ ಖಾತಾಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಮತ್ತು ರೋಲ್-ಔಟ್ ಶೀಘ್ರದಲ್ಲೇ ಪ್ರಾರಂಭವಾಗುತ್ತದೆ.

### ಸಂಪರ್ಕರಹಿತ ಮತ್ತು ಆನ್‌ಲೈನ್ ವಿತರಣೆಗೆ ಇದು ಬಹಳ

ಇದರ ಭಾಗವಾಗಿ, ಮುಂದಿನ ದಿನಗಳಲ್ಲಿ ಬಿಬಿಎಂಪಿಯ ಸಿಬ್ಬಂದಿಯು ನಿಮ್ಮ ಮನೆಗಳಿಗೆ ಭೇಟಿ ನೀಡಿ ನಿಮ್ಮ ಆಸ್ತಿಯ ಜಿ.ಪಿ.ಎಸ್. ಮಾಹಿತಿಯನ್ನು ಸೆರಹಿಡಿಯುತ್ತಾರೆ. ಪಾಲಿಕೆಯ eKhata ಪಡೆಯಲು ಪ್ರತಿ ಆಸ್ತಿಯ ಜಿ.ಪಿ.ಎಸ್ ಕಡ್ಡಾಯವಾಗಿದೆ. ಸದರಿ ಪ್ರಾಪರ್ಟಿ ಜಿಪಿಎಸ್ ನಿಮ್ಮ ಆಸ್ತಿಯ ವಿಶಿಷ್ಟ ಗುರುತು ಆಗಿರುತ್ತದೆ ಮತ್ತು ಎಲ್ಲಾ ಬಿಬಿಎಂಪಿಯ ಇ-ಖಾತಾ ಸೇವೆಗಳ ಫೇಸ್‌ಲೆಸ್, ಸಂಪರ್ಕರಹಿತ ಮತ್ತು ಆನ್‌ಲೈನ್ ವಿತರಣೆಗೆ ಇದು ಬಹಳ ಮುಖ್ಯವಾಗಿರುತ್ತದೆ.

### ಇನ್ಮುಂದೆ ಸೈಟ್, ಮನೆಗಳ ನೋಂದಣಿಗೆ ಇ-ಆಸ್ತಿ ಕಡ್ಡಾಯ: ಸರ್ಕಾರ ಆದೇಶ

• **ಉದಯವಾಹಿನಿ ಬೆಂಗಳೂರು**

ಇನ್ನು ಮುಂದೆ ರಾಜ್ಯದ ಎಲ್ಲಾ ಸೈಟ್, ಮನೆಗಳ ನೋಂದಣಿಗೆ ಇ-ಆಸ್ತಿ ಕಡ್ಡಾಯ ಎಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಬಳ್ಳಾರಿ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ಹಕ್ಕು ವರ್ಗಾವಣೆಗೆ ಸಂಬಂಧಿಸಿದಂತೆ ಇ-ಆಸ್ತಿ ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲು ನಗರಾಭಿವೃದ್ಧಿ ಇಲಾಖೆ ಸಮ್ಮತಿಸಿದೆ. ಸೆ.23 ರಿಂದ ಬಳ್ಳಾರಿ ಜಿಲ್ಲಾ ವ್ಯಾಪ್ತಿಯ ಎಲ್ಲಾ ಉಪನೋಂದಣಿ ಕಚೇರಿಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಆಸ್ತಿಯನ್ನು ನೋಂದಾಯಿಸಿ, ಆಸ್ತಿಯ ಮಾಹಿತಿಯನ್ನು ಕಡ್ಡಾಯವಾಗಿ ಇ-ಆಸ್ತಿ ತಂತ್ರಾಂಶದಿಂದಲೇ ಪಡೆಯಬೇಕು. ಈ ಸಂಬಂಧ ಪ್ರಕಟಣೆ ಹೊರಡಿಸಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಇ-ಆಸ್ತಿ ತಂತ್ರಾಂಶದಿಂದ ಸ್ವತ್ತುಗಳ ನೋಂದಣಿ ವೇಳೆ ಸಾರ್ವಜನಿಕರು ಮೋಸ ಹೋಗುವುದನ್ನು ತಡೆಯುವುದು. ಇ-ಖಾತಾದಿಂದ ಮಾತ್ರ ಸ್ವತ್ತಿನ ಸ್ವರೂಪ ಮತ್ತು ನೈಜ ಮಾಲೀಕರನ್ನು ಗುರುತಿಸಲು ಸಾಧ್ಯವಾಗುತ್ತದೆ ಎಂದಿದ್ದಾರೆ.

### ಬಸ್ ಡ್ರೈವರ್‌ಗೆ ಹೃದಯಾಘಾತ ದೇವರಂತೆ ಬಂದ ಟ್ರಾಫಿಕ್ ಪೊಲೀಸ್!

• **ಉದಯವಾಹಿನಿ ಬೆಂಗಳೂರು**

ಬಸ್ ಚಲಾಯಿಸುತ್ತಿರುವಾಗಲೇ ಬಿಎಂಟಿಸಿ ಚಾಲಕನಿಗೆ ಲಘು ಹೃದಯಾಘಾತವಾಗಿದ್ದು, ಸಂಚಾರ ಪೊಲೀಸರ ಸಮಯ ಪ್ರಜ್ಞೆಯಿಂದ 45 ಜನರ ಜೀವ ಉಳಿದ ಘಟನೆ ನಗರದ ಶಾಂತಿನಗರದ ಡಬಲ್ ರೋಡ್ ಬಳಿ ಘಟನೆ ನಡೆದಿದೆ. ಬೆಂಗಳೂರಿನ KA51 AJ 6905 ನಂಬರಿನ ಬಸ್ ಚಾಲನೆ ಮಾಡುತ್ತಿದ್ದ ವೇಳೆ ಚಾಲಕ ವೀರೇಶ್ ಎಂಬುವವರಿಗೆ ಶಾಂತಿ ನಗರದ ಜೋಡಿ ರಸ್ತೆ ಬಳಿ ಹಠಾತ್ ಹೃದಯಘಾತ ಸಂಭವಿಸಿದ್ದು, ನಡುರಸ್ತೆಯಲ್ಲೇ ಬಸ್ ಸ್ಲೋ ಆಗಿದೆ. ಈ ವೇಳೆ ಇದನ್ನು ಗಮನಿಸಿದ ಟ್ರಾಫಿಕ್ ಪೊಲೀಸರು ತಕ್ಷಣ ಓಡೋಡಿ ಬಂದಿದ್ದಾರೆ. ಈ ವೇಳೆ ಚಾಲಕ ಎದೆ ಹಿಡಿದುಕೊಂಡು ಕುಸಿದು ಬಿದ್ದಿದ್ದರು. ಕೂಡಲೇ ಸಂಚಾರಿ ಪೊಲೀಸ್ ರಘುಕುಮಾರ್ ಚಾಲಕನನ್ನು ಬಸ್ ನಿಂದ ಇಳಿದಿದ್ದಾರೆ. ಬಳಿಕ ಇನ್ನೋರ್ವ ಪೊಲೀಸ್ ಸಿಬ್ಬಂದಿ ಪ್ರಸನ್ನ ಕುಮಾರ್ ಸಹಾಯದಿಂದ ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ಚಾಲಕ ವೀರೇಶ್ ಪ್ರಾಣಾಪಾಯದಿಂದ ಪಾರಾಗಿದ್ದು, ಟ್ರಾಫಿಕ್ ಪೊಲೀಸರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

### ಮೆಟ್ರೋ ತಡೆಗೋಡೆಗೆ ಗೂಡ್ಸ್ ಲಾರಿ ಡಿಕ್ಕಿ - ಗಂಟೆಗಟ್ಟಲೆ ಟ್ರಾಫಿಕ್ ಜಾಮ್

• **ಉದಯವಾಹಿನಿ ಬೆಂಗಳೂರು**

ಮೆಟ್ರೋ ತಡೆಗೋಡೆಗೆ ಗೂಡ್ಸ್ ಲಾರಿಯೊಂದು ಡಿಕ್ಕಿ ಹೊಡೆದಿರುವ ಘಟನೆ ನಗರದ ನಾಗವಾರ-ಹೆಬ್ಬಾಳ ಮಾರ್ಗದ ಕೆಂಪಾಪುರದ ಬಳಿ ನಡೆದಿದೆ. ನಾಗವಾರ-ಹೆಬ್ಬಾಳ ಮಾರ್ಗದ ಕೆಂಪಾಪುರದ ಬಳಿಯಿರುವ ಔಟರ್‌ರಿಂಗ್ ರೋಡ್ ಸರ್ವೀಸ್ ರಸ್ತೆಯ ಮುಖ್ಯರಸ್ತೆಯಲ್ಲಿ ಲಾರಿಯೊಂದು ನಿಯಂತ್ರಣ ತಪ್ಪಿ ಮೆಟ್ರೋ ಕಾಮಗಾರಿಯ ತಡೆಗೋಡೆಗೆ ಡಿಕ್ಕಿ ಹೊಡೆದಿದೆ.ಪರಿಣಾಮ ಎರಡು ಜೆಸಿಬಿ ಬಳಸಿ ಪೊಲೀಸರು ಲಾರಿಯನ್ನು ತೆಗೆಯಲು ಪ್ರಯತ್ನಪಡುತ್ತಿದ್ದಾರೆ. ಘಟನೆಯಿಂದಾಗಿ ರಸ್ತೆ ಸಂಪೂರ್ಣ ಬಂದ್ ಆಗಿದ್ದು, 10 ಕಿಮೀವರೆಗೂ ಟ್ರಾಫಿಕ್ ಜಾಮ್ ಉಂಟಾಗಿದೆ. ಹೆಬ್ಬಾಳದಿಂದ ರಾಮಮೂರ್ತಿ ನಗರದವರೆಗೆ ಸಂಪೂರ್ಣವಾಗಿ ಟ್ರಾಫಿಕ್ ಜಾಮ್ ಆಗಿದೆ. ಇದರಿಂದಾಗಿ ಸತತ 1 ಗಂಟೆಗಳ ಕಾಲ ವಾಹನಗಳು ನಿಂತಲ್ಲೇ ನಿಂತು, ವಾಹನ ಚಾಲಕರು ಪರದಾಡುವಂತಾಯಿತು.

### ಮಹಿಳೆಯರಿಗೆ ವಿವಿಧ ಯೋಜನೆಗಳಡಿ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

• **ಉದಯವಾಹಿನಿ ಬೆಂಗಳೂರು**

ಮಹಿಳಾ ಅಭಿವೃದ್ಧಿ ನಿಗಮ ವತಿಯಿಂದ ವಿವಿಧ ಯೋಜನೆಗಳಡಿ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ ಮಾಡಲಾಗಿದೆ. ಪ್ರಸ್ತಕ ಸಾಲಿಗೆ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆಗಳಡಿ ಸಹಾಯಧನಕ್ಕಾಗಿ ಸೇವಾಸಿಂಧು ಪೋರ್ಟಲ್ ಮೂಲಕ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ್ 30 ರವರೆಗೆ ವಿಸ್ತರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

### ಲೇಡಿಸ್ ಬಾತ್ ರೂಂ ನಲ್ಲಿ ಮೊಬೈಲ್ ಇಟ್ಟು ವಿಡಿಯೋ ಮಾಡಿದ ಕಾಮುಕ..!

• **ಉದಯವಾಹಿನಿ ಬೆಂಗಳೂರು**

ಮಹಿಳೆಯರ ಶೌಚಾಲಯದಲ್ಲಿ ಮೊಬೈಲ್ ಇಟ್ಟು ವಿಡಿಯೋ ಚಿತ್ರೀಕರಣ ಮಾಡಿದ ಘಟನೆ ಬೆಂಗಳೂರಿನ ರಾಜರಾಜೇಶ್ವರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದಿದೆ. ಕುಂಬಳಗೋಡು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಯುವಕನ್ನು ಬಂಧಿಸುವಂತೆ ಆಗ್ರಹ ವ್ಯಕ್ತವಾಗಿದೆ.

ಕಾಮುಕನೋರ್ವ ಮಹಿಳೆಯರ ಶೌಚಾಲಯದಲ್ಲಿ ಮೊಬೈಲ್ ಇಟ್ಟು ಚಿತ್ರೀಕರಣ ಮಾಡುತ್ತಿದ್ದನು ಎಂಬ ಆರೋಪ ಕೇಳಿಬಂದಿದ್ದು, ವಿದ್ಯಾರ್ಥಿನಿಯರು ಬೆಚ್ಚಿಬಿದ್ದಿದ್ದಾರೆ. ಕೂಡಲೇ ಆರೋಪಿಯನ್ನು ಬಂಧಿಸುವಂತೆ ಆಗ್ರಹಿಸಿದ್ದಾರೆ. ಈ ಬಗ್ಗೆ ಇನ್ನಷ್ಟು ಮಾಹಿತಿ ನಿರೀಕ್ಷಿಸಲಾಗಿದೆ.

## ಹೈಕೋರ್ಟ್ ನ್ಯಾಯಮೂರ್ತಿ ವಿರುದ್ಧ ಸುಪ್ರೀಂ ಕೋರ್ಟ್ ಕೆಂಡಾಮಂಡಲ

• **ಉದಯವಾಹಿನಿ ಬೆಂಗಳೂರು**

ಮುಸ್ಲಿಂ ಬಾಹುಳ್ಯ ಪ್ರದೇಶವಾದ ಗೋರಿಪಾಳ್ಯವು ಮಿನಿ ಪಾಕಿಸ್ತಾನವಾಗಿ ಮಾರ್ಪಟ್ಟಿದೆ ಎಂಬ ಹೇಳಿಕೆ ಹಾಗೂ ಗೂ ವಿಚಾರಣೆ ವೇಳೆ ಮಹಿಳಾ ವಕೀಲರೊಂದಿಗಿನ ಹೈಕೋರ್ಟ್ ನ್ಯಾಯಮೂರ್ತಿ ವಿ. ಶ್ರೀಶಾನಂದರವರ ಸಂವಾದಕ್ಕೆ ಸುಪ್ರೀಂ ಕೋರ್ಟ್ ಕೆರಳಿ ಕೆಂಡವಾಗಿದೆ



ಕಳೆದ ಆಗಸ್ಟ್ 28ರಂದು ಬಾಡಿಗೆ ನಿಯಂತ್ರಣ ಕಾಯಿದೆಗೆ ಸಂಬಂಧಿಸಿದ ಪ್ರಕರಣವೊಂದರ ವಿಚಾರಣೆ ವೇಳೆ ಮುಕ್ತ ನ್ಯಾಯಾಲಯದಲ್ಲಿ ಹೈ ಕೋರ್ಟ್ ನ್ಯಾಯಾಧೀಶರು, ಬೆಂಗಳೂರಿನ ಮೈಸೂರು ರಸ್ತೆಯ ಮೇಲ್ಸೇತುವೆಗೆ ಹೋಗಿ ನೋಡಿ. ಅಲ್ಲಿ ಸಂಚರಿಸುವ ಪ್ರತಿಯೊಂದು ಆಟೊ ರಿಕ್ಷಾದಲ್ಲೂ 10 ಜನರನ್ನು ತುಂಬಿಕೊಂಡಿರಲಾಗುತ್ತದೆ. ಮೈಸೂರು ರಸ್ತೆಯ ಮೇಲ್ಸೆತುವೆ ಸಾಗುವ ಗೋರಿಪಾಳ್ಯದಿಂದ ಮಾರುಕಟ್ಟೆಯವರೆಗಿನ ಪ್ರದೇಶ ಭಾರತದಲ್ಲಿ ಇಲ್ಲ.ಅದು ಪಾಕಿಸ್ತಾನದಲ್ಲಿದೆ ಎಂದಿದ್ದರು. ಎಂತಹುದೇ ಕಟ್ಟುನಿಟ್ಟಿನ ದಕ್ಷ ಪೊಲೀಸ್ ಅಧಿಕಾರಿಯನ್ನು ಅಲ್ಲಿಗೆ ಕರ್ತವ್ಯಕ್ಕೆ ನಿಯೋಜನೆ ಮಾಡಿದರೂ ಅವರು ಹೆದರುತ್ತಾರೆ. ಆಟೋದಲ್ಲಿ ಇಂತಿಷ್ಟು ಜನ ಸಾಗಬೇಕು ಎನ್ನುವ ಕಾನೂನು ಅಲ್ಲಿ ಅನ್ವಯವಾಗುವುದಿಲ್ಲ ಎಂದು ಹೇಳಿದ್ದ ಶ್ರೀಶಾನಂದ ಗೌರಿಪಾಳ್ಯ ಪ್ರದೇಶದಲ್ಲಿ ಪೊಲೀಸರು ಸಂಪೂರ್ಣ ನಿಷ್ಕ್ರಿಯರಾಗಿದ್ದಾರೆ. ಅವರೆಲ್ಲಾ ತಮ್ಮದೇ ಲಾಬಿಗಳಲ್ಲಿ ತೊಡಗಿದ್ದಾರೆ. ಇಲ್ಲಿ ಯಾವುದೇ ನಿಯಮಗಳು ಅನ್ವಯಿಸುವುದಿಲ್ಲ ಎಂದಿದ್ದರು. ಬೆಂಗಳೂರಿನ ಗೌರಿಪಾಳ್ಯವನ್ನು ಪಾಕಿಸ್ತಾನಕ್ಕೆ ಹೋಲಿಸಿದ ನ್ಯಾಯಾಧೀರಶರ ಮಾತಿಗೆ ತೀವ್ರ ಆಕ್ಷೇಪ ವ್ಯಕ್ತವಾಗಿತ್ತು ಇನ್ನು ವಿಚಾರಣೆ ವೇಳೆ ಮಹಿಳಾ ವಕೀಲರೊಬ್ಬರು ಎದುರು ಪಾರ್ಟಿಯವರ ಬಗ್ಗೆ ಮಾಹಿತಿ ನೀಡಲೆತ್ನಿಸಿದಾಗ, ಇರಿ.. ಏನು ನಿಮಗೆಲ್ಲಾ ಗೊತ್ತಿದೆಯಾ.. ನಾಳೆ ದಿನ ಅವರು ಯಾವ ಬಣ್ಣದ ಒಳುಡುಪು ಹಾಕಿದ್ದಾರೆಂಬುದನ್ನೂ ಹೇಳುತ್ತೀರಾ ಎಂದು ಹೇಳುವ ಮುಖಾಂತರ ನ್ಯಾಯಮೂರ್ತಿ ಶ್ರೀಶಾನಂದ ಮಹಿಳಾ ವಕೀಲೆಯನ್ನು ಮುಜುಗರಕ್ಕೀಡುಮಾಡಿದ್ದರು.

> **ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ವಿ ಶ್ರೀಶಾನಂದ ಅವರ ವಿವಾದಾತ್ಮಕ ಹೇಳಿಕೆಗಳನ್ನು ಸೂಕ್ಷ್ಮವಾಗಿ ಪರಿಗಣಿಸಿರುವ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ, ಬಿಆರ್ ಗವಾಯಿ, ಸೂರ್ಯಕಾಂತ್ ಮತ್ತು ಹೃಷಿಕೇಶ್ ರಾಯ್ ನೇತೃತ್ವದ ಪೀಠವು ಕರ್ನಾಟಕ ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಅವರಿಂದ ವರದಿ ಕೇಳಿದೆ.**

> **ಈ ಎಲ್ಲಾ ಹಿನ್ನೆಲೆಯಲ್ಲಿ ಜಸ್ಟೀಸ್ ಶ್ರೀಶಾನಂದರವರ ಹೇಳಿಕೆಗಳನ್ನು ಗಮನಿಸಿರುವ ಸುಪ್ರೀಂ ಕೋರ್ಟ್ ಕೆರಳಿದ್ದು ನ್ಯಾಯಾಧೀಶರ ವಿರುದ್ಧ ಸುಮೋಟೋ ಪ್ರಕರಣದ ಎಚ್ಚರಿಕೆ ನೀಡಿದೆ.**

### ಕುಶಲಕರ್ಮಿಗಳಿಗೆ ವಿವಿಧ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

• **ಉದಯವಾಹಿನಿ ಬೆಂಗಳೂರು**

ನಗರ ಜಿಲ್ಲೆಯ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ 2024-25ನೇ ಸಾಲಿನ ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತ ವಿದ್ಯುತ್ ಚಾಲಿತ ಹೊಲಿಗೆ ಯಂತ್ರ ಹಾಗೂ ಸುಧಾರಿತ ಉಪಕರಣಗಳಾದ ಬಡಗಿ, ಗಾರೆ. ದೋಬಿ, ಕಲ್ಲುಕೆಲಸ. ಕುಲುಮೆ ಕೆಲಸ ಮಾಡುವ ಗ್ರಾಮೀಣ ಕುಶಲಕರ್ಮಿಗಳಿಗೆ ನೀಡಲು ಅರ್ಹ ಫಲಾನುಭವಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ವೆಬ್ ಸೈಟ್ www.bengaluruban.nic.in ಹೊಸತೇನಿಧೆ) ನಲ್ಲಿ ಪಡೆದು ಸೂಕ್ತ ದಾಖಲಾತಿಗಳೊಂದಿಗೆ ಅಕ್ಟೋಬರ್ 16 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು (ಗ್ರಾಕೈ) ರವರ ಕಛೇರಿ. ನಗರ ಜಿಲ್ಲೆ, ಎಸ್.ಜೆ.ಪಿ ಪಾಲಿಟೆಕ್ನಿಕ್ ಕಾಲೇಜು ಆವರಣ, ಕೆ.ಆರ್.ವೃತ್ತ, ಬೆಂಗಳೂರು-01 ಅಥವಾ ದೂರವಾಣಿ ಸಂಖ್ಯೆ : 080-22375765/9448876441 ಅನ್ನು ಸಂಪರ್ಕಿಸಬಹುದು ಎಂದು ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಯ ಉಪ ನಿರ್ದೇಶಕರು (ಖಾಗಾ) ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಬಡ್ಡಿ ಸಮೇತ ಕೊಡದಿದ್ದರೆ ನಾನು ದೇವೇಗೌಡರ ಮಗನೇ ಅಲ್ಲ

• **ಉದಯವಾಹಿನಿ ಬೆಂಗಳೂರು**

ಅತ್ಯಾಚಾರ ಹಾಗೂ ಲೈಂಗಿಕ ಕಿರುಕುಳ ಪ್ರಕರಣಕ್ಕೆ ಆರೋಪದ ಮೇಲೆ ಜೈಲುಪಾಲಾಗಿದ್ದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಬಗ್ಗೆ ತಂದೆ ಹೆಚ್.ಡಿ ರೇವಣ್ಣ ಪ್ರತಿಕ್ರಿಯಿಸಿದ್ದು, ಇನ್ನು ಮೂರು ವರ್ಷ ಸ್ವಲ್ಪ ಸುಮ್ಮನಿರಿ, ನನಗೆ ಕೊಟ್ಟಿರುವುದನ್ನು ಬಡ್ಡಿ ಸಮೇತ ವಾಪಸ್ ನೀಡುತ್ತೇನೆ ಎಂದು ಕಿಡಿಕಾರಿದ್ದರು.

ಈ ಬಗ್ಗೆ ಮಾತನಾಡಿದ ಅವರು, ಪಾಪ ಪ್ರಜ್ವಲ್‌ಗೆ ಏನು ಗೊತ್ತಾಗಲ್ಲ, ಅವನು ಒಳ್ಳೆ ಹುಡುಗ. ನನಗೆ ಸಾಕಷ್ಟು ಹಿಂಸೆ ನೀಡಿದ್ದಾರೆ. ನನ್ನ ಕೈಗೆ ಸಿಗದೆ ಎಲ್ಲಿ ಹೋಗುತ್ತಾರೆ. ಬಡ್ಡಿ ಸಮೇತ ವಾಪಸ್ ಕೊಡದಿದ್ದರೆ ನಾನು ದೇವೇಗೌಡರ ಮಗನೇ ಅಲ್ಲ ಎಂದು ಗುಡುಗಿದರು. ಹಾಸನದಲ್ಲಿ ಹೆಚ್.



ಉದಯವಾಹಿನಿ ಚಿತ್ರ

**ಲೈಂಗಿಕ ಕಿರುಕುಳ ಪ್ರಕರಣ**

ಎಸ್ ಪ್ರಕಾಶನನ್ನು ನಾಲ್ಕು ಬಾರಿ ಗೆಲ್ಲಿಸಿದ್ದರು. 2013ರಲ್ಲಿ ಪ್ರಕಾಶ್‌ಗೆ ಸೀಟ್ ಕೊಡಿಸಿಕೊಂಡು ಬಂದೆ, ಅಲ್ಪಸಂಖ್ಯಾತರಿಂದಾಗಿ ಪ್ರಕಾಶ್ ಸೋತರು, 2023ರ ಚುನಾವಣೆಯಲ್ಲಿ ಹಾಸನದಲ್ಲಿ 50 ಸಾವಿರ ಓಟಿಗೆ ಒಂದು ಓಟು ಕಡಿಮೆಯಾದರೆ ರಾಜೀನಾಮೆ ಕೊಡುತ್ತೇನೆ ಎಂದು ಸವಾಲು ಹಾಕಿದ್ದರು. ಆ ಚುನಾವಣೆಗೆ ಸ್ವರೂಪ್ ನಿಲ್ಲಲು ಪ್ರಯತ್ನಪಟ್ಟ, ಆ ಚುನಾವಣೆಯಲ್ಲಿ ನನ್ನ ಹೆಂಡತಿಯನ್ನು ನಿಲ್ಲಿಸಲು ನಾನೇನು ದಡ್ಡನಲ್ಲ. ನಾನೇ ಅವರನ್ನು ಬಿಟ್ಟಿದ್ದೆ, ರೇವಣ್ಣನೇ ಬಂದು ನಿಲ್ಲಲಿ ಎಂದಾಗ ಯಾರನ್ನಾದರೂ ಬಿಡಬೇಕಲ್ಲ, ಅದಕ್ಕೆ ಸ್ವರೂಪ್ ಅವರನ್ನೇ ನಿಲ್ಲಿಸಬೇಕಾಯಿತು ಎಂದು ರೇವಣ್ಣ ಹೇಳಿದರು. ಹಾಸನ ಕ್ಷೇತ್ರದ ಗೆಲುವಿನ ಬಗ್ಗೆ ಹೆಚ್ಚು ತಲೆಕೆಡಿಸಿಕೊಂಡಿದ್ದರಿಂದ ಸಕಲೇಶಪುರದಲ್ಲಿ ಸೋಲಬೇಕಾಯಿತು. ದೇವೇಗೌಡರು, ಕುಮಾರಣ್ಣ, ರೇವಣ್ಣ ನಿಮ್ಮಂತಹ ಪುಣ್ಯಾತ್ಮರಿಂದ ಉಳಿದಿದ್ದಾರೆ ಎಂದು ಹೇಳಿದರು.

## ಮುನಿರತ್ನ ವಿರುದ್ಧ ಸಿಡಿದೆದ್ದ ಒಕ್ಕಲಿಗ ಶಾಸಕರು

• **ಉದಯವಾಹಿನಿ ಬೆಂಗಳೂರು**

ಮಾಜಿ ಸಚಿವ ಮುನಿರತ್ನ ವಿರುದ್ಧದ ಪ್ರಕರಣಗಳ ತನಿಖೆಗೆ ಎಸ್‌ಐಟಿ ರಚಿಸುವಂತೆ ಒಕ್ಕಲಿಗ ಸಮುದಾಯದ ಸಚಿವರು, ಶಾಸಕರ ನಿಯೋಗ ಸಿಎಂಗೆ ಮನವಿ ಮಾಡಿದೆ.

ಒಕ್ಕಲಿಗ ಸಮುದಾಯದ ಸಚಿವರು, ಶಾಸಕರ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ.ಈ ವೇಳೆ ಮಾಜಿ ಸಚಿವ ಮುನಿರತ್ನ ಅವರ ಪ್ರಕರಣಗಳ ತನಿಖೆಗೆ ಪೊಲೀಸರ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಮನವಿ ಸಲ್ಲಿಸಿತು. ಸಚಿವರುಗಳಾದ ಕೃಷ್ಣ ಭೈರೇಗೌಡ, ಎಂಸಿ ಸುಧಾಕರ್, ಎಂಎಲ್‌ಸಿ ಪುಟ್ಟಣ್ಣ, ಶಾಸಕರಾದ ರಂಗನಾಥ್ ಸೇರಿದಂತೆ ಹಲವರನ್ನೊಳಗೊಮಡ ನಿಯೋಗ ಸಿಎಂಗೆ ಮನವಿ ಸಲ್ಲಿಸಿತು ಮುನಿರತ್ನಗೆ ದಿನಕ್ಕೊಂದು ಸಂಕಷ್ಟ ಎದುರಾಗುತ್ತಿದೆ.



ಉದಯವಾಹಿನಿ ಚಿತ್ರ

ಇತ್ತೀಚೆಗೆ ಜೀವ ಬೆದರಿಕೆ ಹಾಗೂ ಜಾತಿ ನಿಂದನೆ ಮಾಡಿರುವ ಗಂಭೀರ ಆರೋಪದ ಹಿನ್ನೆಲೆಯಲ್ಲಿ ಜೈಲು ಸೇರಿದ್ದರು. ನಿನ್ನೆ ಮುನಿರತ್ನಗೆ ಜಾಮೀನು ಮಂಜೂರಾಗಿ ತಾತ್ಕಾಲಿಕ ರಿಲೀಫ್ ಸಿಕ್ಕಿತ್ತು. ಆದರೆ ಮಹಿಳೆಯೊಬ್ಬರ ಮೇಲೆ ಅತ್ಯಾಚಾರ ಎಸಗಿರುವ ಪ್ರಕರಣದಲ್ಲಿ ಕಗ್ಗಲಿಪುರ ಪೊಲೀಸರು ಮುನಿರತ್ನರವರನ್ನು ಅರೆಸ್ಟ್ ಮಾಡಿದ್ದಾರೆ.

## ಕರ್ನಾಟಕ ಕಲಾಶ್ರೀ ಪ್ರಶಸ್ತಿಗೆ ಆಯ್ಕೆಯಾದವರ ಪಟ್ಟಿ ಇಲ್ಲಿದೆ..

• **ಉದಯವಾಹಿನಿ ಬೆಂಗಳೂರು**

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಪ್ರತಿಷ್ಠಿತ ಕಾರ್ಯಕ್ರಮಗಳಲ್ಲಿ ಒಂದಾದ ಕರ್ನಾಟಕ ಕಲಾಶ್ರೀ ಪ್ರಶಸ್ತಿಗೆ ಸಂಗೀತ ಮತ್ತು ನೃತ್ಯ ಕ್ಷೇತ್ರಗಳಲ್ಲಿ ಅನುಪಮ ಸೇವೆ ಸಲ್ಲಿಸಿದ ಹಿರಿಯ ಕಲಾವಿದರನ್ನು ಗುರುತಿಸಲಾಗಿದೆ. ಅಕಾಡೆಮಿಯ



**ಹಿಂದೂಸ್ತಾನಿ ಸಂಗೀತ**

- ಮಹದೇವಪ್ಪ ಪೂಜಾರ, ಗುಲಬರ್ಗಾ
- ರವೀಂದ್ರ ಕಾಟೋಟಿ, ಬೆಳಗಾಂ - ಹಾರ್ಮೋನಿಯಂ
- ಅನಂತ ಭಾಗವತ್, ಉ.ಕನ್ನಡ - ಗಾಯನ

ಅಧ್ಯಕ್ಷೆ ಶುಭ ಧನಂಜಯ ಅವರ ಅಧ್ಯಕ್ಷತೆಯಲ್ಲಿ ಸೆ.02 ರಂದು ನಡೆದ ಸರ್ವ ಸದಸ್ಯರ ಸಭೆಯಲ್ಲಿ ಸರ್ವಾನುಮತದಿಂದ ಪ್ರಶಸ್ತಿ ಪುರಸ್ಕೃತರನ್ನು ಆಯ್ಕೆ ಮಾಡಲಾಗಿದೆ.

**ವಾರ್ಷಿಕ ಪ್ರಶಸ್ತಿ**
**ಕರ್ನಾಟಕ ಸಂಗೀತ**

1. ವಾನರಾಶಿ ಬಾಲಕೃಷ್ಣ ಭಾಗವತರ್, ಕೋಲಾರ
2. ಎಸ್.ವಿ.ಗಿರಿಧರ್, ಬೆಂಗಳೂರು - ಮೃದಂಗ
3. ನಾಗಭೂಷಣಯ್ಯ, ಆನೇಕಲ್ - ಪಿಟೀಲು

2024-25ನೇ ಸಾಲಿನ ಪ್ರಶಸ್ತಿ ವಿವರ: ಗೌರವ ಪ್ರಶಸ್ತಿ: ಕರ್ನಾಟಕ ಸಂಗೀತ - ಗಾಯನ ಭಾನುಮತಿ ನರಸಿಂಹನ್, ಬೆಂಗಳೂರು
ನೃತ್ಯ: ಗಾಯತ್ರಿ ಕೇಶವನ್, ಹಾಸನ
**ನೃತ್ಯ:** ಟಿ.ರವೀಂದ್ರಶರ್ಮ, ಬೆಳಗಾಂ ಅನುರಾಧ ವಿಕ್ರಾಂತ್, ಬೆಂಗಳೂರು ಸುಗ್ಗನಹಳ್ಳಿ ಷಡಾಕ್ಷರಿ, ಬೆಂಗಳೂರು ಬಿ.ಆರ್.ಹೇಮಂತ ಕುಮಾರ್, ಬೆಂಗಳೂರು- ನೃತ್ಯಕ್ಕೆ ಪಿಟೀಲು
**ಸುಗಮ ಸಂಗೀತ:** ಸೂಗೂರೇಶ ಅಸ್ಕಿಹಾಳ್, ರಾಯಚೂರು ಎನ್.ಎಲ್.ಶಿವಶಂಕರ್, ಬೆಂಗಳೂರು - ಪಕ್ಕವಾದ್ಯ - ತಬಲಾ
ಕಥಾಕೀರ್ತನ: ಕೆ.ಎನ್.ಕೃಷ್ಣಪ್ಪ, ಕೋಲಾರ
ಗಮಕ: ರತ್ನಾಮೂರ್ತಿ, ಹಾಸನ - ವ್ಯಾಖ್ಯಾನ
ಸಂಘ ಸಂಸ್ಥೆ: ವೀರೇಶ್ವರ ಪುಣ್ಯಾಶ್ರಮ, ಗದಗ ಸುನಾದ ನಾದ ಕಲ್ಚರಲ್ ಸೆಂಟರ್, ಬೆಂಗಳೂರು

# ಬಹುತೇಕ ಪ್ರದೇಶಗಳಿಗೆ ನೀರು ಪೂರೈಕೆ ಇಲ್ಲ

## ತಿಮ್ಮನಹಳ್ಳಿ, ಎಂ.ಸಿ.ಲೇಔಟ್, ಮೂಡಲಪಾಳ್ಯ, ಕಮ್ಮಗೊಂಡನ ಹಳ್ಳಿ, ಭುವನೇಶ್ವರಿ ನಗರ ನೀರು ಪೂರೈಕೆ ಇರುವುದಿಲ್ಲ

• **ಉದಯವಾಹಿನಿ ಬೆಂಗಳೂರು**

ಸೆಪ್ಟೆಂಬರ್ 21ರಂದು ಬೆಂಗಳೂರಿನ ರಾಜಗೋಪಾಲನಗರ, ವಾಮುಂಡಿಪುರ, ಚೌಡರಪಾಳ, ವಿದ್ಯಾರಣ್ಯನಗರ ಮಾರೇನಹಳ್ಳಿ 20ನೇ ಮೇನ್, ಗೊರಗುಂಟೆಗುಂಟೆ ಪಾಳ್ಯ, ಕೃಷ್ಣಾನಂದನಗರ, ಶಂಕರ ನಗರ, ಸುಬ್ರಹ್ಮಣ್ಯನಗರ, ಗಾಯತ್ರಿನಗರ, ಪ್ರಕಾಶನಗರ, ನಂದಿನಿ ಲೇಔಟ್, ಗಣೇಶ ಬ್ಲಾಕ್, ಕೆಎಚ್‌ಬಿ ಕಾರ್ಟರ್ಸ್, ಹೌಸಿಂಗ್ ಬೋರ್ಡ್ ಕಾರ್ಪೋರೇಷನ್ ಕಾಲೋನಿ, ತಿಮ್ಮನಹಳ್ಳಿ, ಎಂ.ಸಿ.ಲೇಔಟ್, ಮೂಡಲಪಾಳ್ಯ, ಕಮ್ಮಗೊಂಡನ ಹಳ್ಳಿ, ಭುವನೇಶ್ವರಿ ನಗರ ನೀರು ಪೂರೈಕೆ ಇರುವುದಿಲ್ಲ.

ಇನ್ನೂ ಹಗ್ಗನಹಳ್ಳಿ, ಸುಂಕದ ಕಟ್ಟೆ, ಫೈವ್ ಲೈನ್ ರಸ್ತೆ, ಶ್ರೀನಿವಾಸನಗರ, ಹೊಯಳನಗರ, ಸಂಜೀವಿನಗರ, ಲಕ್ಷ್ಮಣ ನಗರ, ಶ್ರೀ ಗಂಧನಗರ, ಮಯೂರನಗರ, ಶಿವಾನಂದ ನಗರ, ಫ್ರೆಂಡ್ಸ್ ಸರ್ಕಲ್, ಎಜಿಪಿ ಲೇಔಟ್, ಚಿಕ್ಕಸಂದ್ರ, ನಾಗಾಪುರ, ಅಗ್ರಹಾರ ದಾಸರಹಳ್ಳಿ, ರಾಜಾಜಿನಗರ ಆನೇ ಬ್ಲಾಕ್, ವೆಸ್ಟ್ ಆಫ್ ಕಾರ್ಡ್ ರೋಡ್, ಇಂದಿರ ನಗರ ಕೊಳಗೇರಿ, ಕೆಎಚ್ ಬಿ ಕಾಲೋನಿ, ಮಹಾಗಣಪತಿನಗರ, ಪೀಣ್ಯ ಕೈಗಾರಿಕಾ ಪ್ರದೇಶದಲ್ಲೂ ಶನಿವಾರ ನೀರು ಪೂರೈಕೆ ಮಾಡಲಾಗುವುದಿಲ್ಲ.

ಜೊತೆಗೆ ಜೆಕೆಡಬ್ಲ್ಯೂ ಲೇಭಟ್, ಲಕ್ಷ್ಮಿ ದೇವಿನಗರ, ಪಾರ್ವತಿನಗರ, ಪೀಣ್ಯ ಕೈಗಾರಿಕಾ ಪ್ರದೇಶ, ಚೊಕ್ಕಸಂದ್ರ,



ಉದಯವಾಹಿನಿ ಚಿತ್ರ



**ಬೆಂಗಳೂರು ಜಲಮಂಡಳಿ ಪ್ರಕಟಣೆ ಬಿಡುಗಡೆ**

ಎಚ್ ಎಂಟಿ ಲೇಔಟ್, ಗೃಹಲಕ್ಷ್ಮಿ ಲೇಔಟ್, ಪೀಣ್ಯ ಮೊದಲನೇ ಹಂತ, ಪೀಣ್ಯ ವಿಲೇಜ್, ಲೇಔಟ್, ಬಾಗಲಗುಂಟೆ, ಮಲ್ಲಸಂದ್ರ, ದಾಸರಹಳ್ಳಿ, ರಾಮಯ್ಯ ಲೇಔಟ್, ಪ್ರಶಾಂತನಗರ, ಕಿರ್ಲೋಸ್ಕರ್ ಲೇಔಟ್, ಸೌಂದರ್ಯ ಲೇಔಟ್, ಸಿದ್ದೇಶ್ವರ ಲೇಔಟ್, ಕೆ.ಪಿ.ಅಗ್ರಹಾರ, ಚೆನ್ನಪ್ಪ ಗಾರ್ಡನ್, ಗಾಣಪ್ಪ ಲೇಔಟ್, ಮಂಜುನಾಥನಗರ, ಶಿವನಹಳ್ಳಿ ಪ್ರದೇಶಗಳಲ್ಲಿ ನೀರು ಪೂರೈಕೆ ಸ್ಥಗಿತಗೊಳ್ಳಲಿದೆ.

ಅಲ್ಲದೆ ಕಾಮಾಕ್ಷಿಪಾಳ್ಯ, ರಾಗಿನಗರ, ಮಾರುತಿ ಮಂದಿರ, ಶಿವಾನಂದ ನಗರ, ಕೋಮಲನಗರ, ಶಕ್ತಿಗಣಪತಿ ನಗರ, ಬಿಎಚ್ ಇಎಲ್ ಲೌಔಟ್, ಕನ್ನಹಳ್ಳಿ, ಐಡಿಎಲ್ ಹೋಮ್ ಟೌನ್‌ಶಿಪ್, ಮಲ್ಲಸಂದ್ರ, ರವೀಂದ್ರ ನಗರ, ಸಂತೋಷ ನಗರ, ಬಿಎಚ್‌ಇಎಲ್ ಕಾಲೋನಿ, ಬಾಬಣ್ಣ ಲೇಔಟ್, ಕಲ್ಯಾಣ ನಗರ, ಶನಿಮಹಾತ್ಮ ದೇವಸ್ಥಾನ, ಹಾವ ನೂರು ಲೇಔಟ್, ಡಿಫೆನ್ ಕಾಲೋನಿ, ಶಂಕ್ರಪ್ಪ ಗಾರ್ಡನ್, ಗೋಪಾಲಪುರ, ಕಾವೇರಿಪುರ, ಶಿವಪುರ, ಕೋಡಿವಾಳ, ವಿಜಯ ಲೇಔಟ್, ಭುವನೇಶ್ವರನಗರ, ಜ್ಞಾನ ಭಾರತಿ, ದುಬಾಸಿಪಾಳ್ಯ, ಅನ್ನಪೂರ್ಣೇಶ್ವರಿನಗರ, ಜ್ಞಾನ ಗಂಗಿನಗರ, ರೈಲ್ವೆ ಲೇಔಟ್ ನಲ್ಲೂ ಶನಿವಾರ ನೀರು ಪೂರೈಕೆ ಇರುವುದಿಲ್ಲ.

ನಗರದ ಎಂಪಿಎಂ ಲೇಔಟ್, ಮಲ್ಲತ್ತಹಳ್ಳಿ, ಪಾಪರೆಡ್ಡಿ ಪಾಳ್ಯ, ಐಪಿಎ ಲೇಔಟ್, ನಾಗರಬಾವಿ, ಎನ್ ಜಿಇಎಫ್, ಟಲಿಕಾಂ ಲೇಔಟ್, ನೆಲಗದರನಹಳ್ಳಿ ಐಪಿನಗರ, ದೊಡ್ಡಣ್ಣ ಕೈಗಾರಿಕಾ ಪ್ರದೇಶ, ರಾಮಯ್ಯ ಲೇಔಟ್, ಜೈಭುವನೇಶ್ವರಿನಗರ, ಸಂಜಯ್ ಗಾಂಧಿ ನಗರ, ರಂಗನಾಥಪುರ, ಬಿಡಿಎ ಲೇಔಟ್, ರಾಜೀವ್ ಗಾಂಧಿ ಕೊಳಚೆ ಪ್ರದೇಶ, ಮುನೇಶ್ವರ ನಗರ, ಮೂಡಲ ಪಾಳ್ಯ, ಎಂಟಿ ಲೇಔಟ್, ಮಾರೇನಹಳ್ಳಿ, ಜಿಕೆ ಡಬ್ಲ್ಯೂ ಲೇಔಟ್, ವಿನಾಯಕ ಲೇಔಟ್, ವಿಶ್ವಭಾರತಿ ನಗರ, ಮೈಲಾಸಂದ್ರ, ಕೆಂಗೇರಿ, ಕೆಂಗೇರಿ ಸ್ಯಾಟಲೈಟ್ ಟೌನ್, ಬಂಡೇ ಮಠ, ಕೆಂಗೇರಿ ಪೋರ್ಟ್, ಸ್ವಾತಿ ಲೇಔಟ್ ಪ್ರದೇಶದಲ್ಲಿ ನೀರಿನ ಪೂರೈಕೆಯಲ್ಲಿ ವ್ಯತ್ಯವಾಗಲಿದೆ.

> **ಕಾವೇರಿ 5ನೇ ಹಂತದ ಯೋಜನೆಯ ಕಾಮಗಾರಿ ನಡೆದಿರುವ ಕಾರಣ ಸೆಪ್ಟೆಂಬರ್ 21ರಂದು ಬೆಂಗಳೂರಿನ ಬಹುತೇಕ ಪ್ರದೇಶಗಳಿಗೆ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಈ ಬಗ್ಗೆ ಬೆಂಗಳೂರು ಜಲಮಂಡಳಿ ಪ್ರಕಟಣೆ ಬಿಡುಗಡೆ ಮಾಡಿ ಮಾಹಿತಿ ನೀಡಿದೆ. ಇದರಿಂದಾಗಿ ಸಾರ್ವಜನಿಕರು ಸಹರಿಸುವಂತೆ ಜಲಮಂಡಳಿ ತಿಳಿಸಿದೆ.**

### ಜಲಮಂಡಳಿ ಮನವಿ ಮಾಡಿದೆ

**ಕಾವೇರಿ 5ನೇ ಹಂತದ 700 ಮಿ.ಮೀ ಕೊಳದ ಮಾರ್ಗವನ್ನು ಹೆಗ್ಗನಹಳ್ಳಿ ನೆಲ ಮಟ್ಟದ ಸಂಗ್ರಹಾಗಾರಕ್ಕೆ ಜೋಡಿಸುವ ಕಾಮಗಾರಿಯನ್ನು ಸೆಪ್ಟೆಂಬರ್ 21ರಂದು ಶನಿವಾರ ಕೈಗೊಳ್ಳಲಾಗುತ್ತಿದೆ. ಇದರಿಂದಾಗಿ ಶನಿವಾರ ನೀರು ಪೂರೈಸಲು ಆಗುವುದಿಲ್ಲ ಎಂದು ಜಲಮಂಡಳಿ ತಿಳಿಸಿದೆ. ಶನಿವಾರ ಅಂದರೆ ಸೆಪ್ಟೆಂಬರ್ 21ರಂದು ಮಧ್ಯಾಹ್ನ 1ರಿಂದ 10ರವರೆಗೆ ಕಾವೇರಿ ನಾಲ್ಕನೇ ಘಟ್ಟದ 2ನೇ ಫೇಸ್ ವ್ಯಾಪ್ತಿಯ ಪ್ರದೇಶಗಳಿಗೆ ನೀರು ಪೂರೈಕೆ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಜಲಮಂಡಳಿ ಮನವಿ ಮಾಡಿದೆ.**

# ಕೋಮುಗಲಭೆಗೆ ಬಿಜೆಪಿಯವರೇ ಕಾರಣ: ಸಿದ್ದು

## ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಅಂಗಡಿಗಳನ್ನು ಸುಟ್ಟು ಹಾಕಿದ್ದಾರೆ, ಆ ಘಟನೆಗಳ ಬಗ್ಗೆ ಸೂಕ್ತ ಕ್ರಮಕ್ಕೆ ಸಿಎಂ ಸೂಚನೆ

• ಉದಯವಾಹಿನಿ ಮೈಸೂರು

ಕೋಮು ಗಲಭೆಗಳಿಗೆ ಬಿಜೆಪಿಯವರೇ ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು. ಇಲ್ಲಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಪತ್ರಕರ್ತರೊಂದಿಗೆ ಶುಕ್ರವಾರ ಮಾತನಾಡಿದ ಅವರು, ಬಿಜೆಪಿಯವರ ಪ್ರಚೋದನೆ ಕಾರಣದಿಂದಲೇ ಗಲಾಟೆಗಳು ನಡೆಯುತ್ತಿವೆ ಎಂದು ದೂರಿದರು.

ರಾಜ್ಯದಲ್ಲಿ 60ಸಾವಿರ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿತ್ತು. ಇದುವರೆಗೆ ಎರಡು ಕಡೆಯಷ್ಟೆ ಗಲಾಟೆ ನಡೆದಿದೆ. ದಾವಣಗೆರೆಯಲ್ಲಿ ಕಲ್ಲು ತೂರಾಟವಷ್ಟೆ ಆಗಿದೆ. ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಅಂಗಡಿಗಳನ್ನು ಸುಟ್ಟು ಹಾಕಿದ್ದಾರೆ. ಆ ಘಟನೆಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದ್ದೇನೆ. ಮುಂಜಾಗ್ರತೆ ವಹಿಸುವಂತೆಯೂ ಸೂಚಿಸಿದ್ದೇನೆ. ನಾಗಮಂಗಲ ಗಲಭೆಗೆ ಸಂಬಂಧಿಸಿದಂತೆ ಅಲ್ಲಿನ ಡಿವೈಎಸ್ಪಿ ಹಾಗೂ ಇನ್‌ಸ್ಪೆಕ್ಟರ್ ಅಮಾನತು ಮಾಡಿದ್ದೇವೆ' ಎಂದು ತಿಳಿಸಿದರು.

ಒಕ್ಕಲಿಗ ಸಮುದಾಯದ ಸಚಿವರು, ಕಾಂಗ್ರೆಸ್ ಶಾಸಕರ ನಿಯೋಗ ಬೆಂಗಳೂರಿನಲ್ಲಿ ಶುಕ್ರವಾರ ನನ್ನನ್ನು ಭೇಟಿಯಾಗಿ, ಶಾಸಕ ಮುನಿರತ್ನ ಅವರ ವಿರುದ್ಧ ದಾಖಲಾಗಿರುವ ಮೂರು ಪ್ರಕರಣಗಳ ತನಿಖೆಗೆ ಪೊಲೀಸರ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಮನವಿ ಸಲ್ಲಿಸಿದ್ದಾರೆ. ಗೃಹ ಸಚಿವ ಜಿ.ಪರಮೇಶ್ವರ್



ಉದಯವಾಹಿನಿ ಚಿತ್ರ

ಅವರೊಂದಿಗೆ ಚರ್ಚಿಸಿ ನಿರ್ಧಾರ ಕೈಗೊಳ್ಳುತ್ತೇವೆ ಎಂದು ಅವರಿಗೆ ತಿಳಿಸಿದ್ದೇನೆ' ಎಂದು ಪ್ರತಿಕ್ರಿಯಿಸಿದರು.

ಕಾನ್‌ಸ್ಟೆಬಲ್ ನೇಮಕಾತಿ ವೇಳೆ ವಯೋಮಿತಿ ಹೆಚ್ಚಿಸುವಂತೆ (27 ವರ್ಷದಿಂದ 33 ವರ್ಷಕ್ಕೆ) ಬೇಡಿಕೆ ಬಂದಿರುವ ಬಗ್ಗೆ ಒಂದು ಬಾರಿ ಅವಕಾಶ ಕೊಡುವ ನಿರ್ಧಾರ ಮಾಡುವಂತೆ ಗೃಹ ಸಚಿವರಿಗೆ ಸೂಚಿಸಿದ್ದೇನೆ. ಗೆಜೆಟೆಡ್ ಪ್ರೊಬೇಷನರಿ 384 ಹುದ್ದೆಗಳ ನೇಮಕಾತಿಗೆ ಎರಡು ತಿಂಗಳ ಒಳಗೆ ಮರು ಪರೀಕ್ಷೆ ನಡೆಸುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ (ಕೆಪಿಎಸ್‌ಸಿ) ತಿಳಿಸಿದ್ದೇನೆ. ಈ ಹುದ್ದೆಗಳ ನೇಮಕಾತಿಗೆ ನಡೆದ ಪೂರ್ವಭಾವಿ ಪರೀಕ್ಷೆ ವೇಳೆ, ಪ್ರಶ್ನೆಪತ್ರಿಕೆಗಳನ್ನು ಇಂಗ್ಲಿಷ್‌ನಿಂದ ಕನ್ನಡಕ್ಕೆ ಅನುವಾದ ಮಾಡುವಾಗ ಹಲವು ತಪ್ಪುಗಳು ಆಗಿದ್ದವು. ಆದ್ದರಿಂದ ಮರು ಪರೀಕ್ಷೆ ನಡೆಸುವಂತೆ ಹೇಳಿದ್ದೇನೆ' ಎಂದು ಪ್ರತಿಕ್ರಿಯಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ, ಶಾಸಕ ಸಿ.ಪುಟ್ಟರಂಗಶೆಟ್ಟಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಮುಡಾ ಅಧ್ಯಕ್ಷ ಕೆ.ಮರೀಗೌಡ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಕಾಂಗ್ರೆಸ್ ನಗರ ಜಿಲ್ಲಾ ಘಟಕದ ಅಧ್ಯಕ್ಷ ಆರ್. ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ ಇದ್ದರು

> **ಎಚ್.ಡಿ. ಕುಮಾರಸ್ವಾಮಿ, ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಗಂಗೇನಹಳ್ಳಿಯಲ್ಲಿ ಬಹುಕೋಟಿ ಮೌಲ್ಯದ ಒಂದು ಎಕರೆ 11 ಗುಂಟೆ ಜಮೀನು ಡಿನೋಟಿಫಿಕೇಷನ್ ನಡೆದಿದೆ ಎಂದು ಸಚಿವರಾದ ಕೃಷ್ಣ ಬೈರೇಗೌಡ, ದಿನೇಶ್ ಗುಂಡೂರಾವ್, ಸಂತೋಷ್ ಲಾಡ್ ಪತ್ರಿಕಾಗೋಷ್ಠಿ ನಡೆಸಿ ಹೇಳಿಕೆ ನೀಡಿರುವುದನ್ನು ಗಮನಿಸಿದ್ದೇನೆ. ಬೆಲೆ ಬಾಳುವಂತಹ ಜಮೀನದು. ಅಂಥದ್ದನ್ನು ಡಿನೋಟಿಫೈ ಮಾಡಿದ್ದಾರೆ. ಅದರಲ್ಲೂ ಕುಮಾರಸ್ವಾಮಿ ಭಾಮೈದನಿಗೆ ನೋಂದಣಿ ಆಗಿದೆ. ಅವರ ಅತ್ತೆ ಜಿಪಿಎ ಪಡೆದುಕೊಂಡಿದ್ದಾರೆ. ಆದ್ದರಿಂದ ಇದೊಂದು ಬಹಳ ಗಂಭೀರವಾದ ಪ್ರಕರಣ. ಅದನ್ನು ಈಗಾಗಲೇ ಸ್ವಾಧೀನಕ್ಕೆ ಪಡೆದುಕೊಳ್ಳಲಾಗಿದೆ, ಡಿನೋಟಿಫೈಗೆ ಅವಕಾಶವಿಲ್ಲ ಎಂದು ಅಧಿಕಾರಿಗಳು ಹೇಳಿದ್ದರೂ ಮಾಡಿಸಿದ್ದಾರೆ. ಸತ್ತು ಹೋದವರ ಹೆಸರಿನಲ್ಲಿ ಮಾಡಿಸಿದ್ದಾರೆ. ದಾಖಲೆಗಳನ್ನು ನೋಡಿ, ಮಾಹಿತಿ ಪಡೆದುಕೊಂಡು ಆ ಬಗ್ಗೆ ಪ್ರತಿಕ್ರಿಯಿಸುತ್ತೇನೆ' ಎಂದು ಹೇಳಿದರು.**

> **ವಿರೋಧ ಪಕ್ಷದವರು ಗಾಜಿನ ಮನೆಯಲ್ಲಿ ಕುಳಿತು ಸರ್ಕಾರದ ಮೇಲೆ ಆರೋಪ ಹೊರಿಸುತ್ತಿವೆಯೇ ಎಂಬ ಪ್ರಶ್ನೆಗೆ, 'ನಾವು ಯಾರ ಮೇಲೆಯೂ ಆರೋಪ ಹೊರಿಸುವ ಕೆಲಸವನ್ನು ಮಾಡಿಲ್ಲ. ಕುಮಾರಸ್ವಾಮಿಯದ್ದು ಯಾವಾಗಲೂ ಹಿಟ್ ಅಂಡ್ ರನ್ ಕೇಸ್. ಅವರು ಯಾವತ್ತೂ ಯಾವುದನ್ನೂ ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗಿಲ್ಲ. ಕೇಂದ್ರ ಸಚಿವರಾಗಿ ಸತ್ಯವೋ, ಇಲ್ಲವೋ ಎಂಬುದನ್ನು ತಿಳಿದುಕೊಂಡು ಮಾತನಾಡಬೇಕಲ್ಲವೇ' ಎಂದು ಕೇಳಿದರು.**

# ಜಿಲ್ಲೆಯಲ್ಲೇ ದ್ವಿತೀಯ ಸ್ಥಾನದೊಂದಿಗೆ 90.49. ಲಕ್ಷ ನಿವ್ವಳ ಲಾಭ

• ಉದಯವಾಹಿನಿ ಕೋಲಾರ

ಬ್ಯಾಂಕ್ ಪ್ರಸಕ್ತ ಸಾಲಿನಲ್ಲಿ 90,49,439 ಲಕ್ಷ ಲಾಭ ಗಳಿಸಿದ್ದು ಅಲ್ಲದೇ ಸಾಲ ವಸೂಲಾತಿಯಲ್ಲಿ ಜಿಲ್ಲೆಗೆ ದ್ವಿತೀಯ ಸ್ಥಾನವನ್ನು ಪಡೆದಿದೆ ಎಂದು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ನ ಅಧ್ಯಕ್ಷ ಹೊಳಲಿ ಹೊಸೂರು ಜಿ.ಅಮರೇಶ್ ಹೇಳಿದರು.

ನಗರದ ಟಿ.ಚೆನ್ನಯ್ಯ ರಂಗಮಂದಿರದಲ್ಲಿ ಶುಕ್ರವಾರ ಬ್ಯಾಂಕ್‌ನ 202324ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಈ ವರ್ಷದಲ್ಲಿ ರೈತರಿಗೆ ಸರಕಾರದ ಸಾಲಮನ್ನಾ ಯೋಜನೆಯಿಂದ 1.22 ಕೋಟಿ ರೂಪಾಯಿಗಳ ಪ್ರಯೋಜನವಾಗಿದೆ ಹಿಂದೆ ಆಡಳಿತ ನಡೆಸಿದವರ ಮಾರ್ಗದರ್ಶನದಲ್ಲಿ ಬ್ಯಾಂಕ್ ಮುನ್ನಡೆಸಿಕೊಂಡು ಹೋಗಿದ್ದೇವೆ ಎಂದರು



ಉದಯವಾಹಿನಿ ಚಿತ್ರ

ಸಹಕಾರ ಕೃಷಿ, ಗ್ರಾಮೀಣ ಅಭಿವೃದ್ಧಿ

ಸರ್ಕಾರದ ಸೌಲಭ್ಯಗಳನ್ನು ಸಮಾಜದ ಕಟ್ಟ ಕಡೆಯ ರೈತರ ಮನೆ ಬಾಗಿಲಿಗೆ ತಲುಪುವಂತೆ ಮಾಡುವುದಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ರೈತರು ಪಡೆದ ಸಾಲವನ್ನು ನಿಗದಿತ ಅವಧಿಯಲ್ಲಿ ಸಮರ್ಪಕವಾಗಿ ಮರುಪಾವತಿಸಿದರೆ ಮಾತ್ರ ಬ್ಯಾಂಕ್‌ನ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಪಿಎಲ್ಡಿ ಬ್ಯಾಂಕ್ ಉಪಾಧ್ಯಕ್ಷೆ ಸುನಂದಮ್ಮ, ನಿರ್ದೇಶಕರಾದ ಯಲವಾರ ಸೊಣ್ಣೆಗೌಡ, ವಿಟ್ಟಪ್ಪನಹಳ್ಳಿ ಡೇರಿ ವೆಂಕಟೇಶ್, ವಿ.ಎ ಶಶಿಧರ್, ಹೆಚ್ ಕೃಷ್ಣೇಗೌಡ, ಚಿಕ್ಕಹಸಾಳ ಮಂಜುನಾಥ್, ಬೈರೇಗೌಡ, ರಾಧಾಕೃಷ್ಣ, ಕೆ.ಸಿ ಮಂಜುನಾಥ್, ಗಂಗಪ್ಪ, ಶೋಭಾ, ಗೋವಿಂದಪ್ಪ, ಬ್ಯಾಂಕ್ ಸಿಇಒ ಶ್ರೀನಿವಾಸ್, ಲೆಕ್ಕಾಧಿಕಾರಿ ಶೋಭಾರಾಣಿ, ಸಿ. ಶ್ಯಾಮಲಾ ಮುಂತಾದವರು ಉಪಸ್ಥಿತರಿದ್ದರು.

> **ಅವಿಭಜಿತ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ರೈತರು ರಾಜ್ಯದಲ್ಲೇ ಶ್ರಮಜೀವಿಗಳಾಗಿದ್ದಾರೆ. ಹೆಚ್ಚಿನ ಮಳೆಯಿಲ್ಲದಿದ್ದರೂ ಸ್ವಾಭಿಮಾನಿಗಳಾಗಿ ದುಡಿಯುತ್ತಾರೆ. ಮಾರುಕಟ್ಟೆಗೆ ಅನುಗುಣವಾಗಿ ವ್ಯವಸಾಯ ಮಾಡತ್ತಾರೆ. ವಾಣಿಜ್ಯ ಬೆಳೆಗಳಲ್ಲಿ ನಷ್ಟವಾದರೆ ಹೈನುಗಾರಿಕೆ ಕೈ ಹಿಡಿದಿದೆ ಸಾಲ ಮರುಪಾವತಿಯಲ್ಲಿ ಬ್ಯಾಂಕ್ ಅಧಿಕಾರಿಗಳು ಮತ್ತು ಆಡಳಿತ ಮಂಡಳಿ ಬಂದಾಗ ಸಹಕರಿಸಬೇಕು ಎಂದು ತಿಳಿಸಿದರು.**

# ಒಂಟಿ ಮನೆಗಳನ್ನೇ ಟಾರ್ಗೆಟ್ ಮಾಡಿದ ಕೋಳಿ ಕಳ್ಳರು

• ಉದಯವಾಹಿನಿ,ಶಿಡ್ಲಘಟ್ಟ

ಕಳ್ಳರು ದೇವಸ್ಥಾನ, ಮನೆ ಬೀಗ ಮುರಿದು ಹುಂಡಿ, ಒಡವೆ,ಹಣ ಕಳ್ಳತನ ಮಾಡುವುದರ ಜೊತೆಯಲ್ಲಿ ಕುರಿ, ಆಕಳು, ಮೇಕೆ ಕಳ್ಳತನ ಮಾಡುತ್ತಿದ್ದ ಖದೀಮರು ಇದೀಗ ಒಂಟಿ ಮನೆಗಳ ಬಳಿ ಕೋಳಿಗಳ ಕಳ್ಳತನಕ್ಕೆ ಮುಂದಾಗಿದ್ದು, ತಾಲ್ಲೂಕಿನ ಚಿಕ್ಕತೇಕಹಳ್ಳಿ ಗ್ರಾಮದ ಸರಸ್ವತಮ್ಮ ಹಾಗೂ ಪದ್ಮಮ್ಮ ಅವರು ಮನೆಗಳಲ್ಲಿ ಸಾಕಿದ್ದ 4-5 ಸಾವಿರ ರೂ. ಮೌಲ್ಯದ 10 ಕೋಳಿಗಳನ್ನು ರಾತ್ರೋರಾತ್ರಿ ದೋಚಿದ ಘಟನೆ ಸಂಭವಿಸಿದೆ. ಇವರು ಗ್ರಾಮದ ಹೊರವಲಯದ ಪದ್ಮಮ್ಮ ಅವರು ತಮ್ಮ ಜಮೀನಿನಲ್ಲಿ ಮನೆ ಕಟ್ಟಿಕೊಂಡಿದ್ದು, ರಾತ್ರಿ 8 ಗಂಟೆಯವರೆಗೆ ಇದ್ದು ನಂತರ ಊಟ ಮಾಡಲು ಮನೆಗೆ ಬಂದಾಗ ಲೈಟ್ ಗಳ ಸ್ವಿಚ್ ಆಫ್ ಮಾಡಿ 4 ಕೋಳಿಗಳನ್ನ ಕದ್ದೊಯ್ದಿದ್ದಾರೆ. ನಂತರ ಊಟ ಮಾಡಿ ಮಲಗಲು ಬಂದಾಗ ವಿಷಯ ಬೆಳಕಿಗೆ ಬಂದಿದೆ. ನಂತರ ಗ್ರಾಮದ ಸರಸ್ವತಮ್ಮ ಅವರು ಮನೆಯಲ್ಲಿ 10 ಗಂಟೆಗೆ ಮಲಗಿರುತ್ತಾರೆ, ಎಂದಿನಂತೆ ಬೆಳಗಿನ



ಉದಯವಾಹಿನಿ ಚಿತ್ರ

ಜಾವ ಹಸುಗಳಲ್ಲಿ ಹಾಲು ಕರೆಯುವ ಸಲುವಾಗಿ ಎದ್ದು ಗಮನಿಸಿದಾಗ ಬೆಳಕಿಗೆ ಬಂದಿದೆ ಎನ್ನುತ್ತಾರೆ. ರಾತ್ರಿ ಎಲ್ಲರೂ ಮಲಗಿದ ನಂತರ ಬೀಗ ಮುರಿದು ಶಬ್ದ ಕೇಳಿಸದಂತೆ ಕೋಳಿಗಳನ್ನು ದೋಚಿಕೊಂಡು ಪರಾರಿಯಾಗಿದ್ದಾರೆ. ಇದಕ್ಕೂ ಮುಂಚೆಯೂ ಒಮ್ಮೆ ಇದೇ ರೀತಿ ಕಳ್ಳತನವಾಗಿತ್ತು. ಆಗ ಬೀಟ್ ಪೊಲೀಸರಿಗೆ ಮಾಹಿತಿ ನೀಡಲಾಗಿತ್ತು. ಅವರು ರಾತ್ರಿ ಸಮಯದಲ್ಲಿ ಬಂದು ಓಡಾಡಿಕೊಂಡು ಹೋಗುತ್ತಿದ್ದರು. ಇತ್ತೀಚಿಗೆ ಬೀಟ್ ಪೊಲೀಸರು ಬರುವುದು ಕಡಿಮೆಯಾಗಿದೆ. ಕಳ್ಳರು ಈ ಸಮಯವನ್ನ ಸದ್ಬಳಕೆ ಮಾಡಿಕೊಂಡು ಕೋಳಿಗಳ ಕಳ್ಳತನ ಮಾಡಿರಬಹುದು ಎಂದು ಸಾರ್ವಜನಿಕರ ಮಾತಾಗಿದೆ.

# ದೇವರ ಪೂಜೆ ಎಷ್ಟು ಮುಖ್ಯವೋ ಮಕ್ಕಳಿಗೆ ಸಂಸ್ಕಾರ ಕಲಿಸುವುದು ಅಷ್ಟೇ ಮುಖ್ಯ

• ಉದಯವಾಹಿನಿ,ಶಿಡ್ಲಘಟ್ಟ

ಮಹಿಳೆಯರಿಗೆ ದೇವರ ಪೂಜೆ ಎಷ್ಟು ಮುಖ್ಯವೋ ಅದರ ಜೊತೆಯಲ್ಲಿ ಮಕ್ಕಳಿಗೆ ಸಂಸ್ಕಾರ ಕಲಿಸುವುದು ಅಷ್ಟೇ ಮುಖ್ಯವಾಗಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕರಾದ ಪ್ರಶಾಂತ್ ಸಿ.ಎಸ್ ತಿಳಿಸಿದರು.

ತಾಲ್ಲೂಕಿನ ಸಾದಲಿ ವಲಯದ ಈ. ತಿಮ್ಮಸಂದ್ರ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ ಸಿ ಟ್ರಸ್ಟ್ (ರಿ), ಸಾಮೂಹಿಕ ಶ್ರೀ ವರಮಹಾಲಕ್ಷ್ಮಿ ಪೂಜಾ ಸಮಿತಿ ಹಾಗೂ ಸ್ವಸಹಾಯ ಸಂಘಗಳ ಒಕ್ಕೂಟ ಶಿಡ್ಲಘಟ್ಟ ವಲಯ ಇವರ ಸಹಭಾಗಿತ್ವದಲ್ಲಿ ಹಮ್ಮಿಕೊಂಡಿದ್ದ ಸಾಮೂಹಿಕ ಶ್ರೀ ವರಮಹಾಲಕ್ಷ್ಮಿ ಪೂಜೆಯನ್ನು ಕಾರ್ಯಕ್ರಮದಲ್ಲಿ ಅವರು ಮಾತನಾಡಿ,ಗಂಡ ಹೆಂಡತಿಯ ನಡುವೆ ಮಕ್ಕಳು ಇರುವಾಗ ನಯ ವಿನಯ ಸಂಸ್ಕಾರದ ಜೊತೆಗೆ ಸ್ವಾಭಿಮಾನದಿಂದ ನಡೆಯುವ



ಉದಯವಾಹಿನಿ ಚಿತ್ರ

ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ

ಮಾರ್ಗದರ್ಶನ ನೀಡುವುದು, ಬೆಳೆಸುವುದು ತುಂಬಾ ಮುಖ್ಯವಾಗಿದೆ. ಧರ್ಮಸ್ಥಳ ಸಂಸ್ಥೆ ಬ್ಯಾಂಕ್ ನ ಬಿ.ಸಿ ಯಾಗಿ ಕಾರ್ಯನಿರ್ವಹಿಸುತ್ತಿದೆ, ಸದಸ್ಯರುಗಳಿಗೆ ಬ್ಯಾಂಕ್ ನಿಂದ ಸಾಲ ಸೌಲಭ್ಯಗಳನ್ನು ಒದಗಿಸಿಕೊಡಲಾಗುತ್ತಿದೆ. ಯೋಜನೆಯ ಸಮುದಾಯದ ಕಾರ್ಯಕ್ರಮಗಳಾದ ದೇವಸ್ಥಾನದ ಜೀರ್ಣೋದಾರದಕ್ಕೆ, ಹಾಲು ಉತ್ಪಾದಕ ಕಟ್ಟಡಗಳಿಗೆ ಅನುದಾನ, ವೃತ್ತಿಪರ ಶಿಕ್ಷಣ ಮಾಡುವ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ, ನಿರ್ಗತಿಕರಿಗೆ ಮಾಶಾಸನ ನೀಡಲಾಗುತ್ತಿದ್ದು, ವಿವಿಧ ಅನುದಾನಗಳ ಬಗ್ಗೆ ಮಾಹಿತಿ ನೀಡಿ,ಗ್ರಾಮಗಳ ಸುಭಿಕ್ಷಗಾಗಿ ಸಾಮೂಹಿಕ ಪೂಜೆಗಳನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಯೋಜನಾಧಿಕಾರಿ ಸುರೇಶ್ ಗೌಡ.ಎಸ್, ಸಮಾಜಸೇವಕ ಪ್ರಭಾಕರ ರೆಡ್ಡಿ ಟಿ ವಿ, ಸಮಿತಿಯ ಕೋಶಾಧಿಕಾರಿಗಳಾದ ನಾಗರಾಜ್ ರೆಡ್ಡಿ ಮತ್ತು ಉಪಾಧ್ಯಕ್ಷರಾದ ಸುಭಾಷ್ ರೆಡ್ಡಿ,ವಲಯದ ಮೇಲ್ವಿಚಾರಕ ಭೂತಯ್ಯ, ಸೇವಾಪ್ರತಿನಿಧಿಗಳು,ಪೂಜೆಯ ವ್ಯವಸ್ಥಾಪನಾ ಸಮಿತಿಯ ಸದಸ್ಯರು, ಪ್ರಗತಿ ಬಂದು ಸ್ವಸಹಾಯ ಸಂಘಗಳ ಒಕ್ಕೂಟ ಅಧ್ಯಕ್ಷರುಗಳು ಮತ್ತು ಪದಾಧಿಕಾರಿಗಳು, ಸ್ವಸಹಾಯ ಸಂಘದ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

> **ಮಕ್ಕಳಿಗೆ ವಿದ್ಯಾಭ್ಯಾಸ, ಒಳ್ಳೆಯ ಕೆಲಸ, ನಂತರ ಮದುವೆ ಹೆಂಡತಿ ಮಕ್ಕಳು ಎಂಬ ಕಾಲ ಚಕ್ರ ಎಲ್ಲಾ ಸರ್ವೇ ಸಾಮಾನ್ಯ ಆದರೆ ಮಕ್ಕಳ ಬೆಳವಣಿಗೆಯಲ್ಲಿ ಯಾವರೀತಿ ಬೆಳೆಸುತ್ತೀರಿ ಎಂಬದು ಮುಖ್ಯವಾಗಿದೆ. ಅದರಲ್ಲಿ ಹೆಣ್ಣು ಸಂಸಾರದ ಕಣ್ಣು ಈ ಸೃಷ್ಟಿ ಗೆ ಎರಡು ಕಣ್ಣುಗಳಿದ್ದಂತೆ ಅದರಲ್ಲಿ ಒಂದು ಗಂಡು ಒಂದು ಹೆಣ್ಣು. ಧಾರ್ಮಿಕ ಕಾರ್ಯಗಳನ್ನು ಮಾಡಿ ಎಲ್ಲಾ ಧರ್ಮದವರನ್ನು ಒಟ್ಟುಗೂಡಿಸುವ ಕೆಲಸ ಮಾಡಿದಂತಾಗುತ್ತದೆ. ಆದರೆ ವಿಪರ್ಯಾಸವೆಂದರೆ ಹೆಣ್ಣು ಮಕ್ಕಳ ಸಂತತಿ ಕಡಿಮೆಯಾಗುತ್ತಿದೆ, ಮಹಿಳೆಯರಿಗೆ ಹೆಣ್ಣು ಮಕ್ಕಳೆ ಶತ್ರು ಆಗಿರುವುದರಿಂದ ಹೊಟ್ಟೆಯಲ್ಲಿನ ಹೆಣ್ಣು ಭ್ರೂಣವನ್ನು ಹತ್ಯೆ ಮಾಡಲಾಗುತ್ತಿರುವುದು ನಮ್ಮ ನಿಮ್ಮೆಲ್ಲರು ನಾಳಿನ ದಿನಗಳಲ್ಲಿ ಗಂಡಿಗೆ ಹೆಣ್ಣು ಸಿಗದೆ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದರು.**
>
> ಧಾರ್ಮಿಕ ಉಪನ್ಯಾಸಕ ಪ್ರಕಾಶ್ ಬಿ.ವಿ

# ಚಿಕ್ಕನಹಳ್ಳಿ ಡೇರಿಗೆ 2.33 ಲಕ್ಷ ನಿವ್ವಳ ಲಾಭ

• ಉದಯವಾಹಿನಿ ಕೋಲಾರ

ತಾಲ್ಲೂಕಿನ ವಕ್ಕಲೇರಿ ಹೋಬಳಿಯ ಚಿಕ್ಕನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ 2023-24ನೇ ಸಾಲಿನ ಸರ್ವ ಸದಸ್ಯರ ಸಾಮಾನ್ಯ ವಾರ್ಷಿಕ ಸಭೆಯು ಗುರುವಾರ ಸಂಘದ ಕಛೇರಿಯಲ್ಲಿ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಸಿ.ಅಮರೇಶ್ ಮಾತನಾಡಿ ಸಂಘದ ಆಡಳಿತ ಮಂಡಳಿ ಹಾಗೂ ಹಾಲು ಉತ್ಪಾದಕರ ಸಹಕಾರದಿಂದ 2023-24ನೇ ಸಾಲಿನಲ್ಲಿ 3.79 ಲಕ್ಷ ಲಾಭಾಂಶ ಬಂದಿದ್ದು ಇದರಲ್ಲಿನ ನಿವ್ವಳ ಲಾಭವು 2.33 ಲಕ್ಷ ಬಂದಿದ್ದು ಈ ವರ್ಷವು ಹಾಲು ಉತ್ಪಾದಕಕರಿಗೆ ಶೇ 2.10% ಬೋನಸ್ ನೀಡಲಾಗುತ್ತದೆ ಎಂದರು, ಸಹಕಾರ ಕ್ಷೇತ್ರದಲ್ಲಿ ಟೀಕೆಗಳು ಸಹಜವಾಗಿಯೇ ಇರುತ್ತವೆ ಟೀಕೆಗಳನ್ನು ಮೆಟ್ಟಿ ಪ್ರಮಾಣಿಕವಾಗಿ ಕೆಲಸ ಮಾಡುವ ಮೂಲಕ



ಉದಯವಾಹಿನಿ ಚಿತ್ರ

ಡೈರಿಯ ಮತ್ತಷ್ಟು ಅಭಿವೃದ್ಧಿಗೆ ಉತ್ಪಾದಕರು, ಆಡಳಿತ ಮಂಡಳಿಯ ಸದಸ್ಯರು,ಸಿಬ್ಬಂದಿ ಒಟ್ಟಾಗಿ ಕೆಲಸ ಮಾಡೋಣ ಡೈರಿಗೆ ಉತ್ಪಾದಕರೇ ಶಕ್ತಿಯಾಗಿದ್ದು ಗುಣಮಟ್ಟದ ಹಾಲು ಪೂರೈಕೆಯಿಂದ ಸಂಘದಿಂದ ಸಿಗುವ ವಿಶೇಷ ಸೌಲಭ್ಯಗಳನ್ನು ಪಡೆಯಬಹುದು ಎಂದರು. ಕೋಲಾರ ಹಾಲು ಒಕ್ಕೂಟದ ವಿಸ್ತರಣಾಧಿಕಾರಿ ಎಸ್ ರಾಮಾಂಜಿನಪ್ಪ, ಆಡಳಿತ ಮಂಡಳಿ ನಿರ್ದೇಶಕರಾದ ಬಿ.ಶ್ರೀನಿವಾಸಪ್ಪ, ಸಿ ನಾಗರಾಜ್, ರಮೇಶ್, ಅಚ್ಚಪ್ಪ, ಸಿ.ಸಿ ಶ್ರೀನಿವಾಸ್, ಭಾಗ್ಯಲಕ್ಷ್ಮೀ, ಶಾರದದೇವಿ, ಸೊಣ್ಣಮ್ಮ ವೆಂಕಟಮ್ಮ ವಿಮಲಮ್ಮ, ಕಾರ್ಯದರ್ಶಿ ಆರ್ ಗೋಪಾಲಪ್ಪ, ಗ್ರಾಮಸ್ಥರಾದ ಸಿ.ಎಸ್ ಅಂಜನಗೌಡ, ವೆಂಕಟರಮಣಪ್ಪ, ಶಿವಕುಮಾರ್ ಸೇರಿದಂತೆ ಹಾಲು ಉತ್ಪಾದಕರು, ಗ್ರಾಮಸ್ಥರು ಇದ್ದರು,

> **ಹಾಲಿನ ಡೇರಿಗಳು ಅಭಿವೃದ್ಧಿಯಾಗಬೇಕಾದರೆ, ಪಕ್ಷಾತೀತವಾಗಿ ಕೆಲಸ ಮಾಡಬೇಕು. ರೈತರು ಉತ್ತಮ ಕೊಬ್ಬಿನ ಅಂಶವಿರುವ ಹಾಲು ಸರಬರಾಜು ಮಾಡಿದಾಗ ಮಾತ್ರ ಡೇರಿ ಅಭಿವೃದ್ಧಿಯತ್ತ ಸಾಗಲು ಸಾಧ್ಯವಾಗುತ್ತದೆ ಹಸುಗಳ ಹೊಸ ಹೊಸ ರೋಗಗಳು ಬಂದು ಸಾಕಾಣಿಕೆ ಕಷ್ಟವಾಗಿದ್ದು ಹೆಚ್ಚಿನ ಕಾಳಜಿ ವಹಿಸಿ ಕಾಲಕಾಲಕ್ಕೆ ವಾಕ್ಸಿನ್ ಮಾಡಿಸಬೇಕು ಎಂದರು ಕೋಮುಲ್ ಉಪ ವ್ಯವಸ್ಥಾಪಕ ಡಾ.ಮಹೇಶ್**

# ಹೈನುಗಾರಿಕೆಯಿಂದ ರೈತರಿಗೆ ನೆರವು

• ಉದಯವಾಹಿನಿ ಮುಳಬಾಗಿಲು

ರಾಜ್ಯ ಸರ್ಕಾರ ಲೀಟರ್ ಹಾಲಿಗೆ 5 ರೂ.ಹೆಚ್ಚಿಸಿ ಈ ಪೂರ್ಣ ಹಣವನ್ನು ಹಾಲು ಉತ್ಪಾದಕರಿಗೆ ನೀಡಲು ಮುಂದಾಗಿರುವುದು ಒಳ್ಳೆಯ ಬೆಳವಣಿಗೆ. ರೈತರು ಸಂಕಷ್ಟದಲ್ಲಿದ್ದು, ಇದರಿಂದ ಒಂದಷ್ಟು ಸುಧಾರಣೆ ಕಾಣಬಹುದು ಎಂದು ಕೋಚಿಮುಲ್ ನಿರ್ದೇಶಕ ಕಾಡೇನಹಳ್ಳಿ ಕೆ.ಎನ್.ನಾಗರಾಜ್ ಹೇಳಿದರು. ಬ್ಯಾಟನೂರು ಹಾಲು ಉತ್ಪಾದಕರ ಸಹಕಾರ ಸಂಘದ ಕಚೇರಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಾರ್ಷಿಕ ಸಭೆ ಉದ್ಘಾಟಿಸಿ ಮಾತನಾಡಿದರು. ಈಗಾಗಲೇ ಮಳೆ ಇಲ್ಲದೆ ಬಿತ್ತಿದ ಬೆಳೆ ಒಣಗಿ ಹೋಗುತ್ತಿದ್ದು, ರೈತ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಈಗ ಏನಿದ್ದರೂ ಅವನ ಕೈ ಹಿಡಿತಿರುವುದು ಹೈನುಗಾರಿಕೆ. ಡೇರಿಗಳಿಗೆ ಹಾಲು ಪೂರೈಕೆ ಮಾಡುತ್ತಿರುವುದರಿಂದ 15 ದಿನಕೊಮ್ಮೆ ಕಾಸು ಕೈ ಸೇರುತ್ತದೆ. ಇದರಿಂದ ಒಂದಷ್ಟು ಉಸಿರಾಡಲು ಸಾಧ್ಯವಾಗಿದೆ. ಹಾಲಿನ ಉತ್ಪಾದನಾ ವೆಚ್ಚವು ಸಹ ರೈತನಿಗೆ ಸಿಗುತ್ತಿಲ್ಲ. ಸಮಯದಲ್ಲಿ ಸರ್ಕಾರ ಹೇಳಿರುವ ಲೀಟರ್ ಹಾಲಿಗೆ 5 ರೂ. ಹೆಚ್ಚಿಸುವ ಘೋಷಣೆ ಶ್ರೀ ಜಾರಿಯಾಗಬೇಕು ಒತ್ತಾಯಿಸಿದರು.ಬ್ಯಾಟನೂರು ಡೇರಿಯ ಆಡಳಿತ ಮಂಡಳಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿ ರೈತರಿಗೆ ಅನುಕೂಲ ಕಲ್ಪಿಸಬೇಕು, ಮುಂದೆ ಸ್ವಂತ ಕಟ್ಟಡ ಕಟ್ಟಿಕೊಳ್ಳಲು ಕಾಮಗಾರಿ ಪ್ರಾರಂಭಿಸಿದರೆ ಹಾಲು ಒಕ್ಕೂಟದಿಂದ 3.5 ಲಕ್ಷ, ಕೆಎಂಎಫ್‌ನಿಂದ 4 ಲಕ್ಷ, ಶಾಸಕರ ಪ್ರದೇಶ ಅಭಿವೃದ್ಧಿ ನಿಧಿಯಿಂದ 3 ಲಕ್ಷ ರೂ. ಕೊಡಿಸಲಾಗುವುದು, ಉಳಿದಂತೆ ಸ್ಥಳಿಯ ದಾನಿಗಳ ನೆರವು ಪಡೆದು ಸಹಕಾರಿ ಭವನ ಕಟ್ಟಿಕೊಳ್ಳಬೇಕು ಎಂದರು.

# ಹಕ್ಕಿಪಿಕ್ಕಿ ಕಾಲೋನಿ ಮಕ್ಕಳಿಗೆ ಅಕ್ಕಿ,ಮೊಟ್ಟೆ ಕೊಟ್ಟಿಲ್ಲ!

## ಮಕ್ಕಳಿಗೆ ಬಿಸಿಯೂಟ, ಮೊಟ್ಟೆ, ಗರ್ಭಿಣಿಯರಿಗೆ ಆಹಾರ ಪದಾರ್ಥಗಳನ್ನು ವಿತರಿಸದೇ ಇರುವುದು ಪತ್ತೆ

• ಉದಯವಾಹಿನಿ ಕೋಲಾರ

ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಹಕ್ಕಿ ಪಿಕ್ಕಿ ಕಾಲೋನಿಯ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ, ಗರ್ಭಿಣಿಯರಿಗೆ ಅಕ್ಕಿ, ಆಹಾರ ಪದಾರ್ಥ, ಮೊಟ್ಟೆ ವಿತರಿಸದೇ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯೇ ಅಪಹಾಸ್ಯಕ್ಕೀಡಾದ ಪ್ರಕರಣ ಬೆಳಕಿಗೆ ಬಂದಿದೆ. ಕಳೆದ ವಾರ ಕರ್ನಾಟಕ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಜಿಲ್ಲೆಯ ಭೇಟಿಗೆ ಬಂದಿದ್ದಾಗ ಶ್ರೀನಿವಾಸಪುರ ತಾಲ್ಲೂಕಿನ ಪ್ರವಾಸದಲ್ಲಿ ಹಕ್ಕಿಪಿಕ್ಕಿ ಕಾಲೋನಿಯ ಅಂಗನವಾಡಿಗೆ ತೆರಳಿ ಪರಿಶೀಲಿಸಿದಾಗ ಅಲ್ಲಿನ ಮಕ್ಕಳಿಗೆ ಬಿಸಿಯೂಟ, ಮೊಟ್ಟೆ, ಗರ್ಭಿಣಿಯರಿಗೆ ಆಹಾರ ಪದಾರ್ಥಗಳನ್ನು ವಿತರಿಸದೇ ಇರುವುದು ಪತ್ತೆಯಾಗಿದೆ.

ಕೋಲಾರ ಜಿಲ್ಲೆಯ ತೀರಾ ಹಿಂದುಳಿದವರು ಬಡವರುವಾಸಿಸುವ ಹಕ್ಕಿಪಿಕ್ಕಿ ಕಾಲೋನಿಯ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಆಹಾರ ವಿತರಣೆಯಾಗದಿರುವ ಕುರಿತು ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಸರ್ಕಾರದ ಗಮನಕ್ಕೆ ತಂದಿದ್ದರು. ಸರ್ಕಾರವು ರಾಜ್ಯದಲ್ಲಿ ಗರ್ಭಿಣಿ ಮಹಿಳೆಯರಿಗೆ ಹಾಗೂ ಮಕ್ಕಳಿಗೆ ಪೌಷ್ಟಿಕಾಂಶ ದೊರಕಿಸುವ ನಿಟ್ಟಿನಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಅಧಿಕಾರಿಗಳ ಕರ್ತವ್ಯ ಲೋಪದಿಂದ ಪರಿಶಿಷ್ಟ ಪಂಗಡದ ಬಡ ಗರ್ಭಿಣಿ ಮತ್ತು ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ವಿತರಿಸದೇ



ಉದಯವಾಹಿನಿ ಚಿತ್ರ

> **ಶ್ರೀನಿವಾಸಪುರ ತಾಲ್ಲೂಕಿನ ಹಕ್ಕಿಪಿಕ್ಕಿ ಕಾಲೋನಿ ಅಂಗನವಾಡಿ ಕೇಂದ್ರದ ಲೋಪದೋಷ ಪರಿಗಣಿಸಿ ಅಂಗನವಾಡಿ ಕಾರ್ಯಕರ್ತೆ ಅಲುಮೇಲಮ್ಮ ಅವರನ್ನು ಕಡ್ಡಾಯ ರಜೆ ಮೇಲೆ ತೆರಳಲು ಸೂಚಿಸಲಾಗಿದೆ. ಅವರನ್ನು ಕರ್ತವ್ಯದಿಂದ ವಜಾಗೊಳಿಸಲು ಕ್ರಮಕೈಗೊಳ್ಳಲಾಗುವುದು.**
>
> **-ನಾರಾಯಣಸ್ವಾಮಿ, ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೋಲಾರ**
>
> **ಕೆ.ಎಸ್.ಗಣೇಶ್**

ಇರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಸರ್ಕಾರದ ಕಾರ್ಯಕ್ರಮಗಳನ್ನು ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಮೇಲಧಿಕಾರಿಗಳು ಮೇಲ್ವಿಚಾರಣೆ ಮಾಡದೇ ಇರುವುದರಿಂದ ಇಂತಹ ಘಟ ನೆಗಳು ಸಂಭವಿಸುತ್ತದೆ ಎಂದು ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ.ಕೆ.ವೈಷ್ಣವಿ ಕೋಲಾರ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕರಿಗೆ ಪತ್ರ ಬರೆದಿದ್ದರು.

**ಅನುಪಾಲನಾ ವರದಿಗೆ ಸೂಚನೆ:** ಈ ಕುರಿತು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಡಾ.ಕೆ.ವೈಷ್ಣವಿ ಬರೆದಿರುವ ಪತ್ರದಲ್ಲಿ, ಕೋಲಾರ ಜಿಲ್ಲೆಯ ವಾಸ್ತವಾಂಶದ ಬಗ್ಗೆ ಆದ್ಯತೆಯ ಮೇರೆಗೆ ಪರಿಶೀಲಿಸಿ ತಕ್ಷಣವೇ ಕರ್ತವ್ಯ ಲೋಪವೆಸಗಿರುವ ಅಧಿ ಕಾರಿ ಸಿಬ್ಬಂದಿಗಳ ವಿರುದ್ಧ ಅಗತ್ಯ ಕ್ರಮ ಕೈಗೊಂಡು ಅನುಪಾಲನಾ ವರದಿಯನ್ನು ಅತಿ ಜರೂರಾಗಿ ಸಲ್ಲಿಸಲು ಮುಖ್ಯಮಂತ್ರಿಗಳು ನಿರ್ದೇಶನ ನೀಡಿದ್ದಾರೆಂದು ತಿಳಿಸಿದ್ದರು. ಎರಡು ತಿಂಗಳಿನಿಂದ ಮೊಟ್ಟೆ ಇಲ್ಲ: ಅನುಪಾಲನಾ ವರದಿ ನೀಡಿರುವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಸೆ.12ರಂದು ಶ್ರೀ ನಿವಾಸಪುರ ವೃತ್ತದ ಮೇಲ್ವಿಚಾರಕಿ ಹಾಗೂ ಶ್ರೀನಿವಾಸಪುರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜಂಟಿ ಭೇಟಿ ನೀಡಿ ಗರ್ಭಿಣಿ, ಬಾಣಂತಿಯರ ಸಭೆ ನಡೆಸಿ ಅಂಗನವಾಡಿ ಕಾರ್ಯಕರ್ತೆಗೆ ನೋಟಿಸ್ ಜಾರಿ ಮಾಡಲಾಗಿದೆ. ಕೋಳಿ ಮೊಟ್ಟೆಯನ್ನು ವಿತರಿಸಲು ಸೂಚಿಸಲಾಗಿದೆ. ಆ ಸಂಬಂಧ ವೃತ್ತದ ಮೇಲ್ವಿಚಾರಕಿಗೂ ನೋಟಿಸ್ ನೀಡಲಾಗಿದೆಯೆಂದು ತಿಳಿಸಿದ್ದಾರೆ.

> **ಕೋಲಾರ ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ಶ್ರೀನಿವಾಸಪುರ ತಾಲ್ಲೂಕಿನ ಹಕ್ಕಿಪಿಕ್ಕಿ ಕಾಲೋನಿಯ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ್ದು, ಈ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರದಲ್ಲಿ ಮೊಟ್ಟೆ ವಿತರಿಸದೇ ಇರುವುದು ಹಾಗೂ ಮಕ್ಕಳಿಗೆ ಬಿಸಿಯೂಟ ತಯಾರಿಸದೇ ಇರುವುದು ಕಂಡು ಬಂದಿತ್ತು.**
>
> -ಡಾ.ನಾಗಲಕ್ಷ್ಮೀ ಚೌಧರಿ, ಅಧ್ಯಕ್ಷರು, ಕರ್ನಾಟಕ ಮಹಿಳಾ ಆಯೋಗ

### ಅಂಗನವಾಡಿ ಕಾರ್ಯಕರ್ತೆ ಸೇವೆಯಿಂದ ವಜಾ

**ಅಂಗನವಾಡಿ ಕೇಂದ್ರದ ಎಲ್ಲಾ ನ್ಯೂನತೆಗಳಿಗೆ ಕಾರಣ ಇವರೇ ಎಂದು ಗುರುತಿಸಿ ಅಂಗನವಾಡಿ ಕೇಂದ್ರದ ಕಾರ್ಯಕರ್ತೆ ಅಲುಮೇಲಮ್ಮರನ್ನು ಬುಧವಾರದಿಂದ ಒಂದು ತಿಂಗಳ ಕಾಲ ವೇತನ ರಹಿತ ಕಡ್ಡಾಯ ರಜೆ ಮೇಲೆ ತೆರಳಲು ಕ್ರಮಕೈಗೊಳ್ಳಲಾಗಿದೆ. ಜಿಲ್ಲಾ ಅಂಗನವಾಡಿ ಕಾರ್ಯಕರ್ತೆ ಸಹಾಯಕಿ ಯರ ಆಯ್ಕೆ ಸಮಿತಿಯ ಅಧ್ಯಕ್ಷರ ಅನುಮೋದನೆಯನ್ನು ಪಡೆದು ಅಂಗನವಾಡಿ ಕಾರ್ಯಕರ್ತೆ ಅಲುಮೇಲಮ್ಮರನ್ನು ಕರ್ತವ್ಯದಿಂದ ವಜಾಗೊಳಿಸಲು ಕ್ರಮಕೈಗೊಳ್ಳಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಉಪ ನಿರ್ದೇಶಕರು ಅನುಪಾಲನಾ ವರದಿಯಲ್ಲಿ ತಿಳಿಸಿದ್ದಾರೆ.**

## ಮಿನಿ ನ್ಯೂಸ್

### ರಾಜಕಾರಣಿಗಳನ್ನು ಹನಿಟ್ರ್ಯಾಪ್ ಮಾಡುತ್ತಿದ್ದರಾ ಮುನಿರತ್ನ

• ಉದಯವಾಹಿನಿ ರಾಮನಗರ

ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಅತ್ಯಾಚಾರ ಆರೋಪದ ದೂರು ನೀಡಿರುವ ಸಂತ್ರಸ್ತ ಮಹಿಳೆ, ಮುನಿರತ್ನ ಮಹಾನಗರ ಪಾಲಿಕೆ ಸದಸ್ಯರು, ಪೊಲೀಸರು, ರಾಜಕೀಯ ಎದುರಾಳಿಗಳು, ಅಧಿಕಾರಿಗಳು ಸೇರಿ ಹಲವರನ್ನು ಹನಿಟ್ರ್ಯಾಪ್ ಮಾಡಲು ನನ್ನನ್ನು ಬಳಸಿಕೊಂಡಿದ್ದರು ಎಂಬ ಸಂಗತಿಯನ್ನು ದೂರಿನಲ್ಲಿ ತಿಳಿಸಿದ್ದಾರೆ. ಈ ಕೃತ್ಯಕ್ಕೆ ಕೆಲ ಎಚ್‌ಐವಿ ಸೋಂಕಿತ ಮಹಿಳೆಯರನ್ನೂ ಬಳಸಿಕೊಂಡಿದ್ದಾರೆ. ಎಲ್ಲದರ ವೀಡಿಯೊಗಳನ್ನು ತನ್ನ ಬಳಿ ಇಟ್ಟುಕೊಂಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಈ ಹಿಂದೆ ಬಿಜೆಪಿ ಸರಕಾರ ಆಡಳಿತದಲ್ಲಿದ್ದಾಗ ಬಿಜೆಪಿಯ ಕೆಲವು ನಾಯಕರೇ ಸಿ.ಡಿ. ಬಗ್ಗೆ ಪ್ರಸ್ತಾಪಿಸಿದ್ದರು. ಹನಿಟ್ರ್ಯಾಪ್ ಸಿ.ಡಿ. ರಾಜಕೀಯ ವಲಯದಲ್ಲಿ ಸಾಕಷ್ಟು ಚರ್ಚೆಗೆ ಎಡೆಮಾಡಿಕೊಟ್ಟಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

### ಚಿರತೆಗೆ ಹಾರಿಸಿದ್ದ ಗುಂಡು ತಗುಲಿ ನಾಲ್ವರಿಗೆ ಗಾಯ

• ಉದಯವಾಹಿನಿ ಚಾಮರಾಜನಗರ

ಚಿರತೆ ಓಡಿಸಲು ಹಾರಿಸಿದ ಗುಂಡು ತಗುಲಿ ನಾಲ್ವರು ಗಾಯಗೊಂಡ ಘಟನೆ ಚಾಮರಾಜನಗರದಲ್ಲಿ ನಡೆದಿದೆ. ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲ್ಲೂಕಿನ ಮಲ್ಲಿಗೆಹಳ್ಳಿ ಗ್ರಾಮದಲ್ಲಿ ಈ ಘಟನೆ ನಡೆದಿದೆ. ರೈತರ ಜಮೀನಿನಲ್ಲಿ ಅಡಗಿದ್ದ ಚಿರತೆ ಹಿಡಿಯಲು ಅರಣ್ಯ ಸಿಬ್ಬಂದಿ ಜೊತೆಗೆ ಗ್ರಾಮಸ್ಥರು ತೆರಳಿದ್ದರು. ಈ ವೇಳೆ ಚಿರತೆ ಅರಣ್ಯ ಸಿಬ್ಬಂದಿ ಮೇಲೆ ಹಲ್ಲೆ ಮಾಡಲು ಯತ್ನಿಸಿದ್ದು, ಪ್ರಾಣಪಾಯದಿಂದ ತಪ್ಪಿಸಿಕೊಳ್ಳಲು ಗುಂಡು ಹಾರಿಸಿದ್ದಾರೆ. ಈ ಗುಂಡು ಮದ್ದೂರಿನ ರವಿ, ಶಿವು, ರಂಗಸ್ವಾಮಿ, ಮೂರ್ತಿ ಎನ್ನುವವರಿಗೆ ತಗುಲಿ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯವಾಗಿದ್ದ ಚಿರತೆಯೂ ಕೂಡ ಸ್ಥಳದಲ್ಲೇ ಮೃತಪಟ್ಟಿದೆ ಎನ್ನಲಾಗಿದೆ.

### ಕಾಮಗಾರಿಗಳ ಪ್ರಗತಿ ಪರಿಶೀಲನೆ

• ಉದಯವಾಹಿನಿ ಮಾಗಡಿ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ತಾಲ್ಲೂಕಿನ ಮಾಡಬಾಳ್ ಮತ್ತು ಕಲ್ಯಾ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ವಿವಿಧ ಕಾಮಗಾರಿಗಳನ್ನು ವೀಕ್ಷಿಸಿದರು. ತಾಲ್ಲೂಕಿನ ಮಾಡಬಾಳ್ ಗ್ರಾ.ಪಂ.ವ್ಯಾಪ್ತಿಯ ಸೊಣ್ಣೇನಹಳ್ಳಿ ಮತ್ತು ಬಾಳೆಕಟ್ಟೆ ಗ್ರಾಮದ ಕಮ್ಯುನಿಟಿ ಸೋಕ್ ಪಿಟ್ ತೂಬಿನಕೆರೆ ಗ್ರಾಮದ ಚರಂಡಿ ಸಂಸ್ಕರಣಾ ಕಾಮಗಾರಿ, ಗೊಲ್ಲರಹಟ್ಟಿ ಮತ್ತು ವಿಠಲಾಪುರ ಗ್ರಾಮದ ಕಮ್ಯುನಿಟಿ ಸೋಕ್ ಪಿಟ್, ದ್ರವತ್ಯಾಜ್ಯ ಘಟಕ ಕಾಮಗಾರಿ ವೀಕ್ಷಿಸಿ ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದರು. ಇದಕ್ಕೂ ಮುನ್ನ ಮಾಡಬಾಳ್ ಗ್ರಾಮ ಪಂಚಾಯಿತಿಯಲ್ಲಿ ಸಭೆ ನಡೆಸಿದ ಸಿಇಒ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಮಾನವ ದಿನಗಳ ಸೃಜನೆ, ವೈಯಕ್ತಿಕ ಕಾಮಗಾರಿಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು. ಈಗಾಗಲೇ ನರೇಗಾ ಯೋಜನೆಯಲ್ಲಿ ನಮ್ಮ ಜಿಲ್ಲೆ ಪ್ರಗತಿ ಸಾಧಿಸಿದ್ದು, ಮುಂದೆಯೂ ಇದು ಹೀಗೇ ಸಾಗಬೇಕು ಎಂದು ಹೇಳಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಚಿಕ್ಕಸುಬ್ಬಯ್ಯ, ಕಾರ್ಯನಿರ್ವಾಹಕ ಅಧಿಕಾರಿ ಜೈಪಾಲ್, ಸಹಾಯಕ ನಿರ್ದೇಶಕ ಎಚ್.ಕೆ. ಗಂಗಾಧರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಂಯೋಜಕ ಮಹೇಶ್, ಸಹಾಯಕ ಅಭಿಯಂತರರಾದ ಪ್ರದೀಪ್, ಐಶ್ವರ್ಯ, ಎಸ್.ಬಿ.ಎಂ ಸಮಾಲೋಚಕ ಸೀನಪ್ಪ, ಐಇಸಿ ಸಂಯೋಜಕ ರವಿ ಅತ್ನಿ, ಪಂಚಾಯಿತಿ ಸಿಬ್ಬಂದಿಗಳು ಭಾಗವಹಿಸಿದ್ದರು.

### ವಿದ್ಯೆ ಜೊತೆಗೆ ಸಂಸ್ಕಾರ ರೂಢಿಸಿಕೊಳ್ಳಿ

• ಉದಯವಾಹಿನಿ ರಾಮನಗರ

ವಿದ್ಯಾರ್ಥಿಗಳಿಗೆ ವಿದ್ಯೆಯಷ್ಟೇ ಸಂಸ್ಕಾರವೂ ಅಷ್ಟೇ ಮುಖ್ಯ. ಸಂಸ್ಕಾರವಿಲ್ಲದ ವಿದ್ಯೆಗೆ ಮನ್ನಣೆ ಸಿಗದು. ನಾಡು-ನುಡಿ ಬಗ್ಗೆ ಅಭಿಮಾನ, ಹಿರಿಯರನ್ನು ಗೌರವಿಸುವುದು, ತಂದೆ-ತಾಯಿಗೆ ಹೆಮ್ಮೆ ಎನಿಸುವಂತಹ ನಡತೆಯನ್ನು ವಿದ್ಯಾರ್ಥಿಗಳು ರೂಢಿಸಿಕೊಳ್ಳಬೇಕು' ಎಂದು ಉಪನ್ಯಾಸಕ ತುಳಸಿ ರಾಮಶೆಟ್ಟಿ ಸಲಹೆ ನೀಡಿದರು. ತಾಲ್ಲೂಕಿನ ಲಕ್ಷ್ಮಿಪುರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಇತ್ತೀಚೆಗೆ ನಡೆದ ಪ್ರಥಮ ಪಿಯು ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಮಾತನಾಡಿದ ಅವರು, ನಮ್ಮದು ಸಾಂಸ್ಕೃತಿಕವಾಗಿ ಶ್ರೀಮಂತವಾದ ನಾಡು. ನಮ್ಮಲ್ಲಿರುವ ವೈವಿಧ್ಯಮಯ ಜಾನಪದ ಕಲೆಗಳನ್ನು ಪೋಷಿಸಿ ಉಳಿಸುವ ಜವಾಬ್ದಾರಿಯೂ ಇಂದಿನ ಯುವಜನರ ಕೈಯಲ್ಲಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಪ್ರಾಂಶುಪಾಲ ಹನುಮಂತರಾಯ, ವಿದ್ಯಾರ್ಥಿಗಳು ಕೇವಲ ಪಠ್ಯಕ್ಕೆ ಮಾತ್ರ ಸೀಮಿತವಾಗದೆ, ಪಠ್ಯೇತರ ಚಟುವಟಿಕೆಗಳಲ್ಲೂ ಆಸಕ್ತಿ ಬೆಳೆಸಿಕೊಳ್ಳಬೇಕು. ಕ್ರೀಡೆ ಸೇರಿದಂತೆ ಇತರ ಚಟುವಟಿಕೆಗಳು ನಮ್ಮ ವ್ಯಕ್ತಿತ್ವ ವಿಕಸನದಲ್ಲಿ ಮುಖ್ಯ ಪಾತ್ರ ವಹಿಸುತ್ತವೆ. ಅವುಗಳಲ್ಲೇ ಸಾಧನೆ ಮಾಡಿ ಬದುಕು ರೂಪಿಸಿಕೊಳ್ಳುವ ಅವಕಾಶಗಳು ಸಾಕಷ್ಟಿವೆ' ಎಂದು ತಿಳಿಸಿದರು.

### ಮುನಿರತ್ನ ಶಾಸಕತ್ವ ವಜಾಕ್ಕೆ ಆಗ್ರಹ

• ಉದಯವಾಹಿನಿ ಮಂಡ್ಯ

ಬೆಂಗಳೂರು ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಮುನಿರತ್ನ ಅವರು ದಲಿತರು, ಒಕ್ಕಲಿಗ ಸಮಾಜದ ಬಗ್ಗೆ ಕೀಳು ಮಟ್ಟದಲ್ಲಿ ಮಾತನಾಡಿದ್ದಾರೆ. ಈ ಕಾರಣದಿಂದ ಅವರ ಶಾಸಕತ್ವವನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ರೈತ ಸಂಘಟನೆ, ದಲಿತ ಸಂಘಟನೆಗಳ ಒಕ್ಕೂಟ ಮತ್ತು ಪ್ರಗತಿಪರ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ನಡೆಸಲಾಯಿತು. ಪಾಂಡವಪುರ ಪಟ್ಟಣದ ಐದು ದೀಪದ ವೃತ್ತದ ಬಳಿ ಸೇರಿದ ಪ್ರತಿಭಟನಾಕಾರರು ತಾಲ್ಲೂಕು ಕಚೇರಿಯಗೆ ಮೆರವಣಿಗೆ ನಡೆಸಿದರು. ಈ ವೇಳೆ ಶಾಸಕ ಮುನಿರತ್ನ ವಿರುದ್ಧ ಧಿಕ್ಕಾರದ ಘೋಷಣೆಯನ್ನು ಕೂಗಿ, ಮುನಿರತ್ನ ಅವರ ಶಾಸಕತ್ವವನ್ನು ರದ್ದುಮಾಡಿ ಎಂದು ಪ್ರತಿಭಟನೆಯಲ್ಲಿ ಆಗ್ರಹಿಸಿದರು. ಈ ವೇಳೆ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ಎ.ಎಲ್ ಕೆಂಪುಗೌಡ, ಎರಡು ಬಾರಿ ಅಧಿಕಾರದಲ್ಲಿ ಇದ್ದವರು, ಅವರಿಗೆ ಏನು ಮಾತಾಡಬೇಕು ಎಂದು ಕನಿಷ್ಠ ಜ್ಞಾನ ಇಲ್ಲ. ಅಂದಮೇಲೆ ನಾವು ಯೋಚನೆ ಮಾಡಬೇಕು. ಇದು ನಮ್ಮ ರಾಜ್ಯದಲ್ಲಿ ಅಂತ ಅಲ್ಲ, ಇಡಿ ದೇಶದಲ್ಲೇ ಈ ತರ ಲಘುವಾಗಿ ಮಾತನಾಡುವುದು ಜಾಸ್ತಿ ಆಗಿದೆ.'

ಅಂತರಾಳದಿಂದ...
EDITORIAL

# ಇದು ಒಕ್ಕೂಟ ವ್ಯವಸ್ಥೆಗೆ ಮಾರಕ

ದೇಶಾದ್ಯಂತ ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸುವ ಸಂಬಂಧ ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅಧ್ಯಕ್ಷತೆಯ ಉನ್ನತ ಮಟ್ಟದ ಸಮಿತಿ ಮಾಡಿರುವ ಶಿಫಾರಸ್ಸುಗಳನ್ನು ಕೇಂದ್ರ ಸಚಿವ ಸಂಪುಟ ಬುಧವಾರ ಅಂಗೀಕರಿಸಿದೆ. ದೇಶದ ಆರ್ಥಿಕ, ಸಾಮಾಜಿಕ ಅಭಿವೃದ್ಧಿಗೆ ಹಾಗೂ ಜನಸಾಮಾನ್ಯರ ಹಿತದೃಷ್ಟಿಯಿಂದ ಯಾವುದೇ ಕಾರ್ಯಕ್ರಮ ರೂಪಿಸದ ಮೋದಿ ನೇತೃತ್ವದ ಕೇಂದ್ರ ಸರಕಾರ ತನ್ನ ರಹಸ್ಯ ಕಾರ್ಯಸೂಚಿಯನ್ನು ಕಾರ್ಯಗತಗೊಳಿಸಲು ಇನ್ನಿಲ್ಲದ ಆಸಕ್ತಿ ತೋರಿಸುತ್ತಿದೆ ಎಂಬುದು ಮತ್ತೆ ಸಾಬೀತಾಗಿದೆ. ಇದು ಪ್ರಾಯೋಗಿಕವಲ್ಲ ಹಾಗೂ ಸಂವಿಧಾನ ವಿರೋಧಿಯಾದುದು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಹೇಳಿದ್ದಾರೆ. ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರತಿಕ್ರಿಯೆ ವ್ಯಕ್ತಪಡಿಸಿ ಇದು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾದ ನಡೆ ಮಾತ್ರವಲ್ಲ ಅನುಷ್ಠಾನಗೊಳಿಸಲು ಅಸಾಧ್ಯವಾದ ಕ್ರಮ ಎಂದಿದ್ದಾರೆ. ಇದರಿಂದ ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆಯ ತಳಪಾಯವೇ ಕುಸಿಯುತ್ತದೆ ಎಂಬ ಸಿದ್ದರಾಮಯ್ಯನವರ ಮಾತು ನ್ಯಾಯ ಸಮ್ಮತವಾಗಿದೆ. ಇದು ಪ್ರಜಾಪ್ರಭುತ್ವ ವಿರೋಧಿ ಮಾತ್ರವಲ್ಲ ದೇಶವನ್ನು ಒಂದು ಪಕ್ಷದ ಆಡಳಿತದತ್ತ ತಳ್ಳುತ್ತದೆ ಎಂದು ಉಭಯ ಕಮ್ಯುನಿಸ್ಟ್ ಪಕ್ಷಗಳು ಹೇಳಿವೆ. ಒಂದು ದೇಶ, ಒಂದು ಚುನಾವಣೆ, ಒಂದು ದೇಶ ಒಂದು ಧರ್ಮ ಒಂದು ದೇಶ ಒಂದು ಭಾಷೆ, ಒಂದು ದೇಶ ಒಂದು ಆಹಾರ ಪದ್ಧತಿ–ಇದು ಸಂಘ ಪರಿವಾರದ ರಹಸ್ಯ ಕಾರ್ಯಸೂಚಿ ಇದು ಭಾರತದ ವೈವಿಧ್ಯತೆಯನ್ನು ನಾಶ ಮಾಡುವ ಬಹುತ್ವ ಭಾರತವನ್ನು ಮನುವಾದಿ ಹಿಂದೂ ರಾಷ್ಟ್ರವನ್ನಾಗಿ ಮಾಡುವ ಹಾಗೂ ಸಂವಿಧಾನ ಮತ್ತು ಒಕ್ಕೂಟ ವ್ಯವಸ್ಥೆಯನ್ನು ನಾಶ ಮಾಡುವ ಮಸಲತ್ತು ಎಂದರೆ ತಪ್ಪಿಲ್ಲ

> ಪ್ರತಿಪಕ್ಷ ನಾಯಕರು ಹಾಗೂ ಕಾನೂನು ಪರಿಣಿತರೊಂದಿಗೆ ಸಮಾಲೋಚನೆ ನಡೆಸದೆ, ಒಮ್ಮತ ಮೂಡಿಸದೆ ಕೈಗೊಂಡ ಕ್ರಮ ಇದೆಂದು ಹೇಳಿದರೆ ಅತಿಶಯೋಕ್ತಿ ಅಲ್ಲ ಈ ಕುರಿತು ಕೋವಿಂದ್ ಸಮಿತಿ ಹದಿನೆಂಟು ಶಿಫಾರಸ್ಸುಗಳನ್ನು ಮಾಡಿತ್ತು ಈ ಪೈಕಿ ಹೆಚ್ಚಿನ ತಿದ್ದುಪಡಿಗಳಿಗೆ ರಾಜ್ಯಗಳ ವಿಧಾನಸಭೆಗಳ ಒಪ್ಪಿಗೆ ಅಗತ್ಯವಿಲ್ಲ ಎಂಬುದು ಗಮನಾರ್ಹ. ಈ ಬಗ್ಗೆ ಪ್ರತಿಪಕ್ಷ ನಾಯಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಇದು ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಿಗೆ ಒಟ್ಟಿಗೆ ಚುನಾವಣೆ ನಡೆಯಬೇಕೆಂದರೆ ಸಂವಿಧಾನಕ್ಕೆ ಕೆಲವು ತಿದ್ದುಪಡಿಗಳನ್ನು ತರಬೇಕಾಗುತ್ತದೆ. ಹೆಚ್ಚುವರಿಯಾಗಿ ಭಾರೀ ಸಂಖ್ಯೆಯಲ್ಲಿ ಇವಿಎಂ ಮತ್ತು ವಿವಿ ಪ್ಯಾಟ್ ಯಂತ್ರಗಳು ಬೇಕಾಗುತ್ತವೆ. ಇದಕ್ಕಾಗಿ ಕೋಟ್ಯಂತರ ರೂ.ಗಳನ್ನು ವ್ಯಯಿಸಬೇಕಾಗುತ್ತದೆ. ಸಂಸತ್ ಅವಧಿಗೆ ಸಂಬಂಧಿಸಿದಂತೆ ಸಂವಿಧಾನದ 83ನೇ ವಿಧಿಗೆ ತಿದ್ದುಪಡಿ ತರಬೇಕಾಗುತ್ತದೆ. ರಾಷ್ಟ್ರಪತಿಗಳಿಂದ ಲೋಕಸಭೆಯನ್ನು ವಿಸರ್ಜಿಸಲು ಅನುಕೂಲ ಮಾಡಿಕೊಡುವ ಸಂವಿಧಾನದ 85ನೇ ವಿಧಿ, ವಿಧಾನಸಭೆಗಳ ಅವಧಿಗೆ ಸಂಬಂಧಿಸಿದಂತೆ 174ನೇ ವಿಧಿ, ವಿಧಾನಸಭೆ ವಿಸರ್ಜನೆಗೆ 356 ವಿಧಿಗೆ ತಿದ್ದುಪಡಿ ತರಬೇಕಾಗುತ್ತದೆ.

ಭಾರತಕ್ಕೆ 1947ರಲ್ಲಿ ಸ್ವಾತಂತ್ರ್ಯ ಬಂದ ನಂತರ ನಮ್ಮ ಸಂವಿಧಾನ ನಿರ್ಮಾಪಕ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಮತ್ತು ಸ್ವಾತಂತ್ರ್ಯ ಚಳವಳಿಯ ನೇತಾರ ಮಹಾತ್ಮಾ ಗಾಂಧಿ, ಜವಾಹರಲಾಲ್ ನೆಹರೂ ಮತ್ತು ವಲ್ಲಭಭಾಯಿ ಪಟೇಲ್ ಅವರು ಹಲವಾರು ಧರ್ಮ, ಭಾಷೆ, ಜನಾಂಗ ಹಾಗೂ ಸಂಸ್ಕೃತಿಗಳನ್ನು ಹೊಂದಿರುವ ಭಾರತಕ್ಕೆ ಒಕ್ಕೂಟ ವ್ಯವಸ್ಥೆ (ಫೆಡರಲ್ ಸೂಕ್ತ ಎಂದು ಅಂಗೀಕರಿಸಿದರು. ಈ ಒಕ್ಕೂಟ ವ್ಯವಸ್ಥೆ ಬಿಜೆಪಿಯ ಸೈದ್ಧಾಂತಿಕ ಮೂಲವಾದ ಆರೆಸ್ಸೆಸ್ ಇಷ್ಟವಾಗಿರಲಿಲ್ಲ. ಸಂಘದ ಎರಡನೇ ಸರಸಂಘಚಾಲಕ ಮಾಧವ ಸದಾಶಿವ ಗೋಳ್ವಲ್ಕರ್ ಅವರು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಒಪ್ಪಿಕೊಂಡಿರಲಿಲ್ಲ. ಒಲ್ಲದ ಮನಸ್ಸಿನಿಂದ ಚುನಾವಣೆ ಮೂಲಕ ಅಧಿಕಾರ ಹಿಡಿದು ಹಿಂದೂ ರಾಷ್ಟ್ರದ ಗುರಿ ಸಾಧಿಸಲು ಹಿಂದಿನ ಜನಸಂಘ ಇಂದಿನ ಬಿಜೆಪಿ) ಅನಿವಾರ್ಯವಾಗಿ ಒಕ್ಕೂಟ ವ್ಯವಸ್ಥೆಯನ್ನು ಒಪ್ಪಿಕೊಂಡಿತು. ಆದರೆ ಅದರ ಮೂಲ ಗುರಿ ಹಿಂದೂ ರಾಷ್ಟ್ರ ನಿರ್ಮಾಣ. ಈ ಗುರಿ ಸಾಧನೆಗಾಗಿ ಚುನಾವಣಾ ಪದ್ಧತಿಯನ್ನು ಒಪ್ಪಿಕೊಂಡು ಅಧಿಕಾರ ಹಿಡಿದು ಕೂತಿದೆ.

ದೇಶದಲ್ಲಿ 1967ಕ್ಕಿಂತ ಮುಂಚೆ ಲೋಕಸಭೆ ಹಾಗೂ ವಿಧಾನಸಭೆಗಳಿಗೆ ಒಟ್ಟಿಗೆ ಚುನಾವಣೆ ನಡೆಯುತ್ತಿತ್ತು. ಆಗ ಕೇಂದ್ರ ಹಾಗೂ ರಾಜ್ಯಗಳಲ್ಲಿ ಕಾಂಗ್ರೆಸ್ ಏಕಸ್ವಾಮ್ಯವಿತ್ತು ಐದು ವರ್ಷಗಳ ಕಾಲ ಸರಕಾರಗಳು ಸ್ಥಿರವಾಗಿರುತ್ತಿದ್ದವು. ಆದರೆ 1967ರ ನಂತರ ಮೊದಲ ಬಾರಿ ಕೆಲವು ರಾಜ್ಯಗಳಲ್ಲಿ ಕಾಂಗ್ರೆಸೇತರ ಪಕ್ಷಗಳು ಸಂಯುಕ್ತ ರಂಗ ಮಾಡಿಕೊಂಡು ಅಧಿಕಾರಕ್ಕೆ ಬಂದವು. 1977ರಲ್ಲಿ ಕೇಂದ್ರದಲ್ಲೂ ಮೊರಾರ್ಜಿ ದೇಸಾಯಿ ಅವರ ನೇತೃತ್ವದಲ್ಲಿ ಕಾಂಗ್ರೆಸೇತರ ಸರಕಾರ ಬಂತು. ಇದರ ಪರಿಣಾಮವಾಗಿ ರಾಜ್ಯಗಳಲ್ಲಿ ಪಕ್ಷಾಂತರದಂತಹ ಪಿಡುಗು ಆರಂಭವಾಗಿ ಚುನಾಯಿತ ಸರಕಾರಗಳು ಉರುಳಿ ವಿಧಾನಸಭೆಗೆ ಮಧ್ಯಂತರ ಚುನಾವಣೆ ನಡೆಸುವುದು ಅನಿವಾರ್ಯವಾಯಿತು. ಇದು ಜನತಂತ್ರದ ಸಹಜ ಪ್ರಕ್ರಿಯೆ ಹೀಗೆ ಬೆಳೆದ ಭಾರತದ ಜನತಂತ್ರ ವ್ಯವಸ್ಥೆ ಈಗ ಪಕ್ವವಾಗಿದೆ. ಇಂಥ ಸನ್ನಿವೇಶದಲ್ಲಿ ಏಕಕಾಲದಲ್ಲಿ ಚುನಾವಣೆ ನಡೆಸಿದರೂ ರಾಜಕೀಯ ಅಸ್ಥಿರತೆ ಉಂಟಾದರೆ ಮಧ್ಯಂತರ ಚುನಾವಣೆ ನಡೆಸದೆ ರಾಷ್ಟ್ರಪತಿ ಆಡಳಿತವನ್ನು ಹೇರಿ ರಾಜ್ಯಪಾಲರ ಮೂಲಕ ಮತ್ತೆ ಚುನಾವಣೆ ಬರುವವರೆಗೆ ಕೇಂದ್ರದ ಆಡಳಿತ ಹೇರಲು ಮೋದಿ ನೇತೃತ್ವದ ಬಿಜೆಪಿ ಸರಕಾರ ಬಯಸಿದೆ. ಇದು ಅತ್ಯಂತ ವಿಭಿನ್ನವಾದ ಒಕ್ಕೂಟ ದೇಶ ಬಹುತ್ವ ಈ ನೆಲದ ಸತ್ವ ಇಂಥಲ್ಲಿ ಒಂದೇ ದೇಶ, ಒಂದೇ ಧರ್ಮ, ಒಂದೇ ಉಡುಪು, ಒಂದೇ ಆಹಾರ ಪದ್ಧತಿ, ಒಂದೇ ಚುನಾವಣೆ ಎಂದು ಏನೇನೋ ಮಾಡಲು ಹೊರಟರೆ ಅದು ದೇಶದ ಏಕತೆಗೆ ಮಾರಕವಾಗಿತ್ತದೆ. ಬ್ರಿಟಿಷ್ ಆಡಳಿತಕ್ಕಿಂತ ಮೊದಲು ಇಲ್ಲಿ 550 ರಾಜ ಸಂಸ್ಥಾನಗಳಿದ್ದವು. ಪ್ರತೀ ಸಂಸ್ಥಾನಕ್ಕೆ ಒಬ್ಬ ರಾಜ ಇರುತ್ತಿದ್ದ ಆದರೆ ಸ್ವಾತಂತ್ರ್ಯ ಬಂದ ನಂತರ ಅಂದಿನ ಗೃಹ ಮಂತ್ರಿ ವಲ್ಲಭಭಾಯಿ ಪಟೇಲರು ಎಲ್ಲಾ ರಾಜ–ಮಹಾರಾಜರ ಸಭೆ ಕರೆದು ಸ್ವತಂತ್ರ ಭಾರತದಲ್ಲಿ ತಮ್ಮ ಸಂಸ್ಥಾನಗಳನ್ನು ವಿಲೀನಗೊಳಿಸಲು ಮನವೊಲಿಸಿದರು. ವಿಲೀನಕ್ಕೆ ಒಪ್ಪದವರ ಮೇಲೆ ತೀವ್ರ ಒತ್ತಡ ತಂದರು. ಒಪ್ಪಿ ಸಹಿ ಹಾಕಿದವರಲ್ಲಿ ನಮ್ಮ ರಾಜ್ಯದ ಜಮಖಂಡಿಯ ರಾಜ ಪಟವರ್ಧನ ಅವರು ಮೊದಲನೆಯವರು. ಕೆಲವು ಕಡೆ ಸೇನಾ ಕಾರ್ಯಾಚರಣೆ ನಡೆಸಿ ಒಪ್ಪಿಸಲಾಯಿತು.




• ಹಿಂದಿನ ಸಂಚಿಕೆಯಿಂದ

## 1ನೆಯ ಅಧ್ಯಾಯ

ಕಬ್ಬಿನ ಹಾಲಿನೋಪಾದಿಯಲ್ಲಿ ಸ್ವಾದುವಾದ ಉದಕವುಳ್ಳ ಕೊಳಗಳುಳ್ಳದ್ದಾಗಿ, ಭೇರಿ ಮದ್ದಳ ನಿಸ್ಸಾಳ ವೀಣೆ ವಾದ್ಯಧ್ವನಿಗಳಿಂದ ಅಪೂರ್ವವಾಗಿ, ತಪಸ್ವಿಗಳಿಂದಲೂ ಸಿದ್ಧರಿಂದಲೂ ನಿಬಿಡವಾಗಿ, ದೇವಲೋಕದ ರೀತಿಯಲ್ಲಿ ಅತಿಸೌಖ್ಯಕರವಾದ ಮನೆಗಳುಳ್ಳದ್ದಾಗಿ, ಉತ್ತಮರಾದ ಭಟರ ಸಮೂಹವುಳ್ಳದ್ದಾಗಿ, ವನಾಂತರಗಳಲ್ಲಿರುವ ಅತಿಭಯಂಕರವಾದ ಸಿಂಹವ್ಯಾಘ್ರಗಳನ್ನೂ ಗರ್ಜಿಸುವ ಕಾಡುಹಂದಿ ಮೊದಲಾದ ದುಷ್ಟಪ್ರಾಣಿಗಳನ್ನೂ ಎಬ್ಬಿಸಿ ಅತಿವೇಗವಾದ ಹಸ್ತಚಾತುರಗಳಿಂದಲೂ ಬಾಹುಬಲದಿಂದಲೂ ಸಂಹರಿಸುವ ಪರಾಕ್ರಮಿಗಳಿಂದ ಪರಿಪೂರ್ಣವಾದ್ದಾಗಿ, ಅಸಂಖ್ಯಾತರಾದ ಮಹಾರಥಿಕರಿಂದ ಇಟ್ಟಣಿಸಿದ್ದಾಗಿ ಸದ್ಗುಣವಂತರೂ ಸಾಂಗವೇದಾಧ್ಯಯನ ಸಂಪನ್ನರೂ ಆಹಿತಾಗ್ನಿಗಳೂ ಅತಿಥಿಗಳಿಗೆ ಬೇಡಿದ ವಸ್ತುಗಳನ್ನು ಕೊಡುವಂಥವರೂ ವಸಿಷ್ಠಾದಿ ಮಹಾಮುನಿಗಳಿಗೆ ಸಮಾನರೂ ಸತ್ಯಸಂಧರೂ ಆದ ಬ್ರಾಹ್ಮಣೋತ್ತಮರೂ ಕವಿಜನಗಳೂ ಉಳ್ಳುದಾಗಿ ಮೆರೆಯುತ್ತಿತ್ತು! ಅಂಥಾ ಅಯೋಧ್ಯಾಪಟ್ಟಣವನ್ನು ಪರಿಪಾಲಿಸುತ್ತ ಅತಿ ಪರಾಕ್ರಮಶಾಲಿಯಾದ ದಶರಥಮಹಾರಾಯನು ವಿರಾಜಿಸುತ್ತಿದ್ದನು.

## 6ನೆಯ ಆಧ್ಯಾಯ ದಶರಥನ ರಾಜ್ಯವರ್ಣನೆ

ದಶರಥ ಮಹಾರಾಯನು ವೇದಾರ್ಥಗಳ ಸಕಲತತ್ತ್ವರಹಸ್ಯಗಳನ್ನೂ ಮುಂದೆ ಬರುವ ವೃತ್ತಾಂತಗಳನ್ನೂ ಬಲ್ಲವನಾಗಿ ಪ್ರಜೆಗಳಿಗೆ ಪ್ರಿಯನಾಗಿ ಅತ್ಯಂತ ತೇಜಸ್ಸುಳ್ಳವನಾಗಿ ವಿಧ್ಯುಕ್ತ ಪ್ರಕಾರದಲ್ಲಿ ಯಾಗಗಳನ್ನು ಮಾಡಿ ಜಿತೇಂದ್ರಿಯನಾಗಿದ್ದನು. ಅವನು ಧರ್ಮಿಷ್ಠನಾಗಿ ಇಕ್ಷ್ವಾಕುವಂಶದ ರಾಯರಲ್ಲಿ ಮಹಾಪ್ರಸಿದ್ಧನಾಗಿ ವಸಿಷ್ಠಾದಿ ಮಹಾಮುನಿಗಳಿಗೆ ಸಮಾನವಾದ ಚಾರಿತ್ರ್ಯವುಳ್ಳವನಾಗಿ ಸ್ವರ್ಗ ಮರ್ತ್ಯ ಪಾತಾಳಗಳೆಂಬ ಮೂರು ಲೋಕಗಳಲ್ಲಿಯೂ ಪ್ರಸಿದ್ಧನಾಗಿದ್ದನು. ಮತ್ತು ಆತನು ಭುಜಬಲಪರಾಕ್ರಮವುಳ್ಳವನಾಗಿ ಸಮಸ್ತ ಶತ್ರು ಸಮೂಹವನ್ನೂ ಜಯಿಸಿ ಧನಧಾನ್ಯಾದಿ ಸಮಸ್ತ ವಸ್ತು ಸಂಗ್ರಹದಿಂದ ದೇವೇಂದ್ರ ಕುಬೇರರಿಗೆ ಸಮಾನನಾಗಿ ಪೂರ್ವದಲ್ಲಿ ವೈವಸ್ವತ ಮನುವು ಯಾವ ಪ್ರಕಾರದಲ್ಲಿ ಜಗತ್ತನ್ನು ಪರಿಪಾಲಿಸಿ ಮಹಾಕೀರ್ತಿವಂತನಾಗಿದ್ದನೋ, ಆ ಪ್ರಕಾರದಲ್ಲಿ ಸಮಸ್ತಭೂಮಂಡಲವನ್ನೂ ಪರಿಪಾಲಿಸುತ್ತಿದ್ದನು, ಈ ಪ್ರಕಾರದಲ್ಲಿ ಮೂರು ಪುರುಷಾರ್ಥಗಳನ್ನೂ ಪರಿಪಾಲಿಸಿ ದೇವೇಂದ್ರನು ಅಮರಾವತಿಯನ್ನು ರಕ್ಷಿಸುವ ರೀತಿಯಲ್ಲಿ ಅಯೋಧ್ಯಾಪಟ್ಟಣವನ್ನು ರಕ್ಷಿಸುತ್ತಿದ್ದನು. ಆಗ ಆ ಪಟ್ಟಣದಲ್ಲಿ ಸಮಸ್ತ ಜನರೂ ಅತ್ಯಂತ ಸಂತುಷ್ಟಚಿತ್ತರಾಗಿ, ಧರ್ಮನಿಷ್ಠರಾಗಿ ವೇದ ಶಾಸ್ತ್ರಾರ್ಥತತ್ತ್ವಜ್ಞರಾಗಿದ್ದರು, ಸಮಸ್ತಜಾತಿಯವರೂ ತಮ್ಮ ತಮ್ಮ ಜಾತ್ಯಾಚಾರಗಳಿಂದಲೇ ನಡೆಯುವಂಥವರಾಗಿ ಸತ್ಯವಾದಿಗಳಾಗಿದ್ದರು, ಆ ಪಟ್ಟಣದಲ್ಲಿ ಒಬ್ಬನಾದರೂ ಅಲ್ಪಾಯುಷ್ಯವುಳ್ಳವನಿರಲಿಲ್ಲ.

ಮುಂದುವರಿಯುವುದು...

# ರಕ್ತದ ಗುಂಪು ಹೊಂದಿರುವವರಿಗೆ ಕ್ಯಾನ್ಸರ್ ಅಪಾಯ ಕಡಿಮೆ

## ನಮ್ಮ ಇಡೀ ದೇಹವು ಸರಿಯಾಗಿ ಕಾರ್ಯನಿರ್ವಹಿಸಲು ಸಾಕಷ್ಟು ಪ್ರಮಾಣದ ರಕ್ತದ ಅಗತ್ಯವಿದೆ

• ಉದಯವಾಹಿನಿ ಬೆಂಗಳೂರು

ನಮ್ಮ ಇಡೀ ದೇಹವು ಸರಿಯಾಗಿ ಕಾರ್ಯನಿರ್ವಹಿಸಲು ಸಾಕಷ್ಟು ಪ್ರಮಾಣದ ರಕ್ತದ ಅಗತ್ಯವಿದೆ. ಆಮ್ಲಜನಕವು ರಕ್ತ ಕಣಗಳ ಮೂಲಕ ದೇಹದ ಎಲ್ಲಾ ಅಂಗಗಳಿಗೆ ಹರಡುತ್ತದೆ. ನಮ್ಮ ರಕ್ತದಲ್ಲಿ ಅನೇಕ ರೀತಿಯ ಜೀವಕೋಶಗಳಿವೆ ಮತ್ತು ಅವುಗಳ ಕಾರ್ಯಗಳು ಸಹ ಬಹಳ ಮುಖ್ಯ.
ಕೆಂಪು ರಕ್ತ ಕಣಗಳು ದೇಹದ ವಿವಿಧ ಅಂಗಾಂಶಗಳಿಗೆ ಆಮ್ಲಜನಕವನ್ನು ಸಾಗಿಸುವಂತೆ, ಬಿಳಿ ರಕ್ತ ಕಣಗಳು ಸೋಂಕಿನ ಸಂದರ್ಭದಲ್ಲಿ ರೋಗಕಾರಕಗಳನ್ನು ನಾಶ ಪಡಿಸುತ್ತವೆ.

ರಕ್ತದ ವಿಷಯದಲ್ಲಿ, ಅದರ ಗುಂಪುಗಳು (ರಕ್ತದ ಗುಂಪುಗಳು) ಸಹ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಪರಿಗಣಿಸಲಾಗುತ್ತದೆ. ನಮ್ಮ ರಕ್ತದ ಪ್ರಕಾರವು ಕೆಂಪು ರಕ್ತ ಕಣಗಳ ಮೇಲ್ಮೈಯಲ್ಲಿ ಯಾವ ಪ್ರತಿಜನಕಗಳಿವೆ ಎಂಬುದರ ಮೇಲೆ ಅವಲಂಬಿತವಾಗಿದೆ ಎಂದು ಸಂಶೋಧಕರು ಕಂಡುಕೊಂಡಿದ್ದಾರೆ.

ಕೆಲವು ರಕ್ತದ ಗುಂಪುಗಳನ್ನು ಹೊಂದಿರುವ ಜನರು ವಿಶೇಷ ಗುಣಗಳನ್ನು ಹೊಂದಿರಬಹುದು. ಅಧ್ಯಯನವೊಂದರಲ್ಲಿ, ಒ ರಕ್ತದ ಗುಂಪು ಹೊಂದಿರುವ ಜನರು ಇತರ ರಕ್ತದ ಪ್ರಕಾರಗಳನ್ನು ಹೊಂದಿರುವವರಿಗಿಂತ ಹೆಚ್ಚು ಹೋಗುತ್ತಾರೆ ಎಂದು ಸಂಶೋಧಕರು ಹೇಳಿದ್ದಾರೆ. ಅಂತಹ ಜನರು ಅನೇಕ ದೀರ್ಘಕಾಲದ ಮತ್ತು ಗಂಭೀರ ಕಾಯಿಲೆಗಳ ಅಪಾಯವನ್ನು ಕಡಿಮೆ ಹೊಂದಿರುವುದು ಕಂಡುಬಂದಿದೆ, ಇದು ಅವರನ್ನು ದೀರ್ಘಾಯುಷ್ಯವನ್ನಾಗಿ ಮಾಡುತ್ತದೆ. ಮುಖ್ಯವಾಗಿ ನಾಲ್ಕು ರೀತಿಯ ರಕ್ತದ ಗುಂಪುಗಳಿವೆ – ಎ, ಬಿ, ಎಬಿ ಮತ್ತು ಒ. ರಕ್ತದ ಗುಂಪು ಒ ಅನ್ನು ಸಾರ್ವತ್ರಿಕ ದಾನಿ ಎಂದು ಪರಿಗಣಿಸಲಾಗುತ್ತದೆ. ಅಂದರೆ, ಈ ರಕ್ತದ ಗುಂಪು ಹೊಂದಿರುವ ಜನರು ಇತರ ಯಾವುದೇ ರಕ್ತದ ಗುಂಪು ಹೊಂದಿರುವ ಜನರಿಗೆ ರಕ್ತದಾನ ಮಾಡ ಬಹುದು. ಅಪಘಾತದ ಸಮಯದಲ್ಲಿ ಒಂದೇ ರಕ್ತದ ಗುಂಪು ಕಂಡುಬರದಿದ್ದಾಗ, ಒ ರಕ್ತದ ಗುಂಪನ್ನು ನೀಡುವ ಮೂಲಕ ಯಾವುದೇ ರೋಗಿಯ ಜೀವವನ್ನು ಉಳಿಸಬಹುದು. ಇದಲ್ಲದೆ, ಒ ರಕ್ತದ ಗುಂಪು ಹೊಂದಿರುವ ಜನರು ಹೆಚ್ಚಿನ ಕೊಲೆಸ್ಟ್ರಾಲ್, ಹೃದ್ರೋಗ, ಕರುಳಿನ ಕ್ಯಾನ್ಸರ್, ಒತ್ತಡ ಸೇರಿದಂತೆ ಅನೇಕ ರೀತಿಯ ಕಾಯಿಲೆಗಳ



ಉದಯವಾಹಿನಿ ಚಿತ್ರ

> ಅಮೆರಿಕನ್ ಹಾರ್ಟ್ ಅಸೋಸಿಯೇಷನ್ನ ತಜ್ಞರು ನಡೆಸಿದ ಅಧ್ಯಯನದಲ್ಲಿ ಟೈಪ್ ಎ, ಟೈಪ್ ಬಿ ಅಥವಾ ಟೈಪ್ ಎಬಿ ರಕ್ತವನ್ನು ಹೊಂದಿರುವ ಜನರು ಒ ರಕ್ತದ ಗುಂಪು ಹೊಂದಿರುವ ಜನರಿಗಿಂತ ಹೃದಯಾಘಾತ ಅಥವಾ ಹೃದಯ ವೈಫಲ್ಯಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚು ಎಂದು ಕಂಡುಹಿಡಿದಿದ್ದಾರೆ.

ಅಪಾಯವನ್ನು ಕಡಿಮೆ ಹೊಂದಿದ್ದಾರೆ ಎಂದು ಸಂಶೋಧಕರು ಕಂಡುಕೊಂಡಿದ್ದಾರೆ. ಒ ರಕ್ತದ ಗುಂಪು ಹೊಂದಿರುವವರಿಗೆ ಹೋಲಿಸಿದರೆ, ಎ ಅಥವಾ ಬಿ ರಕ್ತದ ಗುಂಪು ಹೃದಯಾಘಾತದ ಅಪಾಯವನ್ನು 8%, ಹೃದಯ ವೈಫಲ್ಯದ 10% ಹೆಚ್ಚಿನ ಅಪಾಯವನ್ನು ಹೊಂದಿತ್ತು. ಅಧ್ಯಯನದಲ್ಲಿ ಎ ಮತ್ತು ಬಿ ಪ್ರಕಾರದ ಜನರು ಆಳವಾದ ರಕ್ತನಾಳದ ಥ್ರಾಂಬೋಸಿಸ್ ಅನ್ನು ಅಭಿವೃದ್ಧಿಪಡಿಸುವ ಸಾಧ್ಯತೆ 51% ಹೆಚ್ಚು ಎಂದು ಸಂಶೋಧಕರು ವರದಿ ಮಾಡಿದ್ದಾರೆ, ಇದು ರಕ್ತ ಹೆಪ್ಪುಗಟ್ಟುವಿಕೆಗೆ ಕಾರಣವಾಗುತ್ತದೆ ಮತ್ತು ಹೃದಯ ವೈಫಲ್ಯದ ಅಪಾಯಗಳನ್ನು ಹೆಚ್ಚಿಸುತ್ತದೆ. ಒ ರಕ್ತದ ಗುಂಪು ಹೊಂದಿರುವವರಲ್ಲಿ ಅಪಾಯ ಕಡಿಮೆ ಎಂದು ಕಂಡುಬಂದಿದೆ. ಮತ್ತೊಂದು ಅಧ್ಯಯನದಲ್ಲಿ, ಒ ರಕ್ತದ ಗುಂಪು ಹೊಂದಿರುವ ಜನರು ಅನೇಕ ರೀತಿಯ

> ಅಂತೆಯೇ, ಎಚ್ ಪೈಲೋರಿ ಬ್ಯಾಕ್ಟೀರಿಯಾವು ಕರುಳಿನಲ್ಲಿ ಎ ಮತ್ತು ಬಿ ಪ್ರಕಾರದಲ್ಲಿ ಕಂಡುಬಂದಿದೆ, ಇದು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸುತ್ತದೆ. ಪೆನ್ ಮೆಡಿಸಿನ್ನ ಹೆಮಟಾಲಜಿಸ್ಟ್ ಡಾ.ಡೌಗ್ಲಾಸ್ ಗುಗ್ಗೆನ್ಹೀಮ್ ಹೇಳುತ್ತಾರೆ, ಒ ರಕ್ತದ ಗುಂಪು ಹೊಂದಿರುವ ಜನರು 'ವರ'ದಂತಹ ಏನನ್ನಾದರೂ ಹೊಂದಿದ್ದಾರೆ, ಅದು ಅವರನ್ನು ಅನೇಕ ರೋಗಗಳಿಂದ ರಕ್ಷಿಸುವ ಮೂಲಕ ದೀರ್ಘಾಯುಷ್ಯವನ್ನು ನೀಡುತ್ತದೆ.

ಕ್ಯಾನ್ಸರ್ ಅಪಾಯವನ್ನು ಕಡಿಮೆ ಮಾಡಬಹುದು ಎಂದು ಆರೋಗ್ಯ ತಜ್ಞರು ಹೇಳಿದ್ದಾರೆ.

ಎ, ಎಬಿ ಬಿ ರಕ್ತದ ಗುಂಪು ಹೊಂದಿರುವ ಜನರು ಒ ರಕ್ತದ ಗುಂಪು ಹೊಂದಿರುವವರಿಗಿಂತ ಪಿಎಟಿ ಕ್ಯಾನ್ಸರ್ನ ಹೆಚ್ಚಿನ ಅಪಾಯವನ್ನು ನೋಡಿದ್ದಾರೆ. ಎ ರಕ್ತದ ಗುಂಪು ಹೊಂದಿರುವ ಜನರಲ್ಲಿ ಎಚ್. ಪೈಲೋರಿ ಸೋಂಕು ಹೆಚ್ಚು ಸಾಮಾನ್ಯವಾಗಿದೆ ಎಂದು ಸಂಶೋಧಕರು ನಂಬಿದ್ದಾರೆ. ಇದು ಸಾಮಾನ್ಯವಾಗಿ ಹೊಟ್ಟೆಯಲ್ಲಿ ಕಂಡುಬರುವ ಬ್ಯಾಕ್ಟೀರಿಯಾವಾಗಿದೆ ಮತ್ತು ಇದು ಉರಿಯೂತ ಮತ್ತು ಹುಣ್ಣುಗಳಿಗೆ ಕಾರಣವಾಗಬಹುದು.

# ಪಿತೃತರ್ಪಣ ಏಕೆ, ಯಾವಾಗ ಕೊಡಬೇಕು

• ಉದಯವಾಹಿನಿ ಬೆಂಗಳೂರು

ಪಿತೃಗಳನ್ನು ಉದ್ದೇಶಿಸಿ ನೀಡಿದ ನೀರಿಗೆ ಪಿತೃತರ್ಪಣ ಎನ್ನುತ್ತಾರೆ. ತಂದೆಯು ಜೀವಂತವಿರುವಾಗ ಮಗನಿಗೆ ಪಿತೃತರ್ಪಣ ನಿಷಿದ್ಧವಾಗಿದೆ. ಪಿತೃಗಳಿಗೆ ತನ್ನ ವಂಶಜರಿಂದ ಪಿಂಡದ ಮತ್ತು ಬ್ರಾಹ್ಮಣ ಭೋಜನದ ಅಪೇಕ್ಷೆಯಿರುವಂತೆ ನೀರಿನ ಅಪೇಕ್ಷೆಯೂ ಇರುತ್ತದೆ. ತರ್ಪಣವನ್ನು ಕೊಡುವುದರಿಂದ ಪಿತೃಗಳು ಸಂತುಷ್ಟರಾಗುತ್ತಾರೆ. ಅಲ್ಲದೇ ತರ್ಪಣ ಕೊಟ್ಟವರಿಗೆ ಆಯುಷ್ಯ, ತೇಜಸ್ಸು, ಬ್ರಹ್ಮವರ್ಚಸ್ಸು, ಸಂಪತ್ತು, ಯಶಸ್ಸು ಅನ್ನಾದ್ಯ ಅಂದರೆ ಭಕ್ಷಿಸಿದ ಅನ್ನವನ್ನು ಜೀರ್ಣ ಮಾಡುವ ಶಕ್ತಿಯನ್ನು ಕೊಟ್ಟು ತೃಪ್ತಗೊಳಿಸುತ್ತಾರೆ.

ದೇವರು, ಋಷಿ, ಪಿತೃಗಳನ್ನು ಉದ್ದೇಶಿಸಿ ಪ್ರತಿದಿನ ತರ್ಪಣವನ್ನು ಕೊಡಬೇಕು. ಮುಂಜಾನೆ ಸ್ನಾನದ ನಂತರ ತರ್ಪಣವನ್ನು ಕೊಡಬೇಕು. ಪಿತೃಗಳಿಗೆ ಪ್ರತಿದಿನ ಶ್ರಾದ್ಧವನ್ನು ಮಾಡಲು ಆಗದಿದ್ದರೆ ಕನಿಷ್ಟಪಕ್ಷ ತರ್ಪಣವನ್ನಾದರೂ ಕೊಡಬೇಕು. ಪಾರ್ವಣ ಶ್ರಾದ್ಧ ಮಾಡಿದ ಮರುದಿನ ಪಿತೃತರ್ಪಣ ಕೊಡಬೇಕು.

**ಎಳ್ಳುತರ್ಪಣ:** ಪಿತೃತರ್ಪಣಕ್ಕೆ ಎಳ್ಳನ್ನು ತೆಗೆದುಕೊಳ್ಳಬೇಕು. ಎಳ್ಳಿನಲ್ಲಿ ಕಪ್ಪು ಮತ್ತು ಬಿಳಿ ಹೀಗೆ ಎರಡು ಪ್ರಕಾರಗಳಿವೆ. ಶ್ರಾದ್ಧಕ್ಕೆ ಕಪ್ಪು ಎಳ್ಳನ್ನು ಉಪಯೋಗಿಸಬೇಕು. ಎಳ್ಳು ಸಿಗದಿದ್ದರೆ ಬೆಳ್ಳಿ ಅಥವಾ ಬಂಗಾರವನ್ನು ಉಪಯೋಗಿಸಬಹುದು. ಎಳ್ಳು ಮಿಶ್ರಿತ ನೀರಿನಿಂದ ಪಿತೃಗಳಿಗೆ ತರ್ಪಣ ಕೊಡುವುದನ್ನು ಎಳ್ಳುತರ್ಪಣ' ಎನ್ನುತ್ತಾರೆ. ಎಷ್ಟು ಜನ ಪಿತೃಗಳನ್ನು ಉದ್ದೇಶಿಸಿ ಶ್ರಾದ್ಧವನ್ನು ಮಾಡಿರುತ್ತಾರೆಯೋ, ಅಷ್ಟು ಜನರಿಗೆ ಮಾತ್ರ ಶ್ರಾದ್ಧಾಂಗ ಎಳ್ಳುತರ್ಪಣವನ್ನು ಕೊಡಬೇಕು.

ದರ್ಶಶ್ರಾದ್ಧವಿದ್ದಲ್ಲಿ ಅದಕ್ಕಿಂತ ಮುಂಚೆ ಮತ್ತು ವಾರ್ಷಿಕ ಶ್ರಾದ್ಧವಿದ್ದಲ್ಲಿ ಅದರ ಮರುದಿನ ಎಳ್ಳುತರ್ಪಣ ಮಾಡುತ್ತಾರೆ.

ಇತರ ಶ್ರಾದ್ಧಗಳಲ್ಲಿ ಎಳ್ಳುತರ್ಪಣವನ್ನು ಶ್ರಾದ್ಧದ ನಂತರ ಕೂಡಲೇ ಮಾಡುತ್ತಾರೆ.


ನಾಂದಿಶ್ರಾದ್ಧ, ಸಪಿಂಡಿ ಶ್ರಾದ್ಧ ಮುಂತಾದ ಶ್ರಾದ್ಧಗಳಲ್ಲಿ ಎಳ್ಳುತರ್ಪಣ ಮಾಡುವುದಿಲ್ಲ.


ಉದಯವಾಹಿನಿ ಚಿತ್ರ

### ಎಳ್ಳುತರ್ಪಣದ ಮಹತ್ವ

'ಪಿತೃಗಳಿಗೆ ಎಳ್ಳು ಪ್ರಿಯವಾಗಿರುತ್ತವೆ. ಎಳ್ಳನ್ನು ಉಪಯೋಗಿಸುವುದರಿಂದ ಅಸುರರು ಶ್ರಾದ್ಧವಿಧಿಗಳಲ್ಲಿ ತೊಂದರೆಗಳನ್ನು ಕೊಡುವುದಿಲ್ಲ. ಶ್ರಾದ್ಧದ ದಿನ ಮನೆಯಲ್ಲಿ ಎಲ್ಲಾ ಕಡೆಗಳಲ್ಲಿ ಎಳ್ಳನ್ನು ಹರಡಬೇಕು. ಆಮಂತ್ರಿತ ಬ್ರಾಹ್ಮಣರಿಗೆ ಎಳ್ಳು ಮಿಶ್ರಿತ ನೀರನ್ನು ಕೊಡಬೇಕು ಹಾಗೂ ಎಳ್ಳನ್ನು ದಾನ ಮಾಡಬೇಕು' ಜೈಮಿನೀಗೃಹ್ಯಸೂತ್ರ (ಉತ್ತರಭಾಗ, ಖಂಡ 1), ಬೌಧಾಯನಧರ್ಮಸೂತ್ರ (ಪ್ರಶ್ನೆ 2, ಅಧ್ಯಾಯ 8, ಅಂಶ 8) ಮತ್ತು ಬೌಧಾಯನಗೃಹ್ಯಸೂತ್ರ.

# ಪೌರಾಣಿಕ ಕತೆಗಳು



ಗಿರಿಜಾ.ಎಸ್.ದೇಶಪಾಂಡೆ.
• ಉದಯವಾಹಿನಿ, ವಿಶೇಷ

ಕುಶು ವೀರುಗೆ ಕತೆಗಳೆಂದರೆ
ಪ್ರಾಣ
ರಾಮಾಯಣ,ಮಹಾಭಾರತದ
ಕತೆಗಳೆಂದರೆ ಅಚ್ಚುಮೆಚ್ಚು
ಅಜ್ಜಿಯ ಹತ್ತಿರ ಬಂದರು
ಕತೆಯ ಹೇಳೆಂದು ಕೇಳಿದರು
ಅಜ್ಜಿಗೆ ಮೊಮ್ಮಕ್ಕಳ ಆಸಕ್ತಿಗೆ
ಆನಂದ ಮಹದಾನಂದ
ಪ್ರತಿದಿನ ಒಂದೊಂದು ಕತೆಯ
ಹೇಳುವಳು ಮೊಮ್ಮಕ್ಕಳಿಬ್ಬರೂ
ಆನಂದಿಸಿ ನಿದ್ರೆಗೆ ಜಾರುವರು


ಉದಯವಾಹಿನಿ ಚಿತ್ರ

ಗಣಪನ ,ಹನುಮನ ಕತೆಯ
ಕೇಳುವರು ಇಬ್ಬರ ಗುಣಗಾನ
ಮಾಡುವರು ಶ್ರೀಕೃಷ್ಣನ ಲೀಲೆಯ
ಕೇಳುವರು ಮನದಿ ಸಂತೋಷದಿ
ಇರುವರು
ಮಕ್ಕಳಿಗೆ ಪುರಾಣಕತೆಗಳು
ಬಹಳ ಇಷ್ಟವಾಗುವವು
ಮಹಾಗ್ರಂಥಗಳ ಬಗ್ಗೆ
ಹೆಚ್ಚಿನ ಜ್ಞಾನ ತಿಳಿಯುವರು
ಈ ರೀತಿ ಮೊಮ್ಮಕ್ಕಳ
ದಿನಚರಿ ನಡೆದಿಹುದು
ಅಜ್ಜಿಯ ದಿನಕೊಂದು ಕತೆ
ಓದಿ ಹೇಳಲು ತಯಾರಾಗಿಹಳು.

# ರಾಯರ ಸನ್ನಿಧಿಯಲ್ಲಿ ವಿಶೇಷ ಅಲಂಕಾರ

## ಉತ್ಸವ ಮತ್ತು ಭರತನಾಟ್ಯ ಕಾರ್ಯಕ್ರಮ

• ಉದಯವಾಹಿನಿ ಬೆಂಗಳೂರು

ಜಯನಗರದ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ1008 ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಆರ್.ಕೆ. ವಾದಿಂದ್ರಾಚಾರ್ಯರ ಮಾರ್ಗದರ್ಶನದಲ್ಲಿ ಪ್ರತಿ ಗುರುವಾರದಂತೆ ವಿಶೇಷವಾಗಿ ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ಅಲಂಕಾರ, ಉತ್ಸವಗಳು ಮತ್ತು ಸಹಸ್ರಾರು ಭಕ್ತಾದಿಗಳಿಗೆ ಅನ್ನಸಂತರ್ಪಣೆಯ ಕಾರ್ಯಕ್ರಮವು ನೆರವೇರಿತು.

ಹಾಗೂ ಸಂಜೆ ಭರತನಾಟ್ಯ ಕಾರ್ಯಕ್ರಮವನ್ನು ಕಲಾಯೋಗಿ ವಿದ್ವಾನ್ ಎಸ್. ರಘುನಂದನ್ , ಅವರ ಶಿಷ್ಯವೃಂದದ ವಿದ್ಯಾರ್ಥಿಗಳು ಭರತನಾಟ್ಯ ಕಾರ್ಯಕ್ರಮವನ್ನು ವಿಶೇಷವಾಗಿ ನಡೆಸಿಕೊಟ್ಟರು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು.


ಉದಯವಾಹಿನಿ ಚಿತ್ರ

ವಿಶೇಷವಾಗಿ ಈ ಕಾರ್ಯಕ್ರಮಕ್ಕೆ ಸಹಕಾರ ನೀಡಿದ ವೈ.ಕೆ. ಸಂಧ್ಯಾ ಶರ್ಮರವರು ಉಪಸ್ಥಿತರಿದ್ದರು. ಈ ಎಲ್ಲಾ ಕಾರ್ಯಕ್ರಮದಲ್ಲಿ ಭಕ್ತಾದಿಗಳು ಭಾಗವಹಿಸಿ ಶ್ರೀಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

# ಚಾರ್ಜ್ ಮಾಡಿದರೆ ಸಾಕು

## 323 ಕಿ.ಮೀ ಕ್ರಮಿಸುತ್ತೆ

• ಉದಯವಾಹಿನಿ ಬೆಂಗಳೂರು

ಇತ್ತೀಚಿನ ದಿನಗಳಲ್ಲಿ ಎಲೆಕ್ಟ್ರಿಕ್ ವಾಹನಗಳ ಸಂಖ್ಯೆ ಹೆಚ್ಚುತ್ತಿದೆ. ಕೆಲ ವಾಹನಗಳ ಬಗ್ಗೆ ದೂರುಗಳು ಬರುತ್ತಿವೆ. ಆದರೆ ಕನ್ನಡಿಗರೇ ಸೇರಿಕೊಂಡು ತಯಾರಿಸಿರುವ ಈ ಎಲೆಕ್ಟ್ರಿಕ್ ಬೈಕ್ ಒಮ್ಮೆ ಚಾರ್ಜ್ ಮಾಡಿದರೆ ಸಾಕು 323 ಕೀ.ಮೀ. ವರೆಗೂ ಕ್ರಮಿಸುತ್ತದೆ. ಅಲ್ಟ್ರಾವಯೊಲೆಟ್ ಕಂಪನಿ ತಯಾರಿಸಿರುವ ಹೊಸ ಇವಿ ಬೈಕ್ ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದು, ಅತ್ಯಾಕರ್ಷಕ ವಿನ್ಯಾಸದೊಂದಿಗೆ, ಅಕರ್ಷಕ ಬೆಲೆಯಲ್ಲಿ ರೋಡಿಗಿಳಿದಿದೆ. ಶೀಘ್ರದಲ್ಲೇ ವಿದೇಶಗಳಿಗೂ ರಫ್ತಾಗಲಿದೆ. ಒಂದು ಬಾರಿ ಚಾರ್ಜ್ ಮಾಡಿದರೆ 323 ಕಿ.ವರೆಗೂ ಚಲಿಸುವ ಸಾಮರ್ಥ್ಯವನ್ನು ಹೊಂದಿದೆ. ಈ ಬಗ್ಗೆ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸ್ವತಃ ಸಾಮಾಜಿಕ ಜಾಲತಾಣಗಳಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಉದ್ಯಮಶೀಲ ಕನ್ನಡಿಗರು ಸೇರಿಕೊಂಡು ಸ್ಥಾಪಿಸಿರುವ ಅಲ್ಟ್ರಾವಯೊಲೆಟ್ ಕಂಪನಿಯ ನಿರ್ದೇಶಕ ನೀರಜ್ ರಾಜಮೋಹನ್ ಮತ್ತು ತಂಡದವರು ಈದಿನ ಬೆಂಗಳೂರಿನ ನಮ್ಮ ಗೃಹಕಚೇರಿಯಲ್ಲಿ ಭೇಟಿಮಾಡಿದರು.

# ಪುಟಾಣಿ ಗುಬ್ಬಿ

ಸಾಮಾಜಿಕ ಕಳಕಳಿ



ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ


ಉದಯವಾಹಿನಿ ಚಿತ್ರ

ಗುಬ್ಬಿಯೆ ಗುಬ್ಬಿಯೆ
ಪುಟಾಣಿ ಗುಬ್ಬಿಯೆ
ಕೂಡಿ ಆಡೋಣ ಬಾ...
ತಿನ್ನಲು ನಿನಗೆ
ಅಕ್ಕಿ ಗೋಧಿಯ
ನುಚ್ಚು ಕೊಡುವೆನು...
ನುಚ್ಚನು ತಿನ್ನಿಸಿ
ಕುಡಿಯಲು ನಿನಗೆ
ನೀರನು ಕೊಡುವೆನು....
ಚಿವ್ ಚಿವ್ ಎಂದು
ಹಾಡಲು ನೀನು ಕುಣಿಯುವೆ ನಾನು....
ಪುರ್ರನೆ ಹಾರಿ ಸರ್ರನೆ ಜಾರಿ
ಖುಷಿಯ ನೀಡಲು
ಬಾ... ನೀನು...
ಹಾಡನು ಹಾಡುತ
ಜೊತೆಯಲಿ ಕುಣಿಯುತ
ಖುಷಿಯನು ಪಡುವ....

# ಧಾರವಾಡ ಕೃಷಿ ಮೇಳ, ರೈತರಿಗೆ ವಿಶೇಷ

• ಉದಯವಾಹಿನಿ ಬೆಂಗಳೂರು

ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆಯುವ ಕೃಷಿ ಮೇಳದಂತೆಯೇ ಧಾರವಾಡ ಕೃಷಿ ವಿಶ್ವವಿದ್ಯಾಲಯ ದ ಕೃಷಿ ಮೇಳ ನಾಳೆಯಿಂದ ಅಂದರೆ, ಸೆಪ್ಟೆಂಬರ್ 21ರಿಂದ ಪ್ರಾರಂಭವಾಗಲಿದ್ದು, ಮೂರು ದಿನ ಈ ಕೃಷಿ ಮೇಳ ನಡೆಯಲಿದೆ. ಸೆಪ್ಟೆಂಬರ್ 21ರಿಂದ ಸೆಪ್ಟೆಂಬರ್ 24ರ ವರೆಗೆ ಕೃಷಿ ಮೇಳ ನಡೆಯಲಿದ್ದು, ಕೃಷಿ ಮೇಳ ಹಲವು ಕಾರಣಗಳಿಂದ ಪ್ರಾಮುಖ್ಯತೆ ಪಡೆದುಕೊಂಡಿದೆ. ಈ ಬಾರಿಯ ಕೃಷಿ ಮೇಳದ ವಿಶೇಷತೆಗಳೇನು, ಕೃಷಿ ಮೇಳದಲ್ಲಿ ಏನೆಲ್ಲ ಇರಲಿದೆ ಎನ್ನುವ ಸಂಪೂರ್ಣ ಮಾಹಿತಿ ಇಲ್ಲಿದೆ.

ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕೃಷಿ ಮೇಳ –2024 ಈ ಬಾರಿ ರೈತರಿಗೆ ವಿಶೇಷವಾಗಿ ಹವಾಮಾನ ನಿರ್ವಹಣೆಗೆ ಸಂಬಂಧಿಸಿದಂತೆ ಪ್ರಾಮುಖ್ಯತೆ ಪಡೆದುಕೊಂಡಿದೆ. ಹವಾಮಾನ ವೈಪರೀತ್ಯ ನಿರ್ವಹಣೆಗೆ ಕೃಷಿ ತಾಂತ್ರಿಕತೆಗಳು ಎನ್ನುವ ಘೋಷಾವಾಕ್ಯದೊಂದಿಗೆ ಈ ಬಾರಿ ಕೃಷಿ ಮೇಳ ನಡೆಯುತ್ತಿದೆ. ಧಾರವಾಡ ಕೃಷಿ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿ ಕೃಷಿ ಮೇಳ ನಡೆಯಲಿದೆ. ಧಾರವಾಡದ ಕೃಷಿ ಮೇಳವನ್ನು ರೈತರ ಜಾತ್ರೆ ಎಂದೇ ಹೇಳಲಾಗುತ್ತದೆ. ಈ ಕೃಷಿ ಮೇಳಕ್ಕೆ ಪ್ರತಿ ವರ್ಷವೂ ಲಕ್ಷಾಂತರ ಜನ ಬಂದು ಸೇರುತ್ತಾರೆ. ಕೃಷಿ ಮೇಳದಲ್ಲಿ ಕೃಷಿ ಪದಾರ್ಥಗಳ ಮಾರಾಟ ಹಾಗೂ ಪ್ರದರ್ನ ನಡೆಯುತ್ತದೆ. ಕೃಷಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮಾಡುವ ಆವಿಷ್ಕಾರವನ್ನು ಸಹ ಇಲ್ಲಿ ಪ್ರದರ್ಶನಕ್ಕೆ ಇರಿಸಲಾಗುತ್ತದೆ.

ಅಲ್ಲದೇ ವಿವಿಧ ಬೆಳೆಗಳು, ಅದನ್ನು ಬೆಳೆಯುವ ವಿಧಾನ, ಜಾನುವಾರುಗಳು, ಹೂವು ಸೇರಿದಂತೆ ಕೃಷಿ ಹಾಗೂ ಉಪ ಕಸುಬಿನ ಅನಾವರಣವೇ ಕೃಷಿ ಮೇಳದಲ್ಲಿ ಆಗುತ್ತದೆ. 2023ನೇ ಸಾಲಿನಲ್ಲಿ ನಡೆದ ಧಾರವಾಡ ಕೃಷಿ ಮೇಳಕ್ಕೆ ಬರೋಬ್ಬರಿ 10 ಲಕ್ಷಕ್ಕೂ ಹೆಚ್ಚು ಜನ ಭೇಟಿ ನೀಡಿದ್ದರು. ಈ ಬಾರಿಯೂ ಲಕ್ಷಾಂತರ ಜನ ಕೃಷಿ ಮೇಳಕ್ಕೆ ಭೇಟಿ ನೀಡುವ ನಿರೀಕ್ಷೆ ಇದೆ.



ಉದಯವಾಹಿನಿ ಚಿತ್ರ

### ಧಾರವಾಡ ಕೃಷಿ ಮೇಳ –2024 ಈ ಬಾರಿಯ ವಿಶೇಷವೇನು

ಈ ಬಾರಿ ಹಲವು ಕಾರಣಗಳಿಂದ ಧಾರವಾಡ ಕೃಷಿ ಮೇಳ ಪ್ರಸಿದ್ಧಿ ಗಳಿಸಿದೆ. ಅದರಲ್ಲಿ ಹವಾಮಾನ ವೈಪರೀತ್ಯ ನಿರ್ವಹಣೆ ಮಾಡುವುದು ಹಾಗೂ ಕೃಷಿಯಲ್ಲಿ ತಾಂತ್ರಿಕತೆ ಅಳವಡಿಸಿಕೊಳ್ಳುವುದು ಪ್ರಮುಖವಾಗಿದೆ. ಈ ಬಾರಿಯ ಪ್ರಮುಖ ಆಕರ್ಷಣೆಗಳು ಈ ರೀತಿ ಇವೆ.

- ಹವಾಮಾನ ವೈಪರೀತ್ಯ ನಿರ್ವಹಣೆಯಲ್ಲಿ ಸಾವಯವ ಹಾಗೂ ನೈಸರ್ಗಿಕ ಕೃಷಿ ಪದ್ಧತಿ.
- ಕೃಷಿಗೆ ಪೂರಕ ಪರಿಕರಗಳ ಮಾರಾಟ ಹಾಗೂ ಪ್ರದರ್ಶನ ನಡೆಯಲಿದೆ.
- ನೀರಾವರಿ ಸಾಧನಗಳ ಪ್ರದರ್ಶನ ಹಾಗೂ ಮಾರಾಟ
- ಮೌಲ್ಯಯುತವಾದ ಕೃಷಿ ಉತ್ಪನ್ನಗಳು ಇಲ್ಲಿ ಲಭ್ಯವಿರಲಿವೆ.
- ರೈತ ವಿಜ್ಞಾನಿಗಳೊಂದಿಗೆ ಸಂವಾದ ನಡೆಯಲಿದೆ.
- ಪರಿಕರಗಳ (ಕೃಷಿಯಲ್ಲಿ ಬಳಸುವ ಮೆಷನ್‌ಗಳು) ಸಾಮರ್ಥ್ಯ ಹೆಚ್ಚಿಸುವುದು ಹಾಗೂ ಉತ್ಪನ್ನಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಹೇಗೆ ಬಳಸುವುದು ಎನ್ನುವುದನ್ನು ತಿಳಿಸಲಾಗುತ್ತದೆ. ಅಲ್ಲದೇ ಎರಡನೇ ಹಂತದ ಕೃಷಿಯ ಬಗ್ಗೆಯೂ ಈ ಮೇಳದಲ್ಲಿ ರೈತರಿಗೆ ಮಾಹಿತಿ ನೀಡಲಾಗುತ್ತದೆ.
- ಬರ ನಿರ್ವಹಣೆ ಮಾಡುವುದು ಹೇಗೆ, ಮಣ್ಣು ಹಾಗೂ ನೀರಿನ ಸಂರಕ್ಷಣೆ ಮಾಡುವುದು ಹೇಗೆ ಎಂದು ತಿಳಿಸಲಾಗುತ್ತದೆ.
- ಹವಾಮಾನ ವೈಪರೀತ್ಯ ನಿರ್ವಹಣೆಯಲ್ಲಿ ಕೈಗೊಳ್ಳಬೇಕಾದ ಬೆಳೆ ಪದ್ಧತಿಗಳು ಹಾಗೂ ಕೃಷಿ ತಾಂತ್ರಿಕತೆಗಳ ಬಗ್ಗೆ ತಿಳಿಸಲಾಗುತ್ತದೆ.
- ಎಣ್ಣೆಕಾಳು ಹಾಗೂ ದ್ವಿದಳ ಧಾನ್ಯ ಉತ್ಪಾದನೆ ಹೆಚ್ಚಿಸಲು ಅಗತ್ಯ ಕೃಷಿ ತಾಂತ್ರಿಕಗಳ ಪರಿಚಯ ಇರಲಿದೆ.
- ಆಧುನಿಕ ಕೃಷಿ ಪದ್ಧತಿ ಹಾಗೂ ನವೋದ್ಯಮಿ, ಯುವಕರ (ಯುವ ಪೀಳಿಗೆ) ಪಾತ್ರದ ಬಗ್ಗೆಯೂ ಚರ್ಚೆ, ಸಂವಾದಗಳು ನಡೆಯಲಿವೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನೀವು ಕೆಲವು ಗಂಭೀರ ತೊಂದರೆಗಳನ್ನು ಎದುರಿಸಲು ಸಾಧ್ಯತೆಯಿರುವುದರಿಂದ ನಿಮ್ಮನ್ನು ನಿಯಂತ್ರಿಸಿಕೊಳ್ಳಿ. ವಿಶೇಷವಾಗಿ ಸಣ್ಣ ಹುಚ್ಚಲ್ಲದೇ ಬೇರೇನೂ ಅಲ್ಲದ ನಿಮ್ಮ ಕೋಪವನ್ನು ನಿಯಂತ್ರಿಸಿಕೊಳ್ಳಿ.

**ವೃಷಭ** ನಿಮ್ಮ ಹೃದಯಕ್ಕೆ ಪ್ರಿಯವಾಗುವ ಯಾರನ್ನಾದರೂ ಸಂಧಿಸುವ ಅವಕಾಶಗಳು ಇಂದು ಬಲವಾಗಿವೆ. ಉಚಿತ ಸಮಯವನ್ನು ಇಂದು ವ್ಯರ್ಥ ಚರ್ಚೆಗಳಲ್ಲಿ ಕಳೆಯಬೇಡಿ.

**ಮಿಥುನ** ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾವ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು.

**ಕರ್ಕಾಟಕ** ವಿಧಿಯನ್ನು ಅವಲಂಬಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ.

**ಸಿಂಹ** .ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು. ಇದು ಕೇವಲ ಸಮಯ ವ್ಯರ್ಥ ಮಾಡುವಿಕೆ ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ಕನ್ಯಾ** ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರ ಬರಲು ಪ್ರಯತ್ನಿಸಿ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ.

**ತುಲಾ** ನೀವು ಅನಿರೀಕ್ಷಿತ ಮೂಲಗಳಿಂದ ಪ್ರಮುಖ ಆಮಂತ್ರಣವನ್ನು ಸ್ವೀಕರಿಸುತ್ತೀರಿ. ಹಲವಾರು ವಿಷಯಗಳ ಬಗ್ಗೆ ಹಲವಾರು ಭಿನ್ನಾಭಿಪ್ರಾಯಗಳು ಇರಬಹುದಾದ್ದರಿಂದ ಈ ದಿನ ನಿಮಗೆ ಚೆನ್ನಾಗಿರುವುದಿಲ್ಲ.

**ವೃಶ್ಚಿಕ** ಅಪರಿಚಿತ ವ್ಯಕ್ತಿಗಳೊಂದಿಗೆ ಮಾತನಾಡುವುದು ಸರಿಯಿಲ್ಲ, ಅವರ ವಿಶ್ವಾಸಾರ್ಹತೆ ತಿಳಿಯದೆ ಅವರಿಗೆ ತನ್ನ ಜೀವನದ ವಿಷಯಗಳನ್ನು ತಿಳಿಸಿ ತಮ್ಮ ಸಮಯವನ್ನು ಹಾಳುಮಾಡುತ್ತೀರಿ, ಇನ್ನೇನು ಇಲ್ಲ.

**ಧನಸ್ಸು** ನಿಮ್ಮ ಮಾನಸಿಕ ಒತ್ತಡವನ್ನು ಹೊಡೆದೋಡಿಸಲು ಆಧ್ಯಾತ್ಮಿಕತೆ ಒಂದು ಅತ್ಯುತ್ತಮ ಆಯ್ಕೆಯಾಗಿರುವುದರಿಂದ ನೀವು ಅದರ ಸಹಾಯ ಪಡೆಯಲು ಈಗ ಒಳ್ಳೆಯ ಸಮಯ.

**ಮಕರ** ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ.

**ಕುಂಭ** ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಹೊಸ ಸಂಬಂಧಗಳು ದೀರ್ಘಾವಧಿಯದ್ದಾಗಿರುತ್ತವೆ.

**ಮೀನ** ಬಾಕಿಯಿರುವ ಮನೆಕೆಲಸಗಳು ನಿಮ್ಮ ಸ್ವಲ್ಪ ಸಮಯ ತೆಗೆದುಕೊಳ್ಳುತ್ತವೆ. ಇಂದು ಕಾರ್ಡ್ ನಲ್ಲಿ ಪ್ರಯಾಣಶಾಲಿ ಪ್ರಭಾವಗಳು ಹೆಚ್ಚಾಗಿವೆ. ನಿಮ್ಮ ಹತ್ತಿರ ಸಮಯ ಉಳಿದಿರುತ್ತದೆ.

# ಶೀಘ್ರದಲ್ಲೇ ಸುಸಜ್ಜಿತ ಫುಡ್ ಕೋರ್ಟ್ ನಿರ್ಮಾಣಕ್ಕೆ ಚಾಲನೆ: ಎಂ ಶಮಿವುಲ್ಲಾ

## • ಎಲ್ಲಾ ನಾಗರಿಕರು ನಗರಸಭೆಯಿಂದ ಬರುವಂತಹ ವಾಹನಗಳಿಗೆ ತಮ್ಮ ಮನೆಯ ಕಸವನ್ನು ಹಾಕಬೇಕು

• **ಉದಯವಾಹಿನಿ, ಅರಸೀಕೆರೆ**

ಅರಸೀಕೆರೆ ನಗರದಲ್ಲಿ ಇಡೀ ನಗರದ ಜನತೆಗೆ ಒಂದೆಡೆಯಲ್ಲಿ ಸಸ್ಯಹಾರಿ ಮತ್ತು ಮಾಂಸಾಹಾರಿ ಆಹಾರ ಪದಾರ್ಥಗಳು ಗುಣಮಟ್ಟದ ರೀತಿಯಲ್ಲಿ ಸ್ಪರ್ಧಾತ್ಮಕ ಬೆಲೆಯಲ್ಲಿ ಸಾರ್ವಜನಿಕರಿಗೆ ಸಿಗುವಂತಹ ಆಹಾರ ಪದಾರ್ಥಗಳನ್ನು ಸಿಗುವಂತಹ ರೀತಿಯಲ್ಲಿ ಫುಡ್ ಕೋರ್ಟ್ ನಿರ್ಮಾಣಕ್ಕೆ ಚಾಲನೆ ನೀಡಲಾಗುವುದು ಮತ್ತು ಅದೇ ರೀತಿಯಲ್ಲಿ ತರಕಾರಿ ಹೂವು ಮಾರುಕಟ್ಟೆಗೂ ಸಹ ನಗರಸಭೆ ವತಿಯಿಂದ ಒಂದೆಡೆ ಸಿಗುವಂತಹ ಮಾರುಕಟ್ಟೆ ವ್ಯವಸ್ಥೆಗೆ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ಎಂದು ಅರಸೀಕೆರೆ ನಗರಸಭಾಧ್ಯಕ್ಷರಾದ ಎಂ ಶಮಿವುಲ್ಲಾ ಹೇಳಿದರು. ಅರಸೀಕೆರೆ ನಗರಸಭೆ ಕಚೇರಿಯಲ್ಲಿ ಖಾಸಗಿ ಸುದ್ದಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು ಅರಸಿಕೆರೆಯಲ್ಲಿ ಸ್ವಚ್ಛತೆಗೆ ಮೊದಲನೇ ಆದ್ಯತೆ ನೀಡಲಾಗಿದ್ದು ಬೆಳಿಗ್ಗೆ 6:00ಯಿಂದಲೇ ಪ್ರತಿದಿನ ನಗರ ಸಭೆ ಸಿಬ್ಬಂದಿಗಳು ವಾರ್ಡ್ ವಾರು ಭೇಟಿ ನೀಡಿ ಸ್ವಚ್ಛತೆಗೆ ಮೊದಲನೇ ಆದ್ಯತೆ ನೀಡಲಾಗುತ್ತಿದೆ ಇದಕ್ಕಾಗಿ ನಗರಸಭೆ ಸಿಬ್ಬಂದಿಗಳು ಶ್ರಮಿಸುತ್ತಿದ್ದಾರೆ ವಿಚಾರದಲ್ಲಿ ಖುದ್ದಾಗಿ ನಾವು ಕೂಡ ಭೇಟಿ ನೀಡಿ ಪರಿಶೀಲಿಸುತ್ತಿದ್ದೇವೆ ಎಂದರು. ಅರಸೀಕೆರೆ ನಗರದ ನಾಗರಿಕರು ಸಹ ಸ್ವಚ್ಛತೆಗಾಗಿ ಕೈಜೋಡಿಸಬೇಕಾಗಿದೆ ಎಲ್ಲಾ ನಾಗರಿಕರು ನಗರಸಭೆಯಿಂದ ಬರುವಂತಹ ವಾಹನಗಳಿಗೆ ತಮ್ಮ ಮನೆಯ ಕಸವನ್ನು ಹಾಕಬೇಕು ಯಾವುದೇ ಕಾರಣಕ್ಕೂ ಹೊರಗಡೆ ಎಸೆಯಬಾರದೆಂದು ನಾಗರಿಕರಲ್ಲಿ ಅಧ್ಯಕ್ಷರಾದ ಶಮಿವುಲ್ಲಾ ಮನವಿ ಮಾಡಿದರು. ನಗರ ವ್ಯಾಪ್ತಿಯಲ್ಲಿ ನಿವೇಶನಕ್ಕಾಗಿ ಲೇಔಟ್ ನಿರ್ಮಾಣಕ್ಕಾಗಿ ಅರ್ಜಿ ಸಲ್ಲಿಸಿದಾಗ ಅಂಥವರಿಗೆ ತೊಂದರೆಯಾಗುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿದ ಸಮೀವುಲ್ಲ ರವರು ಅಂತ ವ್ಯಕ್ತಿಗಳು ಮೊಟ್ಟಮೊದಲನೆಯದಾಗಿ ಜಿಲ್ಲಾಧಿಕಾರಿಗಳಿಗೆ ಅರ್ಜಿ ನೀಡಿ ತಹಶೀಲ್ದಾರ್ ವರದಿ ನಂತರ ಪುನಹ ಜಿಲ್ಲಾಧಿಕಾರಿ ಕಚೇರಿಗೆ ಅನ್ಯಸಂಕ್ರಮಣಕ್ಕಾಗಿ ಅರ್ಜಿಗಳು ವಿಲೇವಾರಿಯಾಗಿ ನಂತರ ಅರಸಿಕೆರೆ ನಗರ ಸಭೆಗೆ ಬಂದಾಗ ಅದನ್ನು ನಗರಸಭೆ ಅಧಿಕಾರಿಗಳು ಪರಿಶೀಲಿಸಿ ಅಲ್ಲದೆ ಯೋಜನಾ ಪ್ರಾಧಿಕಾರದ ಅಧಿಕಾರಿಗಳು ಪರಿಶೀಲಿಸಿ ಅಂತವರಿಗೆ ನಗರ ಸಭೆ ವತಿಯಿಂದ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಅಂತವರಿಗೆ ಈ ಸ್ವತ್ತನ್ನು ನೀಡಲು ಕ್ರಮ ಕೈಗೊಳ್ಳಲಾಗುವುದು ಇಂದು ನಗರಸ ಭೆಯ ಅಧ್ಯಕ್ಷರಾದ ಶಮಿವುಲ್ಲಾ ತಿಳಿಸಿದರು. ನಗರಸಭಾ ಉಪಾಧ್ಯಕ್ಷರಾದ ಮನೋಹರ್ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಸ್ವಚ್ಛತೆಗೆ ಮೊದಲನೇ ಆದ್ಯತೆ**



**ಅರಸೀಕೆರೆ ನಗರದ ಸಾಮಾಜಿಕ ಕಾರ್ಯಕರ್ತ ರಾಘವೇಂದ್ರ ಮಾತನಾಡಿ ನಾನು ಈ ಸ್ವತ್ತು ಪಡೆಯುವುದಕ್ಕಾಗಿ ಅರ್ಜಿ ಸಲ್ಲಿಸಿದ್ದು ಕೇವಲ ಎರಡು ದಿನಗಳಲ್ಲಿ ನಗರಸಭೆ ಕಚೇರಿಯಿಂದ ದೂರವಾಣಿ ಮುಖಾಂತರ ನಿಮ್ಮ ಈ ಸ್ವತ್ತು ರೆಡಿಯಾಗಿದ್ದು ಬಂದು ಪಡೆಯಬಹುದೆಂದು ತಿಳಿಸಿದಾಗ ನನಗೆ ಆಶ್ಚರ್ಯವಾಯಿತು ಕಾರಣ ಏನೆಂದರೆ ಈ ಹಿಂದೆ ಅರಸೀಕೆರೆ ನಗರಸಭೆಯಲ್ಲಿ ಖಾತೆ ಬದಲಾವಣೆ ಮತ್ತು ಈ ಸ್ವತ್ತು ಪಡೆಯಲು ಕನಿಷ್ಠ ಎರಡು ಮೂರು ತಿಂಗಳು ಅಲೆಯಬೇಕಾಗಿತ್ತು ಇದಕ್ಕಾಗಿ ಮಧ್ಯವರ್ತಿಗಳನ್ನು ಹಿಡಿದು ಹಣವನ್ನು ನೀಡಬೇಕಾಗಿತ್ತು ಆದರೆ ಅರಸೀಕೆರೆ ನಗರಸಭೆಗೆ ನೂತನ ಅಧ್ಯಕ್ಷರಾದ ಎಂ ಶಮಿಉಲ್ಲಾ ರವರು ಅಧಿಕಾರವಹಿಸಿಕೊಂಡ ಕೆಲವೇ ದಿನಗಳಲ್ಲಿ ಅರಸೀಕೆರೆ ನಗರಸಭೆ ವತಿಯಿಂದ ನಗರದ ನಾಗರಿಕರಿಗೆ 45 ದಿನಗಳಲ್ಲಿ ಖಾತೆ ಬದಲಾವಣೆ ನಂತರ ಈ ಸ್ವತ್ತು ಕೇವಲ ಮೂರು ದಿನಗಳಲ್ಲಿ ನೀಡುತ್ತಿರುವುದು ಶ್ಲಾಘನೀಯ ಇದಕ್ಕಾಗಿ ಅರಸೀಕೆರೆ ನಾಗರಿಕರ ಪರವಾಗಿ ನೂತನ ಅಧ್ಯಕ್ಷರಾದ ಶಮಿಉಲ್ಲಾ ರವರಿಗೆ ಅಭಿನಂದನೆ ಸಲ್ಲಿಸುವುದಾಗಿ ಸಾಮಾಜಿಕ ಕಾರ್ಯಕರ್ತ ರಾಘವೇಂದ್ರ ಪತ್ರಿಕೆಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು -ರಾಘವೇಂದ್ರ, ಸಾಮಾಜಿಕ ಕಾರ್ಯಕರ್ತ**

# ಸ್ಟ್ಯಾನ್ ಫೋರ್ಡ್ ವಿವಿಯ ಪ್ರತಿಷ್ಠಿತ ವಿಜ್ಞಾನಿಗಳ ಪಟ್ಟಿಯಲ್ಲಿ ವಿಎಸ್ ಕೆ. ವಿವಿಯ ಮೂವರಿಗೆ ಸ್ಥಾನ

• **ಉದಯವಾಹಿನಿ, ಬಳ್ಳಾರಿ**

ವಿಶ್ವದ ಪ್ರತಿಷ್ಠಿತ ಅಮೆರಿಕದ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾಲಯ ವಾರ್ಷಿಕವಾಗಿ ಪ್ರಕಟಿಸುವ ಜಗತ್ತಿನ ಖ್ಯಾತ ವಿಜ್ಞಾನಿಗಳ ಪಟ್ಟಿಯಲ್ಲಿ ಬಳ್ಳಾರಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಮೂವರು ಪ್ರಾಧ್ಯಾಪಕರು ಸ್ಥಾನ ಪಡೆದಿದ್ದಾರೆ.

ವಿವಿಯ ಗಣಿತಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ಮತ್ತು ಕೊಪ್ಪಳ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ಕೆ.ವಿ.ಪ್ರಸಾದ್ ಮತ್ತು ಗಣಿತಶಾಸ್ತ್ರ ಮತ್ತು ಗಣಕ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರೊ. ಹನುಮೇಶ್ ವೈದ್ಯ ಅವರು ಸತತ ಎರಡನೇ ಬಾರಿ ಈ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. ಗಣಿತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಅಶ್ವಿನ್ ಪಿ. ಇದೇ ಮೊದಲ ಬಾರಿ ಸ್ಥಾನ ಪಡೆದಿದ್ದಾರೆ. ಒಟ್ಟಾರೆ ವಿವಿಯ ಮೂವರು ಈ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ವಿಶ್ವದರ್ಜೆಯ ಗುಣಮಟ್ಟದ ಸಂಶೋಧನಾ ಲೇಖನಗಳನ್ನು ವೆಬ್ ಆಫ್ ಸೈನ್ಸ್, ಸ್ಕೋಪಸ್, ಗೂಗಲ್ ಸ್ಕಾಲರ್, ಹೆಚ್ ಇಂಡೆಕ್ಸ್, ಇಂಪ್ಯಾಕ್ಟ್ ಫ್ಯಾಕ್ಟರ್, ಸೈಟೇಷನ್ ಹೀಗೆ ಹಲವಾರು ಸಂಯೋಜಿತ ಮಾನದಂಡಗಳನ್ನು ಆಧರಿಸಿ ವಿಶ್ವದ ಉತ್ತಮ ಸಂಶೋಧಕರನ್ನು ಗುರುತಿಸಿ ವಾರ್ಷಿಕವಾಗಿ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾಲಯವು ಪಟ್ಟಿ ಬಿಡುಗಡೆ ಮಾಡುತ್ತದೆ.

ಗುಣಮಟ್ಟದ ಸಂಶೋಧನಾ ಲೇಖನಗಳನ್ನು ಪ್ರಕಟಿಸಲು ಹೆಸರುವಾಸಿಯಾಗಿರುವ ಎಲ್ಸ್ವೀಯರ್ ಸಂಸ್ಥೆ ಸಹಭಾಗಿತ್ವದಲ್ಲಿ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾಲಯವು ಕಳೆದ ವಾರ ಪಟ್ಟಿ ಬಿಡುಗಡೆ ಮಾಡಿದೆ. ಪ್ರಪಂಚದ ಒಟ್ಟು ಸಂಶೋಧನಕಾರರಲ್ಲಿ ಶೇ. 2 ರಷ್ಟು ಖ್ಯಾತ ನಾಮ ವಿಜ್ಞಾನಿಗಳನ್ನು ಸಂಶೋಧನೆಗೆ ಸಂಬಂಧಿಸಿದ ವಿವಿಧ ವರ್ಗಗಳಲ್ಲಿ ವಿಂಗಡಿಸಿ ಪಟ್ಟಿ ಅಂತಿಮಗೊಳಿಸಿದೆ.

ಮೂವರು ಪ್ರಾಧ್ಯಾಪಕರ ಸಾಧನೆಗೆ ಬಳ್ಳಾರಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಮುನಿರಾಜು, ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಕೆ.ರವಿ, ವಿಶ್ರೀಕೃವಿವಿ ಕುಲಸಚಿವ ರುದ್ರೇಶ್.ಎಸ್.ಎನ್., ಪ್ರಾಧ್ಯಾಪಕರುಗಳು, ಸಿಬ್ಬಂದಿ, ಕುಟುಂಬ ವರ್ಗ ಅಭಿನಂದಿಸಿದ್ದಾರೆ.



ಉದಯವಾಹಿನಿ ಚಿತ್ರ



# ಜಾತಿ, ಧರ್ಮಗಳ ಮೂಲಕ ನಮ್ಮನ್ನು ಪ್ರತ್ಯೇಕಿಸುತ್ತಿದ್ದಾರೆ

• **ಉದಯವಾಹಿನಿ, ಮಂಗಳೂರು**

ಸ್ವಾತಂತ್ರ್ಯ ಬಂದು 78 ವರ್ಷ ಕಳೆದರೂ ನಮ್ಮ ರಾಜಕೀಯ ವ್ಯವಸ್ಥೆ ಸಮಾಜವನ್ನು ಜಾತಿ, ಧರ್ಮ, ದ್ವೇಷ ಮತ್ತು ಮೂಲಭೂತವಾದದ ಮೂಲಕ ಪ್ರತ್ಯೇಕಿಸಲು ಪ್ರಯತ್ನಿಸುತ್ತಿದೆ. ಇದು ದೇಶ ದ್ರೋಹಿ ಮನಸ್ಥಿತಿಯಾಗಿದೆ ಎಂದು ಮಹಾತ್ಮ ಗಾಂಧೀಜಿಯವರ ಮರಿಮಗ ಮತ್ತು ಸಾಮಾಜಿಕ ಚಿಂತಕ ತುಷಾರ್ ಗಾಂಧಿ ಅಭಿಪ್ರಾಯ ಪಟ್ಟರು.

ಶುಕ್ರವಾರ(ಸೆ20) ಮಂಗಳೂರಿನ ಹಂಪನಕಟ್ಟೆಯ ವಿಶ್ವವಿದ್ಯಾನಿಲಯ ಕಾಲೇಜಿನಲ್ಲಿ ಆಯೋಜಿಸಲಾದ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ದೇಶದಲ್ಲಿ ಬಡತನವಿದ್ದರೂ ಒಗ್ಗಟ್ಟಿದ್ದ ಕಾರಣ ಬ್ರಿಟಿಷರಿಂದ ನಮ್ಮ ಸ್ವಾತಂತ್ರ್ಯವನ್ನು ಪಡೆಯಲು ಸಾಧ್ಯವಾಯಿತು. ಆದರೆ ಇಂದು ರಾಜಕೀಯ ನಾಯಕರು ಅಧಿಕಾರಕ್ಕಾಗಿ ಬ್ರಿಟಿಷರ ವಿಭಜಿಸಿ ಆಳುವ ತಂತ್ರವನ್ನು ಅನುಸರಿಸಿ ಜಾತಿ, ಧರ್ಮಗಳ ಮೂಲಕ ನಮ್ಮನ್ನು ಪ್ರತ್ಯೇಕಿಸುತ್ತಿದ್ದಾರೆ ಎಂದು ಆರೋಪಿಸಿದರು. ಮಹಾತ್ಮ ಗಾಂಧೀಜಿಯವರು ಮೂರು ಬಾರಿ ಭೇಟಿ ನೀಡಿದ ಮಂಗಳೂರಿನಲ್ಲಿಯೂ ಇಂದು ಮೂಲಭೂತವಾದ ವಿಜೃಂಭಿಸುತ್ತಿದೆ. ಗಾಂಧೀಜಿಯವರನ್ನು ಹತ್ಯೆ ಮಾಡಿದವರ ಸಿದ್ಧಾಂತಗಳು ಇಲ್ಲಿ ಮರೆಯುವ ಮೂಲಕ ಗಾಂಧಿ ಸಂದೇಶಗಳು ಮರೆಯಾಗಿರುವುದು ನಾಚಿಕೆಗೇಡಿನ ವಿಚಾರ ಎಂದು ತುಷಾರ್ ಗಾಂಧಿ ಖೇದ ವ್ಯಕ್ತಪಡಿಸಿದರು.

ಮಂಗಳೂರು ವಿವಿ ಕುಲಪತಿ ಪ್ರೊ। ಪಿ.ಎಲ್. ಧರ್ಮ, ಪ್ರಮುಖರಾದ, ಡಾ. ಶಾಂತರಾಮ ಶೆಟ್ಟಿ, ಡಾ। ವೂಡೇ ಪಿ ಕೃಷ್ಣ, ಪ್ರಮೋದ್ ಕುಮಾರ್ ರೈ, ಡಾ ಶೇಷಪ್ಪ ಕೆ. ಮೊದಲಾದವರಿದ್ದರು.



ಉದಯವಾಹಿನಿ ಚಿತ್ರ

# ಮಹದಾಯಿ ಜಾರಿಗೆ ಕರವೇ ಪಾದಯಾತ್ರೆ ಆರಂಭ

• **ಉದಯವಾಹಿನಿ, ನರಗುಂದ**

ದಶಕಗಳಿಂದ ನೆನೆಗುದಿಗೆ ಬಿದ್ದಿರುವ ಕಳಸಾ-ಬಂಡೂರಿ ಮಹದಾಯಿ ನದಿ ಜೋಡಣೆ ಹಾಗೂ ಕಪ್ಪತ್ತಗುಡ್ಡ ಪ್ರವಾಸಿ ತಾಣವನ್ನಾಗಿ ರೂಪಿಸಲು ಆಗ್ರಹಿಸಿ ಕರವೇ ಪ್ರವೀಣಕುಮಾರ ಶೆಟ್ಟಿ ಬಣದಿಂದ ಬಂಡಾಯ ನಾಡು ನರಗುಂದ ಪಟ್ಟಣದಿಂದ ಗದಗ ಜಿಲ್ಲಾಧಿಕಾರಿ ಕಚೇರಿವರೆಗೆ ಬೃಹತ್ ಪಾದಯಾತ್ರೆ ಪ್ರಾರಂಭಿಸಲಾಯಿತು.

ಕರವೇ ರಾಜ್ಯ ಘಟಕ, ಗದಗ ಹಾಗೂ ಧಾರವಾಡ ಜಿಲ್ಲಾ ಘಟಕಗಳ ಆಶ್ರಯದಲ್ಲಿ ಈ ಪಾದಯಾತ್ರೆ ಹಮ್ಮಿಕೊಳ್ಳಲಾಗಿದ್ದು, ರಾಜ್ಯಾದ್ಯಂತ ಜಿಲ್ಲಾ-ತಾಲ್ಲೂಕುಗಳ ಪದಾಧಿಕಾರಿಗಳು ಇಂದು ಪಾದೆಯಾತ್ರೆಯಲ್ಲಿ ಪಾಲ್ಗೊಂಡಿದ್ದರು. ಪಟ್ಟಣದ ಮಹದಾಯಿ ಮತ್ತು ಕಳಸಾ-ಬಂಡೂರಿ ಹೋರಾಟ ವೇದಿಕೆಯಲ್ಲಿ ಪಾದಯಾತ್ರೆಗೆ ಚಾಲನೆ ಪಡೆದು ನರಗುಂದ ರೈತ ಬಂಡಾಯದಲ್ಲಿ ಮಡಿದ ದಿ। ಈರಪ್ಪ ಕಡ್ಲಿಕೊಪ ಅವರ ವೀರಗಲ್ಲಿಗೆ ಪೂಜೆ ಸಲ್ಲಿಸಿ ಪಾದಯಾತ್ರೆ ಆರಂಭಿಸಲಾಯಿತು.

ಕಳಸಾ-ಬಂಡೂರಿ ಮತ್ತು ಮಹದಾಯಿ ನದಿ ಜೋಡಣೆ ಯೋಜನೆ ತುರ್ತಾಗಿ ಆರಂಭಿಸುವಂತೆ ಹಾಗೂ ಕಪ್ಪತ್ತಗುಡ್ಡವನ್ನು ಪ್ರವಾಸಿ ತಾಣವನ್ನಾಗಿ ರೂಪಿಸಲು ಆಗ್ರಹಿಸಿ ಪಟ್ಟಣದಿಂದ ಬೃಹತ್ ಪಾದಯಾತ್ರೆ ಮೂಲಕ ನವಲಗುಂದ ತಾಲ್ಲೂಕು ಶಲವಡಿ ಮೂಲಕ ಸೆ. 20ರಂದು ಜಿಲ್ಲೆ ಪ್ರವೇಶಿಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಕರವೇ ಪ್ರವೀಣಶೆಟ್ಟಿ ಬಣದ ಜಿಲ್ಲಾಧ್ಯಕ್ಷ ವೆಂಕಟೇಶ ಆರ್. ಬೇಲೂರ ತಿಳಿಸಿದರು.

ಪಾದಯಾತ್ರೆಯಲ್ಲಿ ಕರವೇ ರಾಜ್ಯಾಧ್ಯಕ್ಷ ಪ್ರವೀಣ ಶೆಟ್ಟಿ, ಉತ್ತರ ಕರ್ನಾಟಕ ಅಧ್ಯಕ್ಷ ಶರಣು ಗದ್ದುಗೆ, ಜಿಲ್ಲಾಧ್ಯಕ್ಷ ವೆಂಕಟೇಶ ಬೇಲೂರ, ರಾಜ್ಯ ಕಮಿಟಿ ಸದಸ್ಯ ದಾವಲಸಾಬ್ ಮುಳಗುಂದ, ಶ್ರೀನಿವಾಸ ಭಂಡಾರಿ, ತಿಮ್ಮಣ್ಣ ಡೋಣಿ, ಸಹದೇವ ಕೋಟಿ, ಪರಶುರಾಮ ಬಂಕದಮನಿ ಸೇರಿ ಇನ್ನಿತರರಿದ್ದರು.

# ಇಂಡಿಯಲ್ಲಿ ಅಸ್ಮಾಕಂ ಸಂಸ್ಕೃತಮ್, ಶೋಭಾಯಾತ್ರೆ

• **ಉದಯವಾಹಿನಿ, ಇಂಡಿ**

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಹಾಗೂ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯ ಆಶಯದಂತೆ ವೃಷಭಲಿಂಗಾರ್ಯ ಕೃಪಾಪೋಷಿತ ಸಂಸ್ಕೃತ ಪಾಠಶಾಲೆ ಬೋಳೆಗಾಂವ ಹಾಗೂ ಕಿತ್ತೂರು ಚೆನ್ನಮ್ಮ ಪ್ರಾಥಮಿಕ ಇಂಡಿ.ಶಾಲೆಯ ಸಂಯುಕ್ತ ಆಶ್ರಯದಲ್ಲಿ ಇಂದು ಅಸ್ಮಾಕಂ ಸಂಸ್ಕೃತಮ್ ಶೋಭಾಯಾತ್ರೆ ನಡೆಯಿತು.

ಪ್ರವಾಸಿ ಮಂದಿರದಿಂದ ಬಸವೇಶ್ವರ ಸರ್ಕಲ್ ಮುಖಾಂತರ ಪ್ರಮುಖ ಸರ್ಕಲಗಳ ಮುಖಾಂತರ ಸಂಸ್ಕೃತ ಉದ್ಘೋಷಗಳನ್ನು ಮಕ್ಕಳು ಪ್ರಮುಖ ಬೀದಿಗಳಲ್ಲಿ ಘೋಷಣೆ ಕುಗ್ಗುತ್ತಾ ಕೊನೆಯದಾಗಿ , ಕೆ ಇ ಬಿ ಹತ್ತಿರದ ಕಿತ್ತೂರು ಚೆನ್ನಮ್ಮ ಪ್ರಾಥಮಿಕ ಶಾಲೆಯಲ್ಲಿ ಸಮ್ಮಿಲನಗೊಳ್ಳಲಾಯಿತು.

ಉದ್ಘಾಟನೆಯನ್ನು ಅನೀಲ ಪತಂಗೆ , ಕಾರ್ಯದರ್ಶಿಗಳು ಮಲ್ಲಿಕಾರ್ಜುನ ವಿ ವಿ ಸಂಘ ತಡವಲಗಾ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಹಿರಿಯ ಪತ್ರಕರ್ತರಾದ ಶರಣು ಕಾಂಬಳೆ ಮಾತನಾಡುತ್ತಾ ಸಂಸ್ಕೃತ ಭಾಷೆಯು ಸ್ವರ್ಗಕ್ಕೆ ಕರೆದುಕೊಂಡು ಹೋಗುವ ಭಾಷೆಯಾಗಿದೆ. ಏಕೆಂದರೆ ಪ್ರಾಚೀನವಾದ ಆಯುರ್ ವೇದ, ನ್ಯಾಯಶಾಸ್ತ್ರ,ಯೋಗ, ಕೌಟಿಲ್ಯನ ಅರ್ಥಶಾಸ್ತ್ರ ಮುಂತಾದ ಅರ್ಥಪೂರ್ಣವಾದ ಚಿಂತನೆಗಳ ಪ್ರವಾಹಗಳು ಸಂಸ್ಕೃತ ಭಾಷೆಯುಲ್ಲಿ ಅಡಗಿದೆ ಎಂದು ಮಾತನಾಡಿದರು.

ಬೆಳಗಾವಿ ವಲಯ ವಿಷಯ ಪರವೀಕ್ಷಕರಾದ ಜಗದೀಶ್ ಕರೇಪ್ಪನವರ ಮಾತನಾಡಿ ಸಂಸ್ಕೃತ ಭಾಷೆಯು ಯಾರ ಸ್ವತ್ತು ಅಲ್ಲ,ಸಾದಕರ ಸ್ವತ್ತು ಎಂದು ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಹಿರಿಯ ರೈತ ಹೋರಾಟಗಾರ ಗುರುನಾಥ್ ಬಗಲಿಯವರು ಸಂಸ್ಕೃತ ಶ್ಲೋಕಗಳನ್ನು ಸುಶ್ರಾವ್ಯವಾಗಿ ಹಾಡಿದರು, ಇನ್ನೂರ್ವ ಅಥಿತಿಗಳಾದ ಐ.ಸಿ.ಪೂಜಾರಿ ಮಾತನಾಡುತ್ತಾ ಸಂಸ್ಕೃತ ಭಾಷೆಯು ದೇವ ಭಾಷೆ ಅದರ ಬೆಳವಣಿಗೆಗೆ ಪೂರಕ ವಾತಾವರಣ ನಿರ್ಮಾಣ ಮಾಡುವುದು ನಮ್ಮ ಕರ್ತವ್ಯ ಎಂದು ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಮಾಜಿ ಪುರಸಭಾ ಸದಸ್ಯರಾದ ಸಿದ್ದು ಡಂಗಾ, ಸಂಸ್ಕೃತ ಶಿಕ್ಷಕರಾದ ಶ್ರೀಮತಿ ಗೀತಾ ಬಂಕಾಪೂರ, ಶ್ರೀಮತಿ ಮಾಲಾ ತಾಂಡೂರ, ಸಂಸ್ಕೃತ ಪಾಠಶಾಲೆಗಳ ಶಿಕ್ಷಕ ಸಂಘದ ಜಿಲ್ಲಾ ಅಧ್ಯಕ್ಷರಾದ ಎಸ್ ಸಿ.ಇಂಡಿ,ಆಕಾಶ ಇಂಡಿ, ಎಸ್ ಕೆ ಮಿರಗಿ,ಶಕೀಲ ಅಂಗಡಿ, ಸವಿತಾ ಕಟ್ಟಿಮನಿ, ಶ್ರೀಮತಿ ಸುಮಾ .ಹೂಸಮನಿ, ಶ್ರೀಮತಿ ಪ್ರೀತಿ ರಾಠೋಡ,ಕುಮಾರಿ ಎಸ್ ಜಿ ಕಟ್ಟಿಮನಿ ಉಪಸ್ಥಿತರಿದ್ದರು. ನೂರಾರು ವಿದ್ಯಾ ರ್ಥಿಗಳು ಹಾಗೂ ಸಾಂಸ್ಕೃತ ಪಾಠಶಾಲೆ ಶಿಕ್ಷಕರು ಹಾಗೂ ಶಿಕ್ಷಕಿಯರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಸಂಸ್ಕೃತ ಭಾಷೆಯು ದೇವ ಭಾಷೆ**

# ಸಂಘದ ಏಳ್ಗೆಗೆ ಎಲ್ಲಾ ರೈತರು ಸಂಘದಲ್ಲಿ ವ್ಯವಹರಿಸಿ

• **ಉದಯವಾಹಿನಿ, ಮುದ್ದೇಬಿಹಾಳ**

ನಮ್ಮ ಭಾಗದ ರೈತರಿಗಾಗಿ ರೈತರ ಆರ್ಥಿಕ ನೆರವು ನೆರವು ನೀಡಲೆಂದು ನಮ್ಮ ಮಡಿಕೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ಇದೆ ಹೀಗಾಗಿ ನಿಮಗಾಗಿ ಇರುವ ಈ ಸಂಘ ದ ಏಳ್ಗಗೆ ರೈತರು ನ್ಯಾಷನಲ್ ಬ್ಯಾಂಕ್ ಬಿಟ್ಟು ನಮ್ಮ ಬ್ಯಾಂಕ್ ನಲ್ಲಿ ಹೆಚ್ಚಿನ ವ್ಯವಹಾರ ಮಾಡಬೇಕು ಎಂದು ಸಂಘದ ಅಧ್ಯಕ್ಷ ಬಸನಗೌಡ ಪಾಟೀಲ್ ಹೇಳಿದರು. ಮಡಿಕೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ 48 ನೇ ಸರ್ವ ಸಾಧಾರಣ ಸಭೆ ಉದ್ದೇಶಿಸಿ ಮಾತನಾಡಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ತುಂಬಗಿ ವಾರ್ಷಿಕ ವರದಿ ವಾಚನ ಮಾಡಿ ನಮ್ಮ ಸಂಘದಲ್ಲಿ ಬಿಕೆಸಿಸಿ 820 ಸದಸ್ಯರಿಗೆ 4 ಕೋಟಿ 91 ಲಕ್ಷ ರೂ ಸಾಲ ಬಿನ್ ಶೆಟಗಿ ಅಡಿಯಲ್ಲಿ 60 ಲಕ್ಷ ರೂ ಸಾಲವನ್ನು ನೀಡಲಾಗಿದೆ ಯಾವುದೇ ಕಟ್ ಬಾಕಿ ಇರುವುದಿಲ್ಲ ಸಂಘದಲ್ಲಿ 1555 ಸದಸ್ಯರಿದ್ದಾರೆಂದು ಮಾಹಿತಿ ನೀಡಿದರು. ವಾರ್ಷಿಕ ಸಭೆಯಲ್ಲಿ, ಉಪಾಧ್ಯಕ್ಷ ಸಿದ್ದನಗೌಡ ಬಿರಾದಾರ, ನಿರ್ದೇಶಕರಾದ ಸೋಮನಗೌಡ ಕೋಳೂರ, ಶರಣಗೌಡ ಪಾಟೀಲ್, ಮನೋಹರ ಬಡಿಗೇರ, ಗುರಣ್ಣ ತುಂಬಗಿ,ಸಿದ್ದಬೀರಪ್ಪ ಹೂಗಾರ, ಶಶಿಕುಮಾರ ಗಸ್ತಿ,ರಾಮಪ್ಪ ಬೇಡರ, ಶ್ರೀಮತಿ ಮಲ್ಲಮ್ಮ ಬಿರಾದಾರ, ಜಯಶ್ರೀ ಲಿಂಗದಳ್ಳಿ, ಕ್ಷೇತ್ರಾಧಿಕಾರಿ ಆರ್ ಎಂ ಗುರಿಕಾರ ಮತ್ತಿತರರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ರೈತರಿಗೆ ನಮ್ಮ ಸಹಕಾರಿ ಸಂಘದಲ್ಲಿ ಶೂನ್ಯ ಬಡ್ಡಿ ದರದಲ್ಲಿ ಸಾಲವನ್ನು ನೀಡಲಾಗುತ್ತದೆ ಇಲ್ಲಿಯವರೆಗೆ ಯಾವುದೇ ಕಟ್ ಬಾಕಿ ಇರುವುದಿಲ್ಲ ಪ್ರಸ್ತುತ ವರ್ಷ ನಮ್ಮ ಸಂಘ 2.41 ಲಕ್ಷ ರೂ ನಿವ್ವಳ ಲಾಭದಲ್ಲಿದೆ , ನಮ್ಮ ಮಡಿಕೇಶ್ವರ ಭಾಗದಲ್ಲಿ ಸಂಪೂರ್ಣ ನೀರಾವರಿ ಆದರೆ ನಮ್ಮ ರೈತರಿಗೆ ಮಾತ್ರವಲ್ಲದೆ ನಮ್ಮ ಸಂಘಕ್ಕೂ ಇದರಿಂದ ಲಾಭವಾಗಲಿದೆ -ಬಸನಗೌಡ ಪಾಟೀಲ್**

# ಮುನಿರತ್ನ ವಿರುದ್ಧ ಕ್ರಮಕ್ಕೆ ಡಿಎಸ್ಎಸ್ ಒತ್ತಾಯ


• **ಉದಯವಾಹಿನಿ, ಚಿತ್ತಾಪುರ**

ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ನಾಯ್ಡು ಅವರು ಬಿಬಿಎಂಪಿ ಗುತ್ತಿಗೆದಾರ ಚಲುವರಾಜ ಅವರೊಂದಿಗೆ ಹಣಕಾಸಿನ ವಿಚಾರವಾಗಿ ನಡೆಸಿದ ಮಾತುಕತೆಯಲ್ಲಿ ಜಾತಿ ನಿಂದನೆ ಹಾಗೂ ಮಹಿಳೆಯರ ಅವಹೇಳನ ಮಾಡಿದ್ದಾರೆ. ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಗುರುವಾರ ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಸಮಿತಿಯ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ಬೆಣ್ಣೂರಕರ್, ತಾಲ್ಲೂಕು ಅಧ್ಯಕ್ಷ ಲೋಹಿತ ಮುದ್ದಡಗಿ, ವಿಭಾಗೀಯ ಅಧ್ಯಕ್ಷ ಆನಂದ ಮೊಗಲಾ, ಜಿಲ್ಲಾ ಮುಖಂಡ ಶ್ರೀಕಾಂತ ಶಿಂಧೆ ಅವರ ನೇತೃತ್ವದಲ್ಲಿ ಪದಾಧಿಕಾರಿಗಳು, ಪಿಎಸ್ಐ ಶ್ರೀಶೈಲ್ ಅಂಬಾಟಿ ಅವರಿಗೆ ದೂರು ಸಲ್ಲಿಸಿದರು.

ಸಂವಿಧಾನಿಕ ಹುದ್ದೆಯಲ್ಲಿರುವ ಶಾಸಕ ಮುನಿರತ್ನ ನಾಯ್ಡು ಅವರು ಅಸಂವಿಧಾನಿಕವಾಗಿ ಮಾತುಗಳನ್ನಾಡುವ ಮೂಲಕ ಪರಿಶಿಷ್ಟ ಜಾತಿಯ ಜನರಿಗೆ ಜಾತಿಯ ಹೆಸರು ಉಲ್ಲೇಖಿಸಿ ನಿಂದನೆ ಮಾಡಿದ್ದಾರೆ. ಚಲುವರಾಜನೊಂದಿಗೆ ಮಾತನಾಡಿ ಮಹಿಳೆಗೆ ಬಹಿರಂಗವಾಗಿ ಅಪಮಾನಿಸಿದ್ದಾರೆ. ಪರಿಶಿಷ್ಟ ಜಾತಿಯ ಹೆಸರು ಹೇಳುವ ಮೂಲಕ ನಿಂದನೆ ಮಾಡಿದ್ದಾರೆ. ಮುನಿರತ್ನ ವಿರುದ್ಧ ಸಾಮಾಜಿಕ ನ್ಯಾಯ ಮತ್ತು ಮಹಿಳೆಯರ ರಕ್ಷಣೆ ಮಾಡುವ ನಿಟ್ಟಿನಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದರು.

ದಲಿತ ಮುಖಂಡರಾದ ಪರಶು ಮೊಗಲಾ, ಬಸವರಾಜ ಮುಡಬೂಳ, ಶರಣು ಮರಗೋಳ, ರಾಜೇಶ್ ಬುಳಕರ್, ಅಂಬರೀಶ ಮತ್ತಿಮೂಡ, ದಯಾಸಾಗರ ಚಿತ್ತೆಕರ್, ಕುಶಾಲ ನಾಟಿಕಾರ, ಮಲ್ಲಿಕಾರ್ಜುನ ಕಲ್ಮರಿ ಇದ್ದರು.



ಉದಯವಾಹಿನಿ ಚಿತ್ರ

# ಪ್ರತಿಭಾ ಕಾರಂಜಿಯಲ್ಲಿ ಜ್ಞಾನ ಭಾರತಿ ಸಾಧನೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮುದ್ದೇಬಿಹಾಳ**

ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಜ್ಞಾನ ಭಾರತಿ ಮಕ್ಕಳ ಉತ್ತಮ ಸಾಧನೆಪಟ್ಟಣದ ಜ್ಞಾನ ಭಾರತಿ ವಿದ್ಯಾಮಂದಿರ ಶಾಲೆಯ ಮಕ್ಕಳು ಮುದ್ದೇಬಿಹಾಳ ಕ್ಲಸ್ಟರ್ ಮಟ್ಟದ ಪ್ರತಿಭಾಕಾರಂಜಿಯಲ್ಲಿ ಆಂಗ್ಲ ಮಾಧ್ಯಮ ವಿಭಾಗದ ನಂದಿನಿ ಬೀರಕಬ್ಬಿ ಕನ್ನಡ ಕಂಠಪಾಠದಲ್ಲಿ ಪ್ರಥಮ ಸ್ಥಾನ, ಪ್ರೌಢ ವಿಭಾಗದ ಪ್ರಜ್ವಲ ಬಿರಾದಾರ ಕವನ ವಾಚನ ಸ್ಪರ್ಧೆಯಲ್ಲಿ ಪ್ರಥಮ, ಭವಾನಿ ಝಿಂಗಾಡೆ ಧಾರ್ಮಿಕ ಪಠಣ (ಸಂಸ್ಕೃತ) ದಲ್ಲಿ ಪ್ರಥಮ ಸ್ಥಾನ ಪಡೆದು ತಾಲ್ಲೂಕಾ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಈ ಎಲ್ಲಾ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಅಧ್ಯಕ್ಷರಾದ ಬಿ.ಪಿ.ಕುಲಕರ್ಣಿ, ಉಪಾಧ್ಯಕ್ಷ ಡಾ.ಎಸ್.ಬಿ.ವಡವಡಗಿ, ಕಾರ್ಯದರ್ಶಿ ಪ್ರಭು ಕಡಿ, ಕೋಶಾಧ್ಯಕ್ಷ ಮಾಣಿಕ ದಂಡಾವತಿ, ಸಹ ಕಾರ್ಯದರ್ಶಿ ವಿ.ಎಮ್.ನಾಗಾಠಾಣ ಹಿರಿಯ ಸದಸ್ಯರುಗಳಾದ ಬಿ.ಆರ್.ಓಸ್ವಾಲ್, ಜಿ.ಎಸ್.ಓಸ್ವಾಲ್ ವಿಭಾಗಗಳ ಪ್ರಮುಖರಾದ ಎ.ಕೆ.ಹುನಗುಂದ ರಾಮಚಂದ್ರ ಹೆಗಡೆ, ಸರಸ್ವತಿ ಮಡಿವಾಳರ್,ರಂಜಿತಾ ಭಟ್ಟ ಸೇರಿದಂತೆ ಸರ್ವ ಸಿಬ್ಬಂದಿ ವರ್ಗದವರು ಅಭಿನಂದಿಸಿರುತ್ತಾರೆ.

# ಕುರಿಗಳ ಹಿಂಡಿನ ಮೇಲೆ ಹರಿದ ಖಾಸಗಿ ಬಸ್: 125 ಕುರಿಗಳು ಸಾವು

• **ಉದಯವಾಹಿನಿ ರಾಯಚೂರು**

ಇಲ್ಲಿನ ಹೊರವಲಯದ ಯರಮರಸ್ ಬೈಪಾಸ್‌ನಲ್ಲಿ ಖಾಸಗಿ ಬಸ್ ಹರಿದು 125 ಕುರಿಗಳು ಮೃತಪಟ್ಟಿರುವ ಘಟನೆ ನಡೆದಿದೆ. ಹೈದರಾಬಾದ್‌ನಿಂದ ಬೆಳಗಾವಿ ಕಡೆ ಬಸ್ ಚಲಿಸುತ್ತಿತ್ತು. ಇದೇ ಸಂದರ್ಭದಲ್ಲಿ ತೆಲಂಗಾಣದ ಮಕ್ತಲ್ ಬಳಿಯ ಓಬಳಾಪುರಂ ಗ್ರಾಮದ ಮಲ್ಲೇಶ್, ಸೀನಪ್ಪ ಮತ್ತು ಬಾಲರಾಜು ಎಂಬವರಿಗೆ ಸೇರಿದ 150 ಕ್ಕೂ ಹೆಚ್ಚು ಕುರಿಗಳು ತೆಲಂಗಾಣದಿಂದ ರಾಯಚೂರು ಮಾರ್ಗವಾಗಿ ಬರುತ್ತಿದ್ದವು. ಇತ್ತ ಚಾಲಕನ ನಿಯಂತ್ರಣ ತಪ್ಪಿದ ಬಸ್, ಕುರಿಗಳ ಹಿಂಡಿನ ಮೇಲೆ ಹರಿದಿದೆ. ಘಟನೆಯಲ್ಲಿ 125 ಕುರಿಗಳು ಮೃತಪಟ್ಟಿದ್ದು, 18 ಕುರಿಗಳ ಸ್ಥಿತಿ ಗಂಭೀರವಾಗಿದೆ. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ರಾಯಚೂರು ಗ್ರಾಮೀಣ ಪೊಲಿಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಶಿರೂರು ಗುಡ್ಡ ಕುಸಿತ ಪ್ರಕರಣ: ಗೋವಾದಿಂದ ಯಂತ್ರ, ಇಂದಿನಿಂದ ಶೋಧ ಕಾರ್ಯ

• **ಉದಯವಾಹಿನಿ ಅಂಕೋಲಾ**

ಶಿರೂರು ಗುಡ್ಡ ಕುಸಿತದಲ್ಲಿ ಕಾಣೆಯಾದ ಮೂವರ ಶೋಧಕ್ಕಾಗಿ ಗೋವಾದಿಂದ ಶಿರೂರಿಗೆ ಡ್ರೆಜ್ಜರ್ ಯಂತ್ರ ತಲುಪಿದ್ದು, ಸೆ.20ರ ಶುಕ್ರವಾರ 3ನೇ ಹಂತದ ಕಾರ್ಯಾಚರಣೆ ಆರಂಭವಾಗಿದೆ. ಡ್ರೆಜ್ಜರ್ ಯಂತ್ರವನ್ನು ನದಿಯಲ್ಲಿ ಲಂಗರು ಹಾಕಿ ನಿಲ್ಲಿಸಲಾಗಿದ್ದು, ಡ್ರೆಜ್ಜರ್ ಮೇಲಿರುವ ಕ್ರೇನ್, ಹಿಟಾಚಿ ಸಹಾಯದಿಂದ ಪೈಪ್ ಅಳವಡಿಕೆ ಕಾರ್ಯ ಪ್ರಾರಂಭವಾಗಿದೆ. ನೌಕಾನೆಲೆ ಗುರುತಿಸಿದ 4 ಸ್ಥಳಗಳಲ್ಲಿ ಮಣ್ಣು ತೆರವುಗೊಳಿಸಲು ಡ್ರೆಜ್ಜರ್ ಸಿದ್ದವಾಗಿದ್ದು, ಎನ್‌ಡಿಆರ್‌ಎಫ್, ಪೊಲೀಸ್, ತಾಲ್ಲೂಕಾಡಳಿತದ ಸಿಬ್ಬಂದಿಗಳು ಸ್ಥಳದಲ್ಲಿ ಮೊಕ್ಕಾಂ ಹೂಡಿದ್ದಾರೆ. ಗುಡ್ಡಕುಸಿತ ದುರಂತದಲ್ಲಿ 11 ಜನ ಮೃತಪಟ್ಟಿದ್ದು, ಇದುವರೆಗೆ 8 ಮಂದಿಯ ಶವ ಮಾತ್ರ ಪತ್ತೆ ಮಾಡಲಾಗಿತ್ತು. ಇನ್ನು ಶಿರೂರಿನ ಜಗನ್ನಾಥ ನಾಯ್ಕ, ಲೋಕೇಶ್, ಕೇರಳದ ಅರ್ಜುನ್‌ಗಾಗಿ 3ನೇ ಹಂತದ ಹತ್ತು ದಿನದ ಕಾರ್ಯಾಚರಣೆ ಇಂದಿನಿಂದ ನಡೆಯಲಿದೆ.



ಉದಯವಾಹಿನಿ ಚಿತ್ರ

# ಪಿಎಂ ವಿಶ್ವಕರ್ಮ ಯೋಜನೆ: 20 ಲಕ್ಷಕೂ ಹೆಚ್ಚು ನೊಂದಣಿ

## ಕೇಂದ್ರ ಸರ್ಕಾರ ರೂ.1400 ಕೋಟಿಗೂ ಹೆಚ್ಚು ಹಣವನ್ನು ಫಲಾನುಭವಿಗಳಿಗೆ ಸಬ್ಸಿಡಿ ರೂಪದಲ್ಲಿ ಬಿಡುಗಡೆ: ಎಂ ಕಾರಜೋಳ

• **ಉದಯವಾಹಿನಿ ಚಿತ್ರದುರ್ಗ**

ದೇಶದಲ್ಲಿ ಪಿಎಂ ವಿಶ್ವಕರ್ಮ ಯೋಜನೆಯಡಿ 20 ಲಕ್ಷಕ್ಕೂ ಹೆಚ್ಚು ಕುಶಲಕರ್ಮಿಗಳು ನೊಂದಣಿ ಮಾಡಿಕೊಂಡಿದ್ದಾರೆ. ಕೇಂದ್ರ ಸರ್ಕಾರ ರೂ.1400 ಕೋಟಿಗೂ ಹೆಚ್ಚು ಹಣವನ್ನು ಫಲಾನುಭವಿಗಳಿಗೆ ಸಬ್ಸಿಡಿ ರೂಪದಲ್ಲಿ ಬಿಡುಗಡೆ ಮಾಡಿದೆ ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

ನಗರದ ಶಾರದ ಸಭಾಭವನದಲ್ಲಿ ಶುಕ್ರವಾರ ಪಿಎಂ ವಿಶ್ವಕರ್ಮ ಯೋಜನೆ ವಾರ್ಷಿಕೋತ್ಸವ ಸಮಾರಂಭದ ಅಂಗವಾಗಿ ರಾಷ್ಟ್ರೀಯ ಪಿಎಂ ವಿಶ್ವಕರ್ಮ ಕಾರ್ಯಕ್ರಮದ ನೇರ ಪ್ರಸಾರ ವೀಕ್ಷಣೆ ಹಾಗೂ ಫಲಾನುಭವಿಗಳಿಗೆ ತರಬೇತಿ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು. ಪಿಎಂ ವಿಶ್ವಕರ್ಮ ಯೋಜನೆ ಜಾರಿಗೆ ಬಂದಾಗಿನಿಂದ ಇಲ್ಲಿಯವರೆಗೂ ಸುಮಾರು 20 ಲಕ್ಷಕ್ಕೂ ಹೆಚ್ಚು ಕುಶಲಕರ್ಮಿಗಳು ನೋಂದಣಿ ಮಾಡಿಕೊಂಡಿದ್ದು, 8 ಲಕ್ಷ ಕುಶಲಕರ್ಮಿಗಳು ಉನ್ನತ ತರಬೇತಿಯನ್ನೂ ಪಡೆದಿದ್ದಾರೆ.


ಈಗಾಗಲೇ 1.60 ಲಕ್ಷಕ್ಕೂ ಹೆಚ್ಚು ಜನರು ಇದರ ಲಾಭ ಪಡೆದಿದ್ದಾರೆ. ಕುಶಲಕರ್ಮಿಗಳಿಗೆ ರೂ.15 ಸಾವಿರ ಟೂಲ್ ಕಿಟ್ ಪ್ರೋತ್ಸಾಹವನ್ನು ಮನೆ ಬಾಗಿಲಿಗೆ ಕೊಡುವ ವ್ಯವಸ್ಥೆ ಮಾಡಲಾಗಿದೆ.

ಪಿಎಂ ವಿಶ್ವಕರ್ಮ ಯೋಜನೆಯಡಿಯಲ್ಲಿ ಬಡಿಗೆ ವೃತ್ತಿ ಮಾಡುವವರು, ದೋಣಿ ತಯಾರಿಸುವವರು, ಕಮ್ಮಾರ ವೃತ್ತಿ ಮಾಡುವವರು, ಕಲ್ಲುಕುಟಿಗ ವೃತ್ತಿ ಮಾಡುವವರು, ಟೈಲರಿಂಗ್, ಚಾಪೆ-ಕಸ ಪೊರಕೆ ತಯಾರಕರು, ಗೊಂಬೆ ಮತ್ತು ಆಟಿಕೆ ತಯಾರಕರು, ಕ್ಷೌರಿಕ ವೃತ್ತಿ ಮಾಡುವವರು, ಸುತ್ತಿಗೆ ಮತ್ತು ಉಪಕರಣಗಳನ್ನು ತಯಾರಿಸುವವರು, ಹೂಮಾಲೆ ತಯಾರಕರು, ದೋಬಿ, ಅಭರಣ ತಯಾರಕರು, ಕುಂಬಾರ ವೃತ್ತಿ ಮಾಡುವವರು, ಮೀನು ಬಲೆ ಹೆಣೆಯುವವರು, ಶಿಲ್ಪಿ, ಚಮ್ಮಾರ, ಪಾದರಕ್ಷೆ ತಯಾರಕರು, ಬೀಗ ತಯಾರಿಕಾ ಕುಶಲಕರ್ಮಿಗಳು ಸೇರಿದಂತೆ ಹೀಗೆ 18 ಬಗೆಯ ಕುಲಕಸುಬು ನಂಬಿ ಜೀವನ ನಡೆಸುವ ವಿಶ್ವಕರ್ಮ ಪಾಲುದಾರರು ಈ ಯೋಜನೆಯ ಫಲಾನುಭವಿಗಳಾಗಿದ್ದು, ಈ ಕುಶಲಕರ್ಮಿಗಳಿಗೆ ವಿಶೇಷ ಯೋಜನೆ ಜಾರಿಗೆ ತರುವ ಮೂಲಕ ರೂ.3 ಲಕ್ಷದವರೆಗೂ ಸಾಲ ಕೊಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಅದಲ್ಲದೇ 30 ತಿಂಗಳ ಅವಧಿಯೊಳಗೆ ಅತೀ ಕಡಿಮೆ ಬಡ್ಡಿಯಲ್ಲಿ ಶೇ.5 ಬಡ್ಡಿದರಲ್ಲಿ ಸಾಲ ಮರುಪಾವತಿಗೂ ಅವಕಾಶ ನೀಡಲಾಗಿದೆ. ಕೇಂದ್ರ ಸರ್ಕಾರ ಶೇ.8ರಷ್ಟು ಬಡ್ಡಿ ಸಬ್ಸಿಡಿ ತುಂಬಲಿದೆ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇವಣ್ಣ ಸೇರಿದಂತೆ ವಿಶ್ವಕರ್ಮ ಯೋಜನೆಯ ಫಲಾನುಭವಿಗಳು ಇದ್ದರು.

**13 ಸಾವಿರ ಕೋಟಿ ವೆಚ್ಚ**

**ವರ್ಗದವರಿಗೆ ಆರ್ಥಿಕ ನೆರವು**

**ಪ್ರಧಾನಿ ನರೇಂದ್ರ ಮೋದಿಯವರ ಸಾಮಾಜಿಕ ಕಳಕಳಿ ಮತ್ತು ಕಾಳಜಿಯಿಂದ ದೇಶದ 18 ವಿವಿಧ ಕ್ಷೇತ್ರಗಳ ಅಡಿಯಲ್ಲಿ ಕುಲದ ಕಸುಬು ನಂಬಿ ಜೀವನ ನಡೆಸುತ್ತಿರುವ ವರ್ಗದವರಿಗೆ ಆರ್ಥಿಕ ನೆರವು, ಸ್ವಯಂ ಉದ್ಯೋಗ, ವ್ಯಾಪಾರ ವಹಿವಾಟು ಸೌಲಭ್ಯ ಕಲ್ಪಿಸುವ ಕಳೆದ ವರ್ಷ ಸೆ.17ರಂದು ರೂ.13 ಸಾವಿರ ಕೋಟಿ ವೆಚ್ಚದಲ್ಲಿ ಪಿಎಂ ವಿಶ್ವಕರ್ಮ ಯೋಜನೆ ಅನುಷ್ಠಾನಗೊಳಿಸಿದರು.**



ಉದಯವಾಹಿನಿ ಚಿತ್ರ

**ಪಿಎಂ ವಿಶ್ವಕರ್ಮ ಯೋಜನೆಯಡಿ ಚಿತ್ರದುರ್ಗ ನಗರದ ಅಮ್ಮ ಪಬ್ಲಿಕ್ ಶಾಲೆಯಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮಾಲಾಕಾರ್, ಬಾಸ್ಕೆಟ್ ಮೇಕರ್, ದೋಬಿ ಸೇರಿದಂತೆ ವಿವಿಧ ಬಗೆಯ ಕ್ಷೇತ್ರಗಳಿಗೆ ಸಂಬಂಧಪಟ್ಟಂತೆ ತರಬೇತಿ ಕೋರ್ಸ್ ನಡೆಯುತ್ತಿದೆ. ಜಿಲ್ಲೆಯಲ್ಲಿ ಈಗಾಗಲೇ 700 ಜನರಿಗೆ ತರಬೇತಿ ನೀಡಲಾಗಿದ್ದು, ಎಲ್ಲರಿಗೂ ಶಿಷ್ಯವೇತನ ಹಾಗೂ ಟೂಲ್ ಕಿಟ್ ವಿತರಣೆ ಹಾಗೂ ಸಾಲ-ಸೌಲಭ್ಯಕ್ಕೂ ಕ್ರಮವಹಿಸಲಾಗಿದೆ**

**-ಉಮಾಕಾಂತ್ ಮನ್ನಾಳೆ, ನಕಾಫ್ ಸಂಸ್ಥೆಯ ತರಬೇತಿ ವ್ಯವಸ್ಥಾಪಕ**

# ಲೆಬನಾನ್ ವಿರುದ್ಧದ ಇಸ್ರೇಲ್ ಯುದ್ಧಕ್ಕೆ ಅಮೆರಿಕ ಸಾಥ್

● ಮೆಡಿಟರೇನಿಯನ್ ಸಮುದ್ರದಲ್ಲಿ ಅಮೆರಿಕ ನೌಕಾಪಡೆಯ 12ಕ್ಕೂ ಹೆಚ್ಚು ಯುದ್ಧ ನೌಕೆಗಳು ಲಂಗರು

**ಟೆಲ್ ಅವೀವ್:** ಮಧ್ಯ ಪ್ರಾಚ್ಯದಲ್ಲಿ ಅಮೆರಿಕ ಸೇನೆಯ ಪ್ರಮಾಣ ದಿನೇ ದಿನೇ ಏರಿಕೆ ಆಗುತ್ತಿದೆ. ಲೆಬನಾನ್‌ನಲ್ಲಿ ಹೆಜ್ಬೊಲ್ಲಾ ಉಗ್ರರು ಬಳಸುತ್ತಿದ್ದ ಪೇಜರ್ ಹಾಗೂ ವಾಕಿ ಟಾಕಿಗಳ ಸರಣಿ ಸ್ಫೋಟ ಸಂಭವಿಸಿದ ಬಳಿಕ ಅಮೆರಿಕ ಸೇನೆಯ ಒಟ್ಟು ಯೋಧರ ಪ್ರಮಾಣ ವಿಪರೀತ ಏರಿಕೆ ಕಂಡಿದೆ. ಮಧ್ಯ ಪ್ರಾಚ್ಯದಲ್ಲಿ ಅದರಲ್ಲೂ ಇಸ್ರೇಲ್ ಸೇನೆಗೆ ನೆರವು ನೀಡುವ ಕಾರಣಕ್ಕಾಗಿಯೇ ಅಮೆರಿಕ ಸೇನೆಯ 40 ಸಾವಿರ ಯೋಧರು ಸನ್ನದ್ಧರಾಗಿದ್ದಾರೆ.

**ಬೃಹತ್ ಪ್ರಮಾಣದ ಸೇನೆಯೊಂದಿಗೆ ಧಾವಿಸಿದೆ ಅಮೆರಿಕ:** ಮೆಡಿಟರೇನಿಯನ್ ಸಮುದ್ರದಲ್ಲಿ ಅಮೆರಿಕ ನೌಕಾ ಪಡೆಯ 12ಕ್ಕೂ ಹೆಚ್ಚು ಯುದ್ಧ ನೌಕೆಗಳು ನೆಲೆ ನಿಂತಿವೆ. ಅಷ್ಟೇ ಅಲ್ಲ, ಅಮೆರಿಕ ವಾಯು ಪಡೆಯ ನಾಲ್ಕು ಸ್ಕ್ವಾಡ್ರನ್ ಯುದ್ಧ ವಿಮಾನಗಳ ತಂಡವನ್ನು ನಿಯೋಜನೆ ಮಾಡಲಾಗಿದೆ. ಕಳೆದ ಒಂದು ವರ್ಷದ ಅವಧಿಯಲ್ಲಿ ಮಧ್ಯ ಪ್ರಾಚ್ಯದಲ್ಲಿ ಇದ್ದ ಅಮೆರಿಕ ಸೇನೆಯ ಪ್ರಮಾಣಕ್ಕೂ ಈಗ ಇರುವ ಪ್ರಮಾಣಕ್ಕೂ ಅಜಗಜಾಂತರ ವ್ಯತ್ಯಾಸವಾಗಿದೆ.



ಉದಯವಾಹಿನಿ ಚಿತ್ರ

- ಮೆಡಿಟರೇನಿಯನ್ ಸಮುದ್ರದಲ್ಲಿ ಅಮೆರಿಕ ನೌಕಾ ಪಡೆಯ 12ಕ್ಕೂ ಹೆಚ್ಚು ಯುದ್ಧ ನೌಕೆಗಳು ಲಂಗರು
- ಅಮೆರಿಕ ವಾಯು ಪಡೆಯ ನಾಲ್ಕು ಸ್ಕ್ವಾಡ್ರನ್ ಯುದ್ಧ ವಿಮಾನಗಳ ತಂಡ ನಿಯೋಜನೆ
- ಅಮೆರಿಕ ಸೇನೆಯ 40 ಸಾವಿರ ಯೋಧರು ಸನ್ನದ್ಧ!

### ಇಸ್ರೇಲ್ ರಕ್ಷಣೆಗೆ ಪಣ

**ಅಮೆರಿಕದ ರಕ್ಷಣಾ ಇಲಾಖೆಯ ಪ್ರಧಾನ ಕಚೇರಿ ಪೆಂಟಗಾನ್, ಇಸ್ರೇಲ್ ದೇಶದ ರಕ್ಷಣೆಯ ಪಣ ತೊಟ್ಟಿದೆ. ಇಸ್ರೇಲ್ ಭದ್ರತಾ ಪಡೆಗಳಿಗೆ ಎಲ್ಲಾ ರೀತಿಯ ನೆರವು ನೀಡಲು ಅಮೆರಿಕ ಸನ್ನದ್ಧವಾಗಿದ್ದು, ಸದ್ಯದ ಮಟ್ಟಿಗೆ ಇಸ್ರೇಲ್ ಸೇನೆ ತನ್ನ ದೇಶವನ್ನು ತಾನು ರಕ್ಷಣೆ ಮಾಡಿಕೊಳ್ಳಲು ಶಕ್ತವಾಗಿದೆ. ಈ ಹಂತದಲ್ಲಿ ಇಸ್ರೇಲ್‌ಗೆ ಬೇಕಿರುವ ಎಲ್ಲಾ ರೀತಿಯ ರಕ್ಷಣಾ ನೆರವು ನೀಡೋದಾಗಿ ಪೆಂಟಗಾನ್ ವಕ್ತಾರರಾದ ಸಬ್ರೀನಾ ಸಿಂಗ್ ಅವರು ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ.**

### ಪೇಜರ್, ವಾಕಿ ಟಾಕಿ ಸ್ಫೋಟದ ಬಳಿಕ ಹೆಚ್ಚಾಯ್ತು ಯುದ್ಧ ಭೀತಿ

**ಇಸ್ರೇಲ್ - ಹಮಾಸ್ ಸಂಘರ್ಷ ಶುರುವಾದ ಬಳಿಕ ಮೆಡಿಟರೇನಿಯನ್ ಸಮುದ್ರದಲ್ಲಿ ಅಮೆರಿಕ ಸೇನೆಯ ಜಮಾವಣೆ ಹೆಚ್ಚುತ್ತಲೇ ಇದೆ. ಇದೀಗ ಲೆಬನಾನ್ ದೇಶದಲ್ಲಿ ಹೆಜ್ಬೊಲ್ಲಾ ಉಗ್ರ ಸಂಘಟನೆ ಸದಸ್ಯರ ಪೇಜರ್ ಹಾಗೂ ವಾಕಿ ಟಾಕಿಗಳು ಸ್ಫೋಟಗೊಂಡ ಬಳಿಕ ಪರಿಸ್ಥಿತಿ ಉದ್ವಿಗ್ನವಾಗಿದ್ದು, ಇಸ್ರೇಲ್ ವಿರುದ್ಧ ಪ್ರತೀಕಾರದ ದಾಳಿ ನಡೆಸಲು ಹೆಜ್ಬೊಲ್ಲಾ ಉಗ್ರ ಸಂಘಟನೆ ತೀರ್ಮಾನಿಸಿದೆ.**

ಇದರ ಬೆನ್ನಲ್ಲೇ ಲೆಬನಾನ್‌ನ ದಕ್ಷಿಣ ಭಾಗದಲ್ಲಿ ಇಸ್ರೇಲ್ ಸೇನೆಯ ನೂರಕ್ಕೂ ಹೆಚ್ಚು ರಾಕೆಟ್‌ಗಳು ಅರ್ಭಟಿಸಿದ್ದು, ಹೆಜ್ಬೊಲ್ಲಾ ಉಗ್ರ ಸಂಘಟನೆಯ ಶಸ್ತ್ರಾಸ್ತ್ರ ಸಂಗ್ರಹಾಗಾರಗಳು ಹಾಗೂ ನೆಲೆಗಳು ಧ್ವಂಸವಾಗಿವೆ.

ಈ ಹಿನ್ನೆಲೆಯಲ್ಲಿ ಹೆಜ್ಬೊಲ್ಲಾ ಉಗ್ರರು ಇಸ್ರೇಲ್ ಮೇಲೆ ಪೂರ್ಣ ಪ್ರಮಾಣದ ಯುದ್ಧ ಆರಂಭಿಸುವ ಸಾಧ್ಯತೆ ದಟ್ಟವಾಗಿದ್ದು, ಅಮೆರಿಕ ಕೂಡಾ ಇಸ್ರೇಲ್‌ಗೆ ಎಲ್ಲಾ ರೀತಿಯ ನೆರವು ನೀಡಲು ಸನ್ನದ್ಧವಾಗಿದೆ. 2023ರ ಅಕ್ಟೋಬರ್ 7 ರಂದು ಹಮಾಸ್ ಉಗ್ರರು ಇಸ್ರೇಲ್ ನೆಲಕ್ಕೆ ನುಗ್ಗಿ ಭಾರೀ ಪ್ರಮಾಣದ ಹಿಂಸಾಚಾರ ನಡೆಸಿದ್ದರು. ನೂರಾರು ಜನರನ್ನು ಹತ್ಯೆ ಮಾಡಿದ್ದಷ್ಟೇ ಅಲ್ಲ, ನೂರಾರು ಜನರನ್ನು ಒತ್ತೆಯಾಳನ್ನಾಗಿಯೂ ಗಾಜಾ ಪಟ್ಟಿಗೆ ಕರೆದೊಯ್ದಿದ್ದರು.

**ದಾಳಿಗೆ ಯುದ್ಧ ವಿಮಾನಗಳು ಸನ್ನದ್ಧ**

## ಅಮೆರಿಕದಲ್ಲಿ ಇಂದು ಕ್ವಾಡ್ ಶೃಂಗಸಭೆ

**ವಾಷಿಂಗ್ಟನ್:** ಡೆಲವೇರ್‌ನಲ್ಲಿ ನಡೆಯಲಿರುವ ಕ್ವಾಡ್ ಶಂಗಸಭೆಯು ಸಾಗರ ಭದ್ರತೆ, ಉತ್ತಮ ಗುಣಮಟ್ಟದ ಮೂಲಸೌಕರ್ಯ ಮತ್ತು ಗುಂಪಿನ ಸಹಿಷ್ಣುತೆಯನ್ನು ಪ್ರದರ್ಶಿಸಲು ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಂತಹ ಅನೇಕ ಕ್ಷೇತ್ರಗಳಲ್ಲಿ ಮಹತ್ವಾಕಾಂಕ್ಷೆಯ ಘೋಷಣೆಗಳನ್ನು ಒಳಗೊಂಡಿರುತ್ತದೆ ಎಂದು ಶ್ವೇತಭವನದ ಉನ್ನತ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ನಾಳೆ ನಾಲ್ಕನೇ ವ್ಯಕ್ತಿಗತ ಕ್ವಾಡ್ ಲೀಡರ್‌ಗಳ ಶಂಗಸಭೆಗಾಗಿ ಯುಎಸ್ ಅಧ್ಯಕ್ಷ ಜೋ ಬಿಡನ್ ಅವರು ಪ್ರಧಾನಿ ನರೇಂದ್ರ ಮೋದಿ, ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಮತ್ತು ಜಪಾನ್ ಪ್ರಧಾನಿ ಕಿಶಿದಾ ಫ್ಯೂಮಿಯೊ ಅವರನ್ನು ಆತಿಥ್ಯ ವಹಿಸಲಿದ್ದಾರೆ. ಈ ವರ್ಷದ ಕ್ವಾಡ್ ಶಂಗಸಭೆಯು ಕ್ವಾಡ್ ಬೆಳೆದ ಮತ್ತು ಕೆಲಸ ಮಾಡಲು ಬಳಸುವ



ಪ್ರದೇಶಗಳಲ್ಲಿ ಮಹತ್ವಾಕಾಂಕ್ಷೆಯ ಪ್ರಕಟಣೆಗಳನ್ನು ಒಳಗೊಂಡಿರುತ್ತದೆ ಮತ್ತು ಇಂಡೋ-ಪೆಸಿಫಿಕ್ ಪಾಲುದಾರರು ಕ್ವಾಡ್ನ ವಿತರಣೆಗೆ ಆದ್ಯತೆ ನೀಡುತ್ತಾರೆ. ಇವುಗಳಲ್ಲಿ ಆರೋಗ್ಯ, ಭದ್ರತೆ, ಮಾನವೀಯ ಮತ್ತು ವಿಪತ್ತು ಪ್ರತಿಕ್ರಿಯೆ, ಕಡಲ ಭದ್ರತೆ, ಉನ್ನತ ಗುಣಮಟ್ಟದ ಮೂಲಸೌಕರ್ಯ, ನಿರ್ಣಾಯಕ ಮತ್ತು ಉದಯೋನುಖ ತಂತ್ರಜ್ಞಾನಗಳು, ಹವಾಮಾನ ಮತ್ತು ಶುದ್ಧ ಶಕ್ತಿ ಮತ್ತು ಸೈಬರ್ ಭದ್ರತೆ ಸೇರಿವೆ ಎಂದು ಶ್ವೇತಭವನದ ರಾಷ್ಟ್ರೀಯ ಭದ್ರತಾ ಮಂಡಳಿಯ ಪೂರ್ವ ಏಷ್ಯಾ ಮತ್ತು ಓಷಿಯಾನಿಯಾದ ಹಿರಿಯ ನಿರ್ದೇಶಕಿ ಮೀರಾ ರಾಪ್-ಹೂಪರ್ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಸುದ್ದಿಗಾರರಿಗೆ ತಿಳಿಸಿದರು.

> **ಅಧ್ಯಕ್ಷ ಬಿಡೆನ್ ಅವರು ಡೆಲವೇರ್ ವಿಲಿಂಗ್ಟನ್ನಲ್ಲಿ ವಿದೇಶಿ ನಾಯಕರಿಗೆ ಆತಿಥ್ಯ ವಹಿಸುವುದು ಇದೇ ಮೊದಲು, ನಾಯಕರೊಂದಿಗಿನ ಅವರ ಬಲವಾದ ಸಂಬಂಧ ಮತ್ತು ಅವರ ಕಾರ್ಯತಂತ್ರದ ಪ್ರಾಮುಖ್ಯತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು.**

ಈ ವರ್ಷದ ಕ್ವಾಡ್ ಶಂಗಸಭೆಯನ್ನು ಮೂಸಲತಃ ಭಾರತದಲ್ಲಿ ನಡೆಸಲು ನಿರ್ಧರಿಸಲಾಗಿತ್ತು, ಆದರೆ ನಾಲ್ಕು ನಾಯಕರ ವೇಳಾಪಟ್ಟಿಯನ್ನು ನೋಡಿದ ನಂತರ ಸ್ಥಳವನ್ನು ಯುಎಸ್‌ಗೆ ಸ್ಥಳಾಂತರಿಸಲಾಯಿತು ಎಂದು ಅವರು ಹೇಳಿದರು.

## ಟಿಎಂಸಿ ಯುವ ನಾಯಕನಿಗೆ ಸಿಬಿಐ ಗ್ರಿಲ್




**ಕೋಲ್ಕತ್ತಾ:** ವೈದ್ಯರ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಗಹ ಸಿಬ್ಬಂದಿಯೂ ಆಗಿರುವ ಟಿಎಂಸಿ ಯುವ ನಾಯಕ ಆಶಿಶ್ ಪಾಂಡೆ ಅವರನ್ನು ಸಿಬಿಐ ವಿಚಾರಣೆ ನಡೆಸಿದೆ.

ಪಾಂಡೆ ಅವರು ತಡರಾತ್ರಿ ಹೊರಡುವ ಮೊದಲು ಸಿಬಿಐನ ಸಿಜಿಓ ಕಾಂಪ್ಲೆಕ್ಸ್ ಕಚೇರಿಯಲ್ಲಿ ಗಂಟೆಗಳ ಕಾಲ ವಿಚಾರಣೆ ನಡೆಸಲಾಯಿತು ಎಂದು ತಿಳಿದು ಬಂದಿದೆ.

ಹಲವು ವ್ಯಕ್ತಿಗಳ ಕಾಲ್ ಲಿಸ್ಟ್‌ಗಳಲ್ಲಿ ಪಾಂಡೆ ಅವರ ಫೋನ್ ಸಂಖ್ಯೆ ಕಂಡುಬಂದಿದೆ. ಟ್ರೈನಿ ವೈದ್ಯರ ಶವ ಪತ್ತೆಯಾದ ದಿನದಂದು ಅವರು ಸಾಲ್ಟ್ ಲೇಕ್ನಲ್ಲಿರುವ ಹೋಟೆಲ್ನಲ್ಲಿ ಮಹಿಳಾ ಸ್ನೇಹಿತನೊಂದಿಗೆ ಚೆಕ್ ಇನ್ ಮಾಡಿದ್ದರು. ಆ ದಿನ ಅವರ ಚಟುವಟಿಕೆಗಳನ್ನು ಖಚಿತ ಪಡಿಸಿಕೊಳ್ಳಲು ನಾವು ಪ್ರಯತ್ನಿಸುತ್ತಿದ್ದೇವೆ ಎಂದು ಸಿಬಿಐ ಅಧಿಕಾರಿ ಹೇಳಿದ್ದಾರೆ.ಪಾಂಡೆ ಅವರ ಬುಕಿಂಗ್ ಮತ್ತು ಪಾವತಿಗಳ ವಿವರಗಳಿಗಾಗಿ ಸಿಬಿಐ ಹೋಟೆಲ್ ಅಧಿಕಾರಿಗಳನ್ನು ಕರೆಸಿದೆ. ಹೋಟೆಲ್ ರೂಮ್ ಅನ್ನು ಅಪ್ಲಿಕೇಶನ್ ಮೂಲಕ ಬುಕ್ ಮಾಡಲಾಗಿದೆ. ಅವರು ಆಗಸ್ಟ್ 9 ರಂದು ಮಧ್ಯಾಹ್ನ ಚೆಕ್-ಇನ್ ಮಾಡಿದರು ಮತ್ತು ಮರುದಿನ ಬೆಳಿಗ್ಗೆ ಹೊರಟರು. ಅವರು ಅಲ್ಲಿ ಉಳಿದುಕೊಂಡಿರುವ ಉದ್ದೇಶವೇನು ಎಂಬುದನ್ನು ನಾವು ಕಂಡುಹಿಡಿಯಲು ಪ್ರಯತ್ನಿಸುತ್ತಿದ್ದೇವೆ ಎಂದು ಅಧಿಕಾರಿ ಹೇಳಿದರು. ಆಗಸ್ಟ್ 9 ರಂದು ಆಸ್ಪತ್ರೆಯಲ್ಲಿ ಟ್ರೈನಿ ವೈದ್ಯರ ಶವ ಪತ್ತೆಯಾಗಿದ್ದು, ರಾಷ್ಟ್ರವ್ಯಾಪಿ ಆಕ್ರೋಶಕ್ಕೆ ಕಾರಣವಾಗಿತ್ತು.

## ಇಡೀ ಕುಟುಂಬ ಮನೆಯಲ್ಲಿ ಶವವಾಗಿ ಪತ್ತೆ

**ಧುಲೆ:** ಇಬ್ಬರು ಮಕ್ಕಳು ಸೇರಿದಂತೆ ಒಂದೇ ಕುಟುಂಬದ ನಾಲ್ವರು ಮಹಾರಾಷ್ಟ್ರದ ಧುಲೆಯ ಪ್ರಮೋದ್ ನಗರ ಪ್ರದೇಶದಲ್ಲಿನ ಅವರ ಮನೆಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಮೃತರನ್ನು ಕಷಿ ರಸಗೊಬ್ಬರ ಮಾರಾಟಗಾರ ಪ್ರವೀಣ್ ಮಾನಸಿಂಗ್ ಗಿರಾಸೆ, ಅವರ ಪತ್ನಿ ಗೀತಾ ಪ್ರವೀಣ್ ಗಿರಾಸೆ, ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದು, ಅವರ ಇಬ್ಬರು ಮಕ್ಕಳಾದ ಮಿತೇಶ್ ಪ್ರವೀಣ್ ಗಿರಾಸೆ ಮತ್ತು ಸೋಹಂ ಪ್ರವೀಣ್ ಗಿರಾಸೆ ಎಂದು ಗುರುತಿಸಲಾಗಿದೆ.

ಧುಲೆ ಜಿಲ್ಲೆಯ ದೇವಪುರ ಪೊಲೀಸ್ ಠಾಣೆ ವ್ಯಾಪ್ತಿಯ ಸಮರ್ಥ ಕಾಲೋನಿಯ ಪ್ರಮೋದ್ ನಗರ ಪ್ರದೇಶದ ಅವರ ಮನೆಯಲ್ಲಿ ಅವರ ಶವಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಮನೆಯಿಂದ ದುರ್ವಾಸನೆ ಬರುತ್ತಿದ್ದರಿಂದ ಮೂರ್ನಾಲ್ಕು ದಿನಗಳ ಹಿಂದೆ ಮತಪಟ್ಟಿರಬೇಕು ಎಂದು ಪೊಲೀಸರು ತಿಳಿಸಿದ್ದಾರೆ. ಪ್ರವೀಣ್ ಗಿರಾಸೆ ನೇಣು ಬಿಗಿದುಕೊಂಡು ಸಾವನ್ನಪ್ಪಿದ್ದು, ಪತ್ನಿ ಹಾಗೂ ಇಬ್ಬರು ಮಕ್ಕಳು ವಿಷ ಸೇವಿಸಿ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಕುಟುಂಬ



ಏಕೆ ಈ ತೀವ್ರ ಕ್ರಮ ಕೈಗೊಂಡಿದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಇದು ಸಾಮೂಹಿಕ ಆತಹತ್ಯೆಯೇ ಅಥವಾ ಇನ್ನೇನಾದರೂ ಆಗಿದೆಯೇ ಎಂದು ತಿಳಿಯಲು ಸಮಗ್ರ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮನೆಗೆಲಸಕ್ಕೆ ಬರುತ್ತಿದ್ದ ಮಹಿಳೆಯೂ ಕುಟುಂಬಸ್ಥರು ಸ್ವಗ್ರಾಮಕ್ಕೆ ಹೋಗಿರಬೇಕು ಎಂದು ಭಾವಿಸಿ ಎರಡು ಬಾರಿ ವಾಪಸ್ ಹೋಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ನಾಲ್ಕು ದಿನ ಕಳೆದರೂ ಮನೆಯಿಂದ ಸದ್ದು ಕೇಳಿಸದೇ ಇದ್ದಾಗ ಸುತ್ತಮುತ್ತಲಿನವರಿಗೆ ಕೆಲವರು ಪ್ರವೀಣ್ ಗಿರಸೆ ಅವರ ಸಹೋದರಿ ಸಂಗೀತಾ ಅವರಿಗೆ ಮಾಹಿತಿ ನೀಡಿದ್ದಾರೆ.


## ಹಿಂಸಾಚಾರ ಕೈಬಿಟ್ಟು ಶರಣಾಗುವಂತೆ ನಕ್ಸಲರಿಗೆ ಅಮಿತ್ ಶಾ ಎಚ್ಚರಿಕೆ

**ನವದೆಹಲಿ:** ಹಿಂಸಾಚಾರ ಕೈಬಿಟ್ಟು ಶರಣಾಗಿ. ಇಲ್ಲದಿದ್ದರೆ ಕಠಿಣ ಕಾರ್ಯಾಚರಣೆ ನಡೆಸಿ ಹಿಂಸೆಗೆ ಇತಿಶ್ರೀ ಹಾಡಿ ಶಾಂತಿ ಸ್ಥಾಪಿಸಲಾಗುವುದು ಎಂದು ಕೇಂದ್ರ ಗೃಹಸಚಿವ ಅಮಿತ್ ಶಾ ನಕ್ಸಲರಿಗೆ ಎಚ್ಚರಿಕೆಯ ಸಂದೇಶ ರವಾನಿಸಿದ್ದಾರೆ.

ಛತ್ತೀಸ್‌ಗಢದಲ್ಲಿ ನಕ್ಸಲ್ ಹಿಂಸಾಚಾರಕ್ಕೊಳಗಾದ 55 ಸಂತ್ರಸ್ತ ಕುಟುಂಬಗಳನ್ನು ಭೇಟಿ ಮಾಡಿ ಮಾತನಾಡಿದ ಅವರು, 2026ರೊಳಗೆ ಮಾವೋವಾದಿ ಸಿದ್ಧಾಂತವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗುವುದು ಎಂದು ಹೇಳಿದರು.

ದೇಶದಲ್ಲಿ ನಕ್ಸಲ್ ಹಿಂಸಾಚಾರ ಮತ್ತು ಸಿದ್ಧಾಂತಗಳನ್ನು ಪೂರ್ಣವಾಗಿ ನಾಶ ಮಾಡಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಹಾಗಾಗಿ ಹಿಂಸಾಚಾರವನ್ನು ನಿಲ್ಲಿಸುವಂತೆ ನಾನು ನಕ್ಸಲರಿಗೆ ಮನವಿ ಮಾಡುತ್ತೇನೆ. ಈಶಾನ್ಯ ರಾಜ್ಯಗಳಲ್ಲಿ ಉಗ್ರರು ಶರಣಾದಂತೆ ನಿಮ ಶಸ್ತ್ರಾಸ್ತ್ರಗಳನ್ನೂ ಕೆಳಗಿಟ್ಟು ಬಂದು ಶರಣಾಗಬೇಕು. ಒಂದು ವೇಳೆ ನಮ ಮನವಿಗೆ ಕಿವಿಗೊಡದೇ ಹೋದರೆ, ಸಂಪೂರ್ಣ ನಿರ್ನಾಮದ ಕಾರ್ಯಾಚರಣೆಯನ್ನು ಶೀಘ್ರದಲ್ಲೇ ಆರಂಭಿಸುತ್ತೇವೆ ಎಂದು ಎಚ್ಚರಿಸಿದರು.

**ಪೂರ್ಣವಾಗಿ ನಾಶ ಮಾಡಲು ಕೇಂದ್ರ ಸರ್ಕಾರ ನಿರ್ಧಾರ**



ಈ ಹಿಂದೆ ದೇಶದ ಹಲವೆಡೆ ನಕ್ಸಲಿಸಂ ಹರಡಿತ್ತು. ಇದೀಗ ಕೇಂದ್ರ ಸರ್ಕಾರ ಇದರ ಪ್ರಭಾವವನ್ನು ಯಶಸ್ವಿಯಾಗಿ ಹತ್ತಿಕ್ಕುತ್ತಿದೆ. ಸದ್ಯ ಕೆಲವೇ ಪ್ರದೇಶಗಳು ಇದರಿಂದ ಬಾಧಿತವಾಗಿವೆ. ಮವೋಗಳ ವಿರುದ್ಧದ ಕಾರ್ಯಾಚರಣೆಯಲ್ಲಿ ರಕ್ಷಣಾ ಸಿಬ್ಬಂದಿ ಗಣನೀಯ ಸಾಧನೆ ಮಾಡಿದ್ದಾರೆ.

ಛತ್ತೀಸ್‌ಗಢದಲ್ಲಿ ನಕ್ಸಲ್ ಹಿಂಸಾಚಾರದ ಪರಿಣಾಮಕ್ಕೆ ಒಳಗಾಗಿರುವ ಜನರ ಕಲ್ಯಾಣಕ್ಕಾಗಿ ಶೀಘ್ರದಲ್ಲಿ ಕೇಂದ್ರ ಗೃಹ ಸಚಿವಾಲಯ ಯೋಜನೆ ರೂಪಿಸಲಿದೆ. ಇದು ರಾಜ್ಯ ಸರ್ಕಾರದೊಂದಿಗೆ ಕಾರ್ಯ ನಿರ್ವಹಿಸುತ್ತದೆ. ಸಂತ್ರಸ್ತರಿಗೆ ಉದ್ಯೋಗ, ಆರೋಗ್ಯ ಸೇವೆ ಮತ್ತು ಇತರೆ ಅಂಶಗಳೂ ಸೇರಿದಂತೆ ಎಲ್ಲಾ ರೀತಿಯ ಕಲ್ಯಾಣ ಮಾದರಿಗಳನ್ನು ನಡೆಸುವ ಮೂಲಕ ಸಹಾಯ ಮಾಡಲಾಗುವುದು ಎಂದು ಅಮಿತ್ ಶಾ ಭರವಸೆ ನೀಡಿದ್ದಾರೆ.

> **ಛತ್ತೀಸ್‌ಗಢದ ನಾಲ್ಕು ಜಿಲ್ಲೆಗಳಲ್ಲಿ ಮಾತ್ರ ಈ ಸಮಸ್ಯೆಗಳಿವೆ. ಒಮ್ಮೆ ನೇಪಾಳದ ಪುಷ್ಪಪತಿನಾಥ್ನಿಂದ ಆಂಧ್ರಪ್ರದೇಶದ ತಿರುಪತಿವರೆಗೂ ಮಾವೋವಾದಿಗಳು ಕಾರಿಡಾರ್ ಸ್ಥಾಪಿಸಲು ಯೋಜನೆ ರೂಪಿಸಿದ್ದರು. ಆದರೆ, ಮೋದಿ ಸರ್ಕಾರ ಅದನ್ನು ನಾಶ ಮಾಡಿತು** -ಅಮಿತ್ ಶಾ

## ರಾಜಸ್ಥಾನ ವೈದ್ಯರ ಆಪರೇಷನ್ ಎಡವಟ್ಟು
### 33 ವರ್ಷದ ಮಹಿಳಾ ಸರ್ಕಾರಿ ಅಧಿಕಾರಿ ಜೀವ ಬಿಟ್ಟಿದ್ದೇಕೆ

**ಜೋಧ್‌ಪುರ:** ಅವರಿಗೆ ಕೇವಲ 33 ವರ್ಷ ವಯಸ್ಸು. ಹೆಸರು ಪ್ರಿಯಾಂಕಾ ಬಿಷ್ಣೋಯಿ.. ರಾಜಸ್ಥಾನ ರಾಜ್ಯದ ಜೋಧ್‌ಪುರ ಜಿಲ್ಲೆಯಲ್ಲಿ ಉಪ ವಿಭಾಗೀಯ ದಂಡಾಧಿಕಾರಿಯಾಗಿದ್ದ ಅವರು 2016ರ ಬ್ಯಾಚ್‌ನ ಸರ್ಕಾರಿ ಅಧಿಕಾರಿ. ಆರೋಗ್ಯವಂತವಾಗಿಯೇ ಇದ್ದ ಅವರು ಕಳೆದ ಬುಧವಾರ ಕೊನೆಯುಸಿರೆಳೆದಿದ್ದಾರೆ. ಇದಕ್ಕೆ ಕಾರಣ, ಮಯೋಮಾ ಶಸ್ತ್ರ ಚಿಕಿತ್ಸೆ.

**ಪ್ರಿಯಾಂಕಾ ಅವರ ಶಸ್ತ್ರ ಚಿಕಿತ್ಸೆಯಲ್ಲಿ ಎಡವಟ್ಟಾಗಿದ್ದು ಎಲ್ಲಿ?:** ಪ್ರಿಯಾಂಕಾ ಬಿಷ್ಣೋಯಿ ಅವರ ಗರ್ಭಕೋಶದಲ್ಲಿ ಮಯೋಮಾ ರೂಪುಗೊಂಡಿದ್ದ ಹಿನ್ನೆಲೆಯಲ್ಲಿ ಅವರನ್ನು ರಾಜಸ್ಥಾನ ರಾಜ್ಯದ ಜೋಧಪುರ ಜಿಲ್ಲೆಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿತ್ತು. ಸೆಪ್ಟೆಂಬರ್ 5 ರಂದು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇವರ ಆರೋಗ್ಯ ತಪಾಸಣೆ ಬಳಿಕ ಶಸ್ತ್ರ ಚಿಕಿತ್ಸೆ ನಡೆಸಬೇಕು ಎಂದು ವೈದ್ಯರು ಸೂಚಿಸಿದ್ದರು. ಆಪರೇಷನ್ ಕೂಡಾ ನಡೆದು ಹೋಯ್ತು.

ಆದರೆ, ಆಪರೇಷನ್ ಬಳಿಕ ಪ್ರಿಯಾಂಕಾ ಅವರು ಚೇತರಿಕೆ ಕಾಣಲೇ ಇಲ್ಲ. ಶಸ್ತ್ರ ಚಿಕಿತ್ಸೆ ವೇಳೆ ಅವರಿಗೆ ಅತಿಯಾದ ಪ್ರಮಾಣದಲ್ಲಿ ಅನಸ್ತೇಶಿಯಾ (ಅರವಳಿಕೆ) ನೀಡಲಾಗಿತ್ತು ಎಂದು ಪ್ರಿಯಾಂಕಾ ಅವರ ಕುಟುಂಬಸ್ಥರು ಆರೋಪಿಸಿದ್ದಾರೆ. ಕೋಮಾಗೆ ಜಾರಿದ್ದ ಪ್ರಿಯಾಂಕಾ ಅವರನ್ನು ಗುಜರಾತ್ ರಾಜ್ಯದ ಅಹಮದಾಬಾದ್‌ಗೆ ಕರೆದೊಯ್ದು ಹೆಚ್ಚಿನ ಚಿಕಿತ್ಸೆಗೆ ನೀಡಲಾಯ್ತು. ಆದರೆ,



ಚಿಕಿತ್ಸೆ ಫಲಕಾರಿಯಾಗದೆ ಆಪರೇಷನ್ ನಡೆದ ಎರಡು ವಾರಗಳ ಬಳಿಕ ಅಂದರೆ, ಕಳೆದ ಬುಧವಾರ ಪ್ರಿಯಾಂಕಾ ಅವರು ಜೀವ ಬಿಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜಸ್ಥಾನದ ಬಿಷ್ಣೋಯಿ ಸಮುದಾಯ ಆಕ್ರೋಶಗೊಂಡಿದ್ದು, ಈ ಪ್ರಕರಣದ ಕುರಿತಾಗಿ ಸಮಗ್ರ ತನಿಖೆಗೆ ಆಗ್ರಹ ಮಾಡಿದೆ.

**ಪ್ರಿಯಾಂಕಾ ಅವರ ಸಾವಿಗೆ ಅನಸ್ತೇಷಿಯಾ ಕಾರಣ ಅಲ್ಲ?:** ಪ್ರಿಯಾಂಕಾ ಬಿಷ್ಣೋಯಿ ಅವರಿಗೆ ಆಪರೇಷನ್ ನಡೆಸಿದ ಜೋಧಪುರದ ವಸುಂಧರಾ ಆಸ್ಪತ್ರೆಯ ತಜ್ಞರ ಪ್ರಕಾರ ಆಕೆಯ ಸಾವಿಗೆ ಅರವಳಿಕೆ ಮದ್ದು ಕಾರಣ ಅಲ್ಲವಂತೆ. ಆಪರೇಷನ್ ಬಳಿಕ ಅತಿಯಾದ ಮಾನಸಿಕ ಒತ್ತಡದಲ್ಲಿದ್ದ ಪ್ರಿಯಾಂಕಾ ಅವರು, ನಿಧಾನವಾಗಿ ಅಸ್ವಸ್ಥತೆಗೆ ಜಾರಿದ್ದರು. ಅವರನ್ನು ಸಿಟಿವಿ ಸ್ಕ್ಯಾನ್‌ಗೆ ಒಳಪಡಿಸಿದಾಗ ಅವರ ಮೆದುಳಿನಲ್ಲಿ ಹಲವೆಡೆ ರಕ್ತಸ್ರಾವ ಉಂಟಾಗಿರೋದು ಬೆಳಕಿಗೆ ಬಂದಿತ್ತು ಎಂದು ವೈದ್ಯರು ಹೇಳಿದ್ದಾರೆ.

### ಏನಿದು ಮಯೋಮಾ ಶಸ್ತ್ರ ಚಿಕಿತ್ಸೆ?

**ಅಧಿಕ ರಕ್ತದೊತ್ತಡ ಅಥವಾ ಬೊಜ್ಜುತನದ ಕಾರಣದಿಂದಾಗಿ ಮಹಿಳೆಯರ ಗರ್ಭಾಶಯದಲ್ಲಿ ನಾರು ರೀತಿಯ ರಚನೆ ಕಾಣಿಸಿಕೊಳ್ಳುತ್ತದೆ. ಇದಕ್ಕೆ 'ಫೈಬ್ರಾಯ್ಡ್' ಎನ್ನಲಾಗುತ್ತದೆ. ವೈದ್ಯಕೀಯ ಭಾಷೆಯಲ್ಲಿ 'ಮಯೋಮಾ' ಎನ್ನಲಾಗುವ ಈ ಬೆಳವಣಿಗೆಯು 'ಗರ್ಭಕೋಶದ ಗಡ್ಡೆ' ರೂಪುಗೊಳ್ಳುವ ಆರಂಭಿಕ ಹಂತ ಎನ್ನಬಹುದು. ಸಾಮಾನ್ಯವಾಗಿ ಶೇ. 50ಕ್ಕೂ ಹೆಚ್ಚು ಮಹಿಳೆಯರ ಗರ್ಭಕೋಶದಲ್ಲಿ ಮಯೋಮಾ ಕಾಣಿಸಿಕೊಳ್ಳುತ್ತದೆಯಾದರೂ, ಕೆಲವರಲ್ಲಿ ಮಾತ್ರ ಇದು ದೊಡ್ಡ ಗಾತ್ರದ ಗಡ್ಡೆ ರೂಪಕ್ಕೆ ತಿರುಗಿ ಮಾರಣಾಂತಿಕ ಆಗಬಹುದು.**

## ಮಣಿಪುರದಲ್ಲಿ ಮೂವರು ಉಗ್ರರ ಬಂಧನ

**ಇಂಫಾಲ್:** ಮಣಿಪುರದಲ್ಲಿ ಭದ್ರತಾ ಪಡೆಗಳು ನಿಷೇಧಿತ ಉಗ್ರಗಾಮಿ ಸಂಘಟನೆಯ ಮೂವರು ಉಗ್ರರನ್ನು ಬಂಧಿಸಿದ್ದು, ಇಂಫಾಲ್ ಪಶ್ಚಿಮ ಮತ್ತು ಇಂಫಾಲ್ ಪೂರ್ವ ಜಿಲ್ಲೆಗಳಲ್ಲಿ ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ ಹಲವಾರು ಐಇಡಿಗಳು, ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಾನೂನುಬಾಹಿರವಾದ ಕಂಗ್ಲೇ ಯಾವೋಲ್ ಕನ್ನಾ ಲುಪ್ (ಕೆವೈಕೆಎಲ್) ಸಂಘಟನೆಗೆ ಸೇರಿದ ಮೂವರು ಕಾರ್ಯಕರ್ತರನ್ನು ಇಂಫಾಲ್ ಪಶ್ಚಿಮದ ಘರಿ ಪ್ರದೇಶದಲ್ಲಿ ಸೆಕಾಯಿ ಮತ್ತು ತಂಗೇಬಾಂಡ್ ಪ್ರದೇಶಗಳಲ್ಲಿ ಸುಲಿಗೆಯಲ್ಲಿ ತೊಡಗಿಸಿಕೊಂಡಿದ್ದಕ್ಕಾಗಿ ಬಂಧಿಸಲಾಗಿದೆ.

ಬಂಧಿತರನ್ನು ಮೈಬಮ್ ಬ್ರಾನ್ಸನ್ ಸಿಂಗ್ (24), ಯುಮ್ನಮ್ ಲಾಂಚೆನ್ಬಾ (21) ಮತ್ತು ಸೌಬಮ್ ನೊಂಗ್ಪೊಕ್‌ಂಗನ್ಬಾ ಮೈತೆ (52) ಎಂದು ಗುರುತಿಸಲಾಗಿದ್ದು, ಅವರ ವಶದಿಂದ 9 ಎಂಎಂ ಪಿಸ್ತೂಲ್ ಮತ್ತು ಮ್ಯಾಗಜೀನ್ ಮತ್ತು ಜೀವಂತ



ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇಂಫಾಲ್ ಪೂರ್ವದ ಬೊಂಗ್ಜಾಂಗ್ನಲ್ಲಿ ನಡೆಸಿದ ಪ್ರತ್ಯೇಕ ಕಾರ್ಯಾಚರಣೆಯಲ್ಲಿ ಸೇನೆ ಮತ್ತು ಮಣಿಪುರ ಪೊಲೀಸರು 28.5 ಕೆಜಿ ತೂಕದ ಏಳು ಸುಧಾರಿತ ಸ್ಫೋಟಕ ಸಾಧನಗಳನ್ನು (ಐಇಡಿ) ವಶಪಡಿಸಿಕೊಂಡಿದ್ದಾರೆ ಎಂದು ಅಧಿಕತ ಹೇಳಿಕೆ ತಿಳಿಸಿದೆ.ಕಳೆದ ಮೂರು ತಿಂಗಳಲ್ಲಿ ಭದ್ರತಾ ಪಡೆಗಳಿಗೆ ಐಇಡಿಗಳ ಮರುಪಡೆಯುವಿಕೆ ಎರಡನೇ ಪ್ರಮುಖ ಹಂತವಾಗಿದೆ ಎಂದು ಅದು ಹೇಳಿದೆ. ಜುಲೈ 20 ರಂದು, ಇಂಫಾಲ್ ಪೂರ್ವದ ಸೈಚಾಂಗ್ ಇಥಮ್ನ ಗುಡ್ಡಗಾಡು ಪ್ರದೇಶಗಳಲ್ಲಿ ಭಾರತೀಯ ಸೇನೆಯ ಬಾಂಬ್ ನಿಷ್ಕ್ರಿಯ ತಂಡವು 33 ಕೆಜಿ ತೂಕದ ಎಂಟು ಐಇಡಿಗಳನ್ನು ವಶಪಡಿಸಿಕೊಂಡರು ಮತ್ತು ತಟಸ್ಥಗೊಳಿಸಿದರು.

# ಬಾಹ್ಯಾಕಾಶದಲ್ಲಿಯೇ 59ನೇ ಜನ್ಮದಿನ ಆಚರಿಸಿದ ಸುನೀತಾ ವಿಲಿಯಮ್ಸ್

● ಹ್ಯೂಸ್ಟನ್‌ನಲ್ಲಿರುವ ಮಿಷನ್ ಕಂಟ್ರೋಲ್ ಅಧಿಕಾರಿಗಳ ಜತೆ ಸಭೆ ನಡೆಸಿದ ಗಗನಯಾನಿಗಳು

**ವಾಷಿಂಗ್ಟನ್:** ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದ ಎಂಟು ದಿನಗಳ ಭೇಟಿಗಾಗಿ ತೆರಳಿ, ಈಗ ಫೆಬ್ರವರಿವರೆಗೂ ಅಲ್ಲಿ ಕಾಲ ಕಳೆಯಬೇಕಾದ ಸವಾಲಿನ ಸನ್ನಿವೇಶಕ್ಕೆ ಸಿಲುಕಿರುವ ನಾಸಾ ಗಗನಯಾನಿ ಸುನೀತಾ ವಿಲಿಯಮ್ಸ್ ಅವರು ಬಾಹ್ಯಾಕಾಶದಲ್ಲಿಯೇ ತಮ್ಮ 59ನೇ ಜನ್ಮದಿನವನ್ನು ವಿಭಿನ್ನವಾಗಿ ಆಚರಿಸಿಕೊಂಡಿದ್ದಾರೆ. ಅವರು ಬಾಹ್ಯಾಕಾಶ ನಿಲ್ದಾಣದ ಮಹತ್ವದ ನಿರ್ವಹಣಾ ಕಾರ್ಯಗಳಲ್ಲಿ ಮತ್ತು ವೈಜ್ಞಾನಿಕ ಅಧ್ಯಯನದಲ್ಲಿ ತೊಡಗಿಸಿಕೊಳ್ಳುವ ಮೂಲಕ ಹುಟ್ಟುಹಬ್ಬ ಆಚರಿಸಿದರು.


ನಾಸಾದ ಹಿರಿಯ ಗಗನಯಾನಿಯಾಗಿರುವ ಭಾರತೀಯ ಸಂಜಾತೆ ಸುನೀತಾ, ಆರ್ಬಿಟಿಂಗ್ ಲ್ಯಾಬೋರೇಟರಿಯ ಸುಗಮ ಕಾರ್ಯಾಚರಣೆಗೆ ಅನುಕೂಲವಾಗುವಂತೆ ಕೆಲಸದಲ್ಲಿ ತೊಡಗಿಸಿಕೊಳ್ಳುವ ಮೂಲಕ ತಮ್ಮ ವಿಶೇಷ ದಿನವನ್ನು ಕಳೆದರು.

ಸುನಿತಾ ವಿಲಿಯಮ್ಸ್ ಇಷ್ಟು ದಿನ ಬಾರದಿರಲು ಏನು ಕಾರಣ? ಬಾಹ್ಯಾಕಾಶ ವಿಶ್ಲೇಷಕರಾದ ಗಿರೀಶ್ ಲಿಂಗಣ್ಣ ಅವರಿಂದ ವಿಶೇಷ ಮಾಹಿತಿ

ತಮ್ಮ ಮೂರನೇ ಬಾಹ್ಯಾಕಾಶ ಯಾನದಲ್ಲಿರುವ ಅವರು, ನಾಸಾದ ಸಹ ಗಗನಯಾನಿ ಡಾನ್ ಪೆಟ್ಟಿಟ್ ಅವರ ಜತೆ ಬಾಹ್ಯಾಕಾಶ ನಿಲ್ದಾಣದ ಜೀವ ರಕ್ಷಣ ವ್ಯವಸ್ಥೆಯ ನಿರ್ವಹಣೆಯ ಕಾರ್ಯ ನಿರ್ವಹಿಸಿದರು. ಅವರಿಬ್ಬರೂ ಟ್ರ್ಯಾಂಕ್ವಾಲಿಟಿ ಮಾಡ್ಯೂಲ್‌ನಲ್ಲಿನ, ಬಾಹ್ಯಾಕಾಶ ಶೌಚಾಲಯ ಎಂದೇ ಕರೆಯಲಾಗುವ ತ್ಯಾಜ್ಯ ಹಾಗೂ ನೈರ್ಮಲ್ಯ ವಿಭಾಗದ ಫಿಲ್ಟರ್‌ಗಳನ್ನು ಬದಲಿಸಿದರು. ಇದು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಇರುವ ಸಿಬ್ಬಂದಿಗೆ ಸ್ವಚ್ಛ ಮತ್ತು ಆರೋಗ್ಯಕರ ಜೀವನ ಪರಿಸರ ನಿರ್ವಹಿಸಲು ನೆರವಾಗುವ ಅವಶ್ಯಕ ಕಾರ್ಯವಾಗಿದೆ.

**ನಿರ್ದೇಶಕರ ಜೊತೆ ಸಭೆ**

ನಿರ್ವಹಣಾ ಕಾರ್ಯದ ಜತೆಗೆ ಸುನೀತಾ ಅವರು ಗಗನಯಾನಿಗಳಾದ ಬ್ಯಾರಿ ವಿಲ್ಮೋರ್ ಮತ್ತು ಫ್ರಾಂಕ್ ರುಬಿಯೋ ಅವರೊಂದಿಗೆ ಹ್ಯೂಸ್ಟನ್‌ನಲ್ಲಿರುವ ಮಿಷನ್ ಕಂಟ್ರೋಲ್ ಕೇಂದ್ರದ ಯೋಜನಾ ನಿರ್ದೇಶಕರ ಜತೆ ಸಭೆಯಲ್ಲಿ ಭಾಗವಹಿಸಿದರು.



### ವೈಜ್ಞಾನಿಕ ಅಧ್ಯಯನದ ಮೂಲಕ ಹುಟ್ಟುಹಬ್ಬ

ಎಲ್ಲವೂ ಸರಿಯಾಗಿದ್ದರೆ ಸುನೀತಾ ಅವರು ಅಮೆರಿಕದಲ್ಲಿರುವ ತಮ್ಮ ಕುಟುಂಬದ ಜತೆ ಜನ್ಮದಿನವನ್ನು ಆಚರಿಸಬೇಕಿತ್ತು. ಆದರೆ ಅವರು ಭೂಮಿಯಿಂದ ಸಾವಿರಾರು ಕಿಮೀ ದೂರದ ಬಾಹ್ಯಾಕಾಶ ನಿಲ್ದಾಣದಲ್ಲಿ ತಮ್ಮ ಹೊಣೆಗಾರಿಕೆಗಳನ್ನು ನಿಭಾಯಿಸುವ ಮೂಲಕ ದಿನ ಕಳೆದರು.

ಕೊಲಂಬಸ್ ಲ್ಯಾಬೊರೇಟರಿ ಮಾಡ್ಯೂಲ್ ಒಳಗೆ ಕಾರ್ಗೋ ಸಂಘಟಿಸಲು ಸುನೀತಾ ನೆರವಾದರು.

- ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಜನ್ಮದಿನ ಆಚರಿಸಿಕೊಂಡ ಸುನೀತಾ ವಿಲಿಯಮ್ಸ್
- ಮಹತ್ವದ ನಿರ್ವಹಣಾ ಕಾರ್ಯಗಳು ಮತ್ತು ವೈಜ್ಞಾನಿಕ ಅಧ್ಯಯನದ ಮೂಲಕ ಹುಟ್ಟುಹಬ್ಬ
- ಹ್ಯೂಸ್ಟನ್‌ನಲ್ಲಿರುವ ಮಿಷನ್ ಕಂಟ್ರೋಲ್ ಅಧಿಕಾರಿಗಳ ಜತೆ ಸಭೆ ನಡೆಸಿದ ಗಗನಯಾನಿಗಳು

ಇದು ನಿಲ್ದಾಣದಲ್ಲಿ ಸ್ಥಳ ಹಾಗೂ ಸಂಪನ್ಮೂಲದ ಗರಿಷ್ಠ ಪರಿಣಾಮಕಾರಿ ಬಳಕೆಗೆ ನಿರ್ಣಾಯಕ ಕೆಲಸವಾಗಿದೆ.

ಅವರ ಇತರೆ ಸಹೋದ್ಯೋಗಿ ಸಿಬ್ಬಂದಿ, ಮುಂಬರುವ ಸ್ಪೇಸ್ ಎಕ್ಸ್ ಡ್ರ್ಯಾಗನ್ ಎಂಡೆವರ್ ಬಾಹ್ಯಾಕಾಶ ನೌಕೆಯ ನಿರ್ಗಮನ ಮತ್ತು ಅತ್ಯಾಧುನಿಕ ತಂತ್ರಜ್ಞಾನ ಪ್ರದರ್ಶನಗಳ ತರಬೇತಿ ಸೇರಿದಂತೆ ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರು. ಎಲಾನ್ ಮಸ್ಕ್ ಒಡೆತನದ ಸ್ಪೇಸ್ ಎಕ್ಸ್ ಸಂಸ್ಥೆಯ ನೌಕೆಯು ಐಎಸ್‌ಎಸ್‌ಗೆ ತೆರಳುತ್ತಿದ್ದು, 2025ರ ಫೆಬ್ರವರಿಯಲ್ಲಿ ಸುನೀತಾ ಅವರನ್ನು ಮರಳಿ ಭೂಮಿಗೆ ಕರೆತರಲಿದೆ.

### ಐಎಸ್‌ಎಸ್‌ನಲ್ಲಿ ಸಿಲುಕಿರುವ ಸುನೀತಾ

**ಸುನೀತಾ ವಿಲಿಯಮ್ಸ್ ಅವರು 2024ರ ಜೂನ್‌ನಲ್ಲಿ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದ್ದರು. ಆದರೆ ಅವರು ಪ್ರಯಾಣಿಸಿದ್ದ ಬೋಯಿಂಗ್ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ತಾಂತ್ರಿಕ ಸಮಸ್ಯೆ ಕಂಡುಬಂದಿದ್ದರಿಂದ ಅವರು ಅಲ್ಲಿಯೇ ಉಳಿದುಕೊಳ್ಳುವಂತಾಗಿದೆ. ಇಬ್ಬರು ಗಗನಯಾನಿಗಳನ್ನು ಕರೆದೊಯ್ದಿದ್ದ ಸ್ಟಾರ್ ಲೈನರ್ ನೌಕೆಯು ಇತ್ತೀಚೆಗೆ ಖಾಲಿಯಾಗಿ ಭೂಮಿಗೆ ಮರಳಿತ್ತು. ಅಪಾಯಕ್ಕೆ ಅಸ್ಪದ ಕೊಡಬಾರದು ಎಂಬ ಮುಂಜಾಗ್ರತೆಯಿಂದ ಸ್ಟಾರ್‌ಲೈನರ್‌ನಲ್ಲಿ ಸುನೀತಾ ಹಾಗೂ ಇನ್ನೊಬ್ಬ ಗಗನಯಾನಿ ವಾಪಸಾಗಿರಲಿಲ್ಲ.**

## ಮಿನಿ ನ್ಯೂಸ್

### ಸೈಬರ್ ಕ್ರೈಮ್ ಒಂದು ದೊಡ್ಡ ಬೆದರಿಕೆಯಾಗಿದೆ: ನಿತ್ಯಾನಂದ ರೈ

**ಹೈದರಾಬಾದ್:** ಸೈಬರ್ ಕ್ರೈಮ್ ಒಂದು ದೊಡ್ಡ ಬೆದರಿಕೆಯಾಗಿ ಹೊರಹೊಮಿದೆ ಎಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಅವರು ಹೇಳಿದ್ದಾರೆ. ಐಪಿಎಸ್ ಅಧಿಕಾರಿ ಪ್ರಶಿಕ್ಷಣಾರ್ಥಿಗಳಿಗೆ ತಾಂತ್ರಿಕ ಪರಿಣತಿಯೊಂದಿಗೆ ಸವಾಲನ್ನು ಎದುರಿಸಲು ಸೂಕ್ತ ತರಬೇತಿ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಸೈಬರ್ ಫೋರೆನ್ಸಿಕ್ ಲ್ಯಾಬ್ ಮತ್ತು ಇತರ ಉಪಕ್ರಮಗಳನ್ನು ಕೇಂದ್ರ ಗಹ ಸಚಿವಾಲಯ ಕೈಗೊಂಡಿದೆ ಎಂದು ಅವರು ಇದೇ ಸಂದರ್ಭದಲ್ಲಿ ಹೇಳಿದರು. ಹೈದರಾಬಾದ್ ಹೊರವಲಯದಲ್ಲಿರುವ ಸರ್ದಾರ್ ವಲ್ಲಭಭಾಯಿ ಪಟೇಲ್ ರಾಷ್ಟ್ರೀಯ ಪೊಲೀಸ್ ಅಕಾಡೆಮಿಯಲ್ಲಿ (ಎಸ್ವಿಪಿಎನ್ಪಿಎ) ಐಪಿಎಸ್ ನಿಯಮಿತ ನೇಮಕಾತಿ 76ನೇ ಬ್ಯಾಚ್ನ ದೀಕ್ಷಾಂತ್ ಪರೇಡ್‌ನಲ್ಲಿ ಅವರು ಮಾತನಾಡಿದರು.



188 ಐಪಿಎಸ್ ಅಧಿಕಾರಿಗಳು ಮತ್ತು ನೇಪಾಳ, ಭೂತಾನ್ ಮತ್ತು ಇತರ ದೇಶಗಳ 19 ವಿದೇಶಿ ಅಧಿಕಾರಿಗಳು ಸೇರಿದಂತೆ 207 ಅಧಿಕಾರಿ ತರಬೇತಿದಾರರಿಗೆ ಮೂಲಭೂತ ಕೋರ್ಸ್ ತರಬೇತಿಯ ಪರೇಡ್ ಅನ್ನು ಪರೇಡ್ ಗುರುತಿಸಿತು, ಅವರಲ್ಲಿ ಗಮನಾರ್ಹ 58 ಮಹಿಳಾ ಅಧಿಕಾರಿಗಳು ಇದ್ದರು.

### ಪಾಕ್ ಸೇನೆ ಮೇಲೆ ಮತ್ತೊಂದು ಭೀಕರ ದಾಳಿ: 6 ಸೈನಿಕರು ಸಾವು

**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ಪಾಕ್ ಸೇನೆಯೇ ಸುರಕ್ಷಿತವಾಗಿಲ್ಲ. ಪ್ರತಿದಿನ ಅವರ ಮೇಲೆ ದಾಳಿಗಳು ನಡೆಯುತ್ತಿವೆ. ದಕ್ಷಿಣ ವಜೀರಿಸ್ತಾನದಲ್ಲಿ ಪಾಕಿಸ್ತಾನಿ ಸೇನೆಯ ಮೇಲೆ ಮತ್ತೊಮ್ಮೆ ಭೀಕರ ದಾಳಿ ನಡೆದಿದೆ. ಈ ದಾಳಿಯಲ್ಲಿ ಆರು ಯೋಧರು ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ. ಪಾಕಿಸ್ತಾನ ಸೇನೆ ಮೇಲೆ ಉಗ್ರರ ದಾಳಿ ನಿಂತಿಲ್ಲ. ಜೂನ್ ತಿಂಗಳಿನಿಂದ ಪ್ರತಿ ತಿಂಗಳು ಪಾಕಿಸ್ತಾನದ ಭದ್ರತಾ ಪಡೆಗಳ ಮೇಲೆ ಭಯೋತ್ಪಾದಕರು ದಾಳಿ ನಡೆಸುತ್ತಿದ್ದಾರೆ. ಪ್ರತಿ ದಾಳಿಯಲ್ಲಿ ಅನೇಕ ಸೈನಿಕರು ಪ್ರಾಣ ಕಳೆದುಕೊಳ್ಳುತ್ತಿದ್ದು ಹಲವರು ಗಾಯಗೊಂಡಿದ್ದಾರೆ.

ಇದಕ್ಕೂ ಮುನ್ನ ಆಗಸ್ಟ್ 22ರಂದು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ ಭಯೋತ್ಪಾದಕರು ಪೊಲೀಸರ ಮೇಲೆ ರಾಕೆಟ್ ದಾಳಿ ನಡೆಸಿದ್ದರು. ಇದರಲ್ಲಿ ಕನಿಷ್ಠ 11 ಸೈನಿಕರು ಸಾವನ್ನಪ್ಪಿದರು. ಲಾಹೋರ್‌ನಿಂದ ಸುಮಾರು 400 ಕಿಲೋಮೀಟರ್ ದೂರದಲ್ಲಿರುವ ರಹೀಮ್ ಯಾರ್ ಖಾನ್ ಜಿಲ್ಲೆಯಲ್ಲಿ ಹಲವಾರು ಯೋಧರನ್ನು ಒತ್ತೆಯಾಳಾಗಿ ಇರಿಸಲಾಗಿತ್ತು. ಉಗ್ರರು ರಾಕೆಟ್‌ಗಳ ಮೂಲಕ ದಾಳಿ ನಡೆಸಿದ್ದಾರೆ ಎಂದು ಪಂಜಾಬ್ ಪೊಲೀಸ್ ವಕ್ತಾರರು ತಿಳಿಸಿದ್ದಾರೆ.

### ಇಸ್ರೇಲ್ ವಿರುದ್ಧ ಪ್ರತೀಕಾರ ಶತಸಿದ್ಧ

**ಲೆಬನಾನ್:** ಲೆಬನಾನ್ ನಲ್ಲಿ ಪೇಜರ್, ವಾಕಿ-ಟಾಕಿಗಳ ಸ್ಫೋಟದಿಂದಾಗಿ ಹೆಜ್ಬೊಲ್ಲ ಸಂಘಟನೆಯ 37 ಮಂದಿ ಸಾವನ್ನಪ್ಪಿದ್ದು, 3,000 ಕ್ಕೂ ಹೆಚ್ಚಿನ ಮಂದಿ ಗಾಯಗೊಂಡಿದ್ದಾರೆ. ಈ ಕೃತ್ಯದ ಹಿಂದೆ ಇಸ್ರೇಲ್ ಕೈವಾಡವಿರುವ ಶಂಕೆ ವ್ಯಕ್ತವಾಗಿದ್ದು, ಹೆಜ್ಬೊಲ್ಲಾ ಸಂಘಟನೆಯ ಮುಖ್ಯಸ್ಥ ನಸ್ರಲ್ಲಾಹ್ ಇಸ್ರೇಲ್‌ಗೆ ಎಚ್ಚರಿಕೆ ರವಾನಿಸಿದ್ದಾರೆ.

ಸ್ಫೋಟಗಳಿಗೆ ಕಠಿಣ ಪ್ರತೀಕಾರ ಮತ್ತು ನ್ಯಾಯಯುತ ಶಿಕ್ಷೆ ಎದುರಿಸಬೇಕಾಗುತ್ತದೆ ಎಂದು ನಸ್ರಲ್ಲಾಹ್ ತಮ್ಮ ಭಾಷಣದಲ್ಲಿ ಹೇಳಿದ್ದಾರೆ. ದಾಳಿಯನ್ನು ಸಂಭವನೀಯ ಯುದ್ಧದ ಕ್ರಿಯೆ ಎಂದು ಹೇಳಿರುವ ನಸ್ರಲ್ಲಾಹ್, ಇಸ್ರೇಲ್ ಕಠಿಣ ಪ್ರತೀಕಾರ ಮತ್ತು ನ್ಯಾಯಯುತ ಶಿಕ್ಷೆಯನ್ನು ಎದುರಿಸಬೇಕಾಗುತ್ತದೆ ಎಂದು ಹೇಳಿದ್ದರೆ.

ದಾಳಿಗಳು ಹತ್ಯಾಕಾಂಡ ಆಗಿದ್ದು, ಯುದ್ಧಾಪರಾಧ ಅಥವಾ ಯುದ್ಧದ ಘೋಷಣೆಯಾಗಿರಬಹುದು ಎಂದು ಹೇಳಿರುವ, ನಸ್ರಲ್ಲಾಹ್ ಎರಡು ನಿಮಿಷಗಳಲ್ಲಿ 5,000 ಕ್ಕಿಂತ ಕಡಿಮೆ ಜನರನ್ನು ಕೊಲ್ಲಲು ಇಸ್ರೇಲ್ ಬಯಸಿದೆ ಎಂದು ಆರೋಪಿಸಿದರು.

### ಮಹಾರಾಷ್ಟ್ರದ ಜಲ್ನಾದಲ್ಲಿ ಭೀಕರ ಅಪಘಾತ: ಆರು ಮಂದಿ ಸಾವು

**ಜಲ್ನಾ:** ಮಹಾರಾಷ್ಟ್ರದ ಜಲ್ನಾ ಜಿಲ್ಲೆಯಲ್ಲಿ ಶುಕ್ರವಾರ ಬೆಳಗ್ಗೆ ರಾಜ್ಯ ಸಾರಿಗೆ ಬಸ್ ಮತ್ತು ಖಾಸಗಿ ಟ್ರಕ್ ಮಧ್ಯೆ ಡಿಕ್ಕಿ ಹೊಡೆದು ಆರು ಜನರು ಮೃತಪಟ್ಟಿದ್ದು, 17 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ವಾಡಿಗೋದ್ರಿ-ಜಲನಾ ಮಾರ್ಗದ ಶಹಾಪುರ ಬಳಿ ಅಪಘಾತ ಸಂಭವಿಸಿದೆ. ಮಹಾರಾಷ್ಟ್ರ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್‌ನ ಗಾಜುಗಳನ್ನು ಒಡೆದು ಗಾಯಾಳುಗಳನ್ನು ಹೊರತೆಗೆಯಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಾಜ್ಯ ಸಾರಿಗೆ ಬಸ್ ಗೆವ್ರಾಯ್‌ನಿಂದ ಜಲ್ನಾಗೆ ತೆರಳುತ್ತಿದ್ದಾಗ, ಕಿತ್ತಳೆ ಹಣ್ಣುಗಳನ್ನು ಹೊತ್ತ ಟ್ರಕ್ ಅಂಬಾಡ್‌ನಿಂದ ಬರುತ್ತಿತ್ತು. ಸ್ಥಳೀಯರ ಸಹಾಯದಿಂದ ಪೊಲೀಸರು ಗಾಯಾಳುಗಳನ್ನು ರಕ್ಷಿಸಿ ಅಂಬಾದ್ ಮತ್ತು ಜಲ್ನಾ ಆಸ್ಪತ್ರೆಗಳಿಗೆ ದಾಖಲಿಸಿದ್ದಾರೆ. ಅಪಘಾತಕ್ಕೆ ಕಾರಣ ಇತ್ಯಾದಿಗಳ ಬಗ್ಗೆ ತನಿಖೆ ನಡೆಯುತ್ತಿದೆ.

### ಸುಪ್ರೀಂ ಕೋರ್ಟ್‌ನ ಯೂಟ್ಯೂಬ್ ಚಾನೆಲ್ ಹ್ಯಾಕ್

**ನವದೆಹಲಿ:** ದೇಶದ ಸರ್ವೋಚ್ಚ ನ್ಯಾಯಾಲಯ ಅಥವಾ ಸುಪ್ರೀಂ ಕೋರ್ಟ್‌ನ ಅಧಿಕೃತ ಯೂಟ್ಯೂಬ್ ಚಾನೆಲ್ ಅನ್ನೇ ಕಿಡಿಗೇಡಿಗಳು ಶುಕ್ರವಾರ ಹ್ಯಾಕ್ ಮಾಡಿದ್ದಾರೆ. ಖದೀಮರು ದೇಶದ ಸರ್ವೋಚ್ಚ ನ್ಯಾಯಾಲಯದ ಯೂಟ್ಯೂಬ್ ಚಾನೆಲ್ ಹ್ಯಾಕ್ ಮಾಡಿ ಇಲ್ಲಿ ಕ್ರಿಪ್ಟೋಕರೆನ್ಸಿ ಸೇರಿದಂತೆ ಇತರ ಪ್ರಮೋಶನ್ ವಿಡಿಯೋಗಳನ್ನು ಪೋಸ್ಟ್ ಮಾಡಲಾಗಿದೆ. ಈ ಮಾಹಿತಿ ತಿಳಿಯುತ್ತಿದ್ದಂತೆ ತಾಂತ್ರಿಕ ತಂಡ ಸುಪ್ರೀಂ ಕೋರ್ಟ್ ಯೂಟ್ಯೂಬ್ ಚಾನೆಲ್ ತಾತ್ಕಾಲಿಕ ಸ್ಥಗಿತಗೊಳಿಸಿ ಸರಿಪಡಿಸುವ ಕಾರ್ಯ ಆರಂಭಿಸಿದೆ.

ಸುಪ್ರೀಂ ಕೋರ್ಟ್ ತನ್ನ ಯೂಟ್ಯೂಬ್ ಚಾನೆಲ್ ಮೂಲಕ ವಿಚಾರಣೆಗಳ ನೇರ ಪ್ರಸಾರ ಮಾಡುತ್ತದೆ. ಇತ್ತೀಚೆಗೆ ಕೋಲ್ಕತಾ ಆರ್‌ಜಿ ಕಾರ್ ಆಸ್ಪತ್ರೆ ಪ್ರಕರಣದ ವಿಚಾರಣೆಯನ್ನು ನೇರ ಪ್ರಸಾರ ಮಾಡಿತ್ತು. ಇನ್ನು ವಿಚಾರಣೆಗಳ ವಿಡಿಯೋಗಳು ಸುಪ್ರೀಂ ಕೋರ್ಟ್ ಯೂಟ್ಯೂಬ್ ಚಾನೆಲ್‌ನಲ್ಲಿ ಲಭ್ಯವಿದೆ. ಆದರೆ ಖದೀಮರು ಸುಪ್ರೀಂ ಕೋರ್ಟ್ ಯೂಟ್ಯೂಬ್ ಚಾನೆಲ್ ಹ್ಯಾಕ್ ಮಾಡಿದ ಬಳಿಕ ಅಮೆರಿಕದ ಮೂಲದ ರಿಪ್ಪಲ್ ಲ್ಯಾಬ್ಸ್ ಜಾಹೀರಾತು ವಿಡಿಯೋಗಳನ್ನು ಪೋಸ್ಟ್ ಮಾಡಿದ್ದಾರೆ. ಈ ಪೈಕಿ ಕ್ರಿಪ್ಟೋಕರೆನ್ಸಿ, ಎಕ್ಸ್ಆರ್‌ಪಿ ಸೇರಿದಂತೆ ಇತರ ಕೆಲ ವಿಡಿಯೋಗಳನ್ನು ಪೋಸ್ಟ್ ಮಾಡಿದ್ದಾರೆ.



# ಮತ್ತೊಂದು ಬಾಲಿವುಡ್ ಪ್ರಾಜೆಕ್ಟ್ ಒಪ್ಪಿಕೊಂಡ ಸಮಂತಾ

ಸೌತ್ ನಟಿ ಸಮಂತಾ ಮತ್ತೆ ಸಿನಿಮಾಗಳಲ್ಲಿ ಆಕ್ಟಿವ್ ಆಗಿದ್ದಾರೆ. 'ಸಿಟಾಡೆಲ್' ಬಳಿಕ ಮತ್ತೊಂದು ಬಾಲಿವುಡ್ ಪ್ರಾಜೆಕ್ಟ್ ಅನ್ನು ಒಪ್ಪಿಕೊಂಡಿದ್ದಾರೆ. 'ಆಶಿಕಿ 2' ಆದಿತ್ಯಾ ರಾಯ್ ಕಪೂರ್ ಜೊತೆ ಸಮಂತಾ ರೊಮ್ಯಾನ್ಸ್ ಮಾಡಲು ರೆಡಿಯಾಗಿದ್ದಾರೆ. ವಿಜಯ್ ದೇವರಕೊಂಡ ಜೊತೆಗಿನ 'ಖುಷಿ' ಸಿನಿಮಾದ ರಿಲೀಸ್ ಬಳಿಕ ಸಮಂತಾ ನಟಿಸುತ್ತಿರುವ ಪ್ರಾಜೆಕ್ಟ್ ಬಗ್ಗೆ ಯಾವುದೇ ಅಪ್ಡೇಟ್ ಸಿಕ್ಕಿರಲಿಲ್ಲ. ಖುಷಿ ಸಿನಿಮಾ ನಟಿಸುತ್ತಿದ್ದ ವೇಳೆ 'ಸಿಟಾಡೆಲ್ ಹನಿ ಬನಿ' ವೆಬ್ ಸರಣಿ ಇದೇ ನವೆಂಬರ್‌ನಲ್ಲಿ ರಿಲೀಸ್ ಆಗಲಿದೆ. ಈಗ ಅಭಿಮಾನಿಗಳು ಖುಷಿಪಡುವಂತಹ ಸಿಹಿಸುದ್ದಿ ಸಿಕ್ಕಿದೆ.

ರಾಜ್ ಮತ್ತು ಡಿಕೆ ನಿರ್ಮಾಣದ ಹೊಸ ವೆಬ್ ಸರಣಿ 'ರಕ್ತ ಬ್ರಹ್ಮಾಂಡ್'ದಲ್ಲಿ ಸಮಂತಾ ನಾಯಕಿಯಾಗಿ ನಟಿಸುತ್ತಿದ್ದಾರೆ.

ಸೆಟ್‌ಗೆ ಎಂಟ್ರಿ ಕೊಟ್ಟಿರುವ ಬಗ್ಗೆ ನಟಿ ಬರೆದುಕೊಂಡಿದ್ದಾರೆ. ಹಲವು ತಿಂಗಳುಗಳ ನಂತರ ಸೆಟ್‌ಗೆ ಮರಳಿರೋದು ಖುಷಿ ಇದೆ ಎಂದಿದ್ದಾರೆ. ಅಂದಹಾಗೆ, ಸಮಂತಾಗೆ ರಾಹಿ ಅನಿಲ್ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಇವತ ಜೊತೆಗೆ ಆದಿತ್ಯಾ ರಾಯ್ ಕಪೂರ್, ವಮಿಕಾ ಗಬ್ಬಿ, ಅಲಿ ಫಜಲ್ ಕೂಡ ನಟಿಸುತ್ತಿದ್ದಾರೆ.

ಮೊದಲ ಬಾರಿಗೆ ಆದಿತ್ಯಾ ರಾಯ್ ಕಪೂರ್ ಮತ್ತು ಸಮಂತಾ ಜೊತೆಯಾಗಿ ಕಾಣಿಸಿಕೊಳ್ಳಿದ್ದಾರೆ. ಈ ಪ್ರಾಜೆಕ್ಟ್ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.



# ಪಡ್ಡೆ ಹುಡುಗರ ನಿದ್ದೆ ಕದ್ದ ಪೂನಂ

ಟಾಪ್‌ಲೆಸ್ ಅವತಾರಗಳು ಹೊಸದೇನಲ್ಲ. ಆಗಾಗ್ಗೆ ತನ್ನ ಮೈಮಾಟವನ್ನು ಸಾಮಾಜಿಕ ಜಾಲತಾಣದಲ್ಲಿ ನಿರಂತರವಾಗಿ ಪ್ರದರ್ಶನಕ್ಕೀಡುವ ಮೂಲಕ ಗಮನ ಸೆಳೆಯುತ್ತಿರುತ್ತಾರೆ. ಕೆಲವು ತಿಂಗಳ ಹಿಂದೆ ಗರ್ಭಕಂಠದ ಕ್ಯಾನ್ಸರ್‌ನಿಂದ ಸಾವನ್ನಪ್ಪಿರುವುದಾಗಿ ಇಡೀ ದೇಶವನ್ನೇ ನಂಬಿಸಿದ ಚಾಲಕಿ ಈಕೆ. ಇದೀಗ ಅಭಿಮಾನಿಗಳಿಗೆ ಕಚಗುಳಿ ಇಡುವ ಮೂಲಕ ಮತ್ತೆ ಸೋಷಿಯಲ್ ಮೀಡಿಯಾಗಳಲ್ಲಿ ಸುದ್ದಿಯಾಗುತ್ತಿದ್ದಾರೆ.ಅದೇ ರೀತಿ ಮಾದಕ ಫೋಟೋವೊಂದನ್ನ ಪೂನಂ ಪಾಂಡೆ ಹಂಚಿಕೊಂಡು ಅಭಿಮಾನಿಗಳ ಹೃದಯ ಕದ್ದಿದ್ದಾರೆ. ಜೀನ್ಸ್ ಪ್ಯಾಂಟ್ ಜೊತೆಗೆ ಎದೆ ಭಾಗ ಕಾಣಿಸುವಂತೆ ಬ್ಲೌಸ್‌ವೊಂದನ್ನ ಧರಿಸಿದ್ದಾರೆ. ಥಾಂಬ್ಡಿ ಚಾಂಬ್ಡಿ ಕಾ ಮತ್ಲಬ್ ಕ್ಯಾ ಹೇ ಅಂತಲೂ ಬರೆದುಕೊಂಡಿದ್ದಾರೆ. ಪೂನಂ ಪಾಂಡೆ ಅವರ ಫೋಟೋಗೆ ಅಭಿಮಾನಿಗಳು ಫಿದಾ ಆಗಿದ್ದರೆ, ನಮ್ಮ ಎದೆಗೆ ಇನ್ನೆಷ್ಟು ಬಾರಿ ಬೆಂಕಿ ಹಚ್ಚೀರಿ ಅಂತ ಪ್ರಶ್ನೆ ಮಾಡಿದ್ದಾರೆ. ಇನ್ನೂ ಕೆಲವರು ಫೈಯರ್ ಎಮೋಜಿ ಹಾಕಿದ್ರೆ, ಕೆಲವರು ಐ ಲವ್ ಯೂ ಪೂನಂ, ತುಂಬಾ ಸೆಕ್ಸಿ ಆಗಿದ್ದೀರಾ ಎಂದು ಸಹ ಕಾಮೆಂಟ್ ಮಾಡಿದ್ದಾರೆ.

ಇತ್ತೀಚೆಗಷ್ಟೇ ಪೂನಂ ಪಾಂಡೆ ಕೋಲ್ಕತ್ತಾ ಟ್ರೈನಿ ವೈದ್ಯೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಇನ್‌ಸ್ಟಾಗ್ರಾಮ್ ಪೋಸ್ಟ್ ಮೂಲಕ ಪ್ರತಿಕ್ರಿಯೆ ನೀಡಿದ್ದರು. ನಾಚಿಕೆಯಾಗಬೇಕು ಮಹಿಳೆಯರು ನಿರಂತರವಾಗಿ ಅಸುರಕ್ಷಿತರಾಗಿರುವ ಈ ಜಗತ್ತಿನಲ್ಲಿ ನಾವು ಏಕೆ ವಾಸಿಸುತ್ತಿದ್ದೇವೆ ನಾವು ಇದನ್ನ ಪ್ರತಿದಿನ ಸಹಿಸಿಕೊಳ್ಳಲು ಏಕೆ ಒತ್ತಾಯಿಸಲ್ಪಡುತ್ತೇವೆ ಅಸುರಕ್ಷತೆ ನಮಗೆ ಸಂಭವಿಸುತ್ತಿದೆ ಎಂದರು.

ಮಾದಕ ನಟಿ ಪೂನಂ ಪಾಂಡೆ

# ಬಳೆ ಶಾಸ್ತ್ರ ಮಾಡಿಕೊಂಡ ಸೋನಲ್

ಇತ್ತೀಚೆಗಷ್ಟೇ ಮದುವೆಯಾದ ನವವಧು ಸೋನಲ್ ಈಗ ಇನ್ಸಾಗ್ರಾಂ ನಯಾ ಫೋಟೋದೊಂದಿಗೆ ಕಾಣಿಸ್ಕೊಂಡಿದ್ದಾರೆ. ಹಸಿರು ಸೀರೆಯುಟ್ಟು ಕೈತುಂಬಾ ಹಸಿರು ಬಳೆ ಧರಿಸಿ ಪೋಸ್ ಕೊಟ್ಟಿದ್ದಾರೆ. ಇದು ಬಳೆಶಾಸ್ತ್ರದ ಫೋಟೋಗಳಾಗಿದ್ದು ಕೈಗೆ ಬಳೆ ತೊಡಿಸಿಕೊಳ್ಳವ ಫೋಟೋಗಳನ್ನು ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಫೋಟೋ ನೋಡಿದರೆ ಮದುವೆ ನಡೆದು ತಿಂಗಳೇ ಉರುಳಿದೆ, ಮತ್ಯಾಕೆ ಸೋನಲ್ ಬಳೆ ಶಾಸ್ತ್ರ ಮಾಡಿಕೊಳ್ಳುತ್ತಿದ್ದಾರೆ ಎಂದು ಆಶ್ಚರ್ಯವಾಗೋದೇನು ನಿಜ. ಆದರೆ ಇದು ಹಳೆಯ ಫೋಟೋಗಳಾಗಿದ್ದು ಈಗ ಒಂದೊಂದಾಗೇ ನೆನಪು ತೋಡಿಕೊಳ್ಳುತ್ತಿದ್ದಾರೆ. ನಟಿ ಸೋನಲ್ ಮೊಂಥೆರೋ ಹಾಗೂ ನಿರ್ದೇಶಕ ತರುಣ್ ಸುಧೀರ್ ಕಳೆದ ಆಗಸ್ಟ್ ತಿಂಗಳಲ್ಲಿ ಅದ್ದೂರಿಯಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ರು. ಆ ವೇಳೆ ಮದುವೆ ಹೆಣ್ಣಿಗೆ ನಡೆದ ಬಳೆ ತೊಡಿಸುವ ಸಂಪ್ರದಾಯದ ಮುದ್ದಾದ ಫೋಟೋಗಳನ್ನ ಈಗ ಸೋನಲ್ ಇನ್ಸಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ. ಸೋನಲ್ ಮತ್ತು ತರುಣ್ ಮದುವೆ ಸಮಾರಂಭ ಸಂಪ್ರದಾಯಗಳು ಆಗಸ್ಟ್‌ನಲ್ಲಿ ಭರ್ತಿ ಒಂದು ವಾರ ನಡೆದಿತ್ತು. ಬೆಂಗಳೂರಿನ ಹೊರವಲಯದ ಛತ್ರದಲ್ಲಿ ಅದ್ದೂರಿಯಾಗಿ ಮದುವೆಯಾದ್ದರು ಸೋನಲ್ ಮತ್ತು ತರುಣ್. ಬಳಿಕ ಮಂಗಳೂರಿನಲ್ಲಿ ಕ್ರಿಶ್ಚಿಯನ್ ಸಂಪ್ರದಾಯದಂತೆ ಚರ್ಚ್‌ನಲ್ಲಿ ಮದುವೆಯಾಗಿದ್ದರು. ಅಲ್ಲಿ ಆರತಕ್ಷತೆಯನ್ನೂ ಏರ್ಪಡಿಸಿದ್ದರು.





# ಬಿಕಿನಿ ಫೋಟೋ ಹಂಚಿಕೊಂಡ ಐಂದ್ರಿತಾ

ನಟಿ ಹಾಟ್ ಆಗಿ ಪೋಸ್

ಕನ್ನಡದ 'ಮನಸಾರೆ' ನಟಿ ಐಂದ್ರಿತಾ ರೇ ಇದೀಗ ಬಿಕಿನಿ ಫೋಟೋ ಹರಿಬಿಟ್ಟು ಪಡೆ ಹುಡುಗರ ನಿದ್ದೆಗೆಡಿಸಿದ್ದಾರೆ. ಬಿಕಿನಿಯಲ್ಲಿ ನಟಿ ಹಾಟ್ ಆಗಿ ಪೋಸ್ ನೀಡಿದ್ದಾರೆ. ಮತ್ತೊಮ್ಮೆ ಬಿಕಿನಿಯಲ್ಲಿ ಮಸ್ತ್ ಆಗಿ ಕಾಣಿಸಿಕೊಂಡಿದ್ದಾರೆ. ಮಳೆಗಾಲ ಬಹುತೇಕ ಮುಗಿದಿದೆ ಎಂದು ನೀವು ಭಾವಿಸಿದಾಗ ಎಂದು ನಟಿ ಕ್ಯಾಪ್ಷನ್ ನೀಡಿದ್ದಾರೆ. ನಟಿಯ ಲುಕ್‌ಗೆ ಸೋ ಬ್ಯೂಟಿಫುಲ್, ಯೂ ಲುಕ್ಕಿಂಗ್ ಲೈಕ್ ಎ ವಾವ್ ಎಂದು ನೆಟ್ಟಿಗರು ಬಣ್ಣಿಸಿದ್ದಾರೆ. ಅಂದಹಾಗೆ, ಐಂದ್ರಿತಾ ರೇ ಇದೀಗ ಹೇಳಿಕೊಳ್ಳುವಂತಹ ಸಿನಿಮಾ ಅವಕಾಶಗಳು ಸಿಗುತ್ತಿಲ್ಲ. ಇತ್ತೀಚೆಗೆ ನೀಡಿದ ಸಂದರ್ಶನವೊಂದರಲ್ಲಿ ಅವರು ಮದುವೆಯಾದ್ಮೇಲೆ ನನಗೆ ಸಿನಿಮಾ ಆಫರ್ಸ್ ಕಮ್ಮಿಯಾಗಿದೆ. ನನಗೆ ಸಿನಿಮಾಗಳು ಸಿಕ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದರು. 'ಮೆರವಣಿಗೆ' ಸಿನಿಮಾದಲ್ಲಿ ಪ್ರಜ್ವಲ್ ದೇವರಾಜ್‌ಗೆ ಬೆಂಗಾಳಿ ಬೆಡಗಿ ಐಂದ್ರಿತಾ ರೇ ನಾಯಕಿಯಾಗಿ ನಟಿಸಿದರು. ಬಳಿಕ ಸುದೀಪ್, ದುನಿಯಾ ವಿಜಯ್, ದಿಗಂತ್, ಪುನೀತ್ ರಾಜ್‌ಕುಮಾರ್ ಸಿನಿಮಾಗಳಿಗೂ ನಾಯಕಿಯಾಗಿ ನಟಿಸಿ ಸೈ ಎನಿಸಿಕೊಂಡರು. ಅದಷ್ಟೇ ಅಲ್ಲ, ಭಾವ್ಯೆ, ಮೇ ಜರೂರ್ ಆವುಂಗಾ ಸೇರಿದಂತೆ ಕೆಲವು ಸಿನಿಮಾಗಳಲ್ಲಿಯೂ ಮನಸಾರೆ ಬೆಡಗಿ ನಾಯಕಿಯಾಗಿ ನಟಿಸಿದ್ದಾರೆ. ಇನ್ನೂ ಬೇಡಿಕೆ ಇರುವಾಗಲೇ 2018ರಲ್ಲಿ ದಿಗಂತ್ ಜೊತೆ ನಟಿ ಹಸೆಮಣೆ ಏರಿದರು. ಮದುವೆಯಾದ್ಮೇಲೆ ಇಬ್ಬರೂ ಜೊತೆಯಾಗಿ 'ಕ್ಷಮಿಸಿ ನಿಮ್ಮ ಖಾತೆಯಲ್ಲಿ ಹಣವಿಲ್ಲ' ಚಿತ್ರದಲ್ಲಿ ನಟಿಸಿರು. ಇದರ ಬಹುತೇಕ ಚಿತ್ರೀಕರಣ ಮಲೆನಾಡು ಶಿವಮೊಗ್ಗದಲ್ಲಿ ಶೂಟ್ ಮಾಡಲಾಗಿತ್ತು.




# ಹಾಲಿವುಡ್‌ನಲ್ಲಿ ಆಕ್ಷನ್ ಅವತಾರ ತಾಳಿದ ರಕ್ಕಮ್ಮ

ಕನ್ನಡದ 'ವಿಕ್ರಾಂತ್ ರೋಣ' ಸಿನಿಮಾದಲ್ಲಿ ರಾರಾ ರಕ್ಕಮ್ಮ ಎಂದು ಪಡ್ಡೆಹುಡುಗುರ ನಿದ್ದೆಗೆಡಿಸಿದ ಬಾಲಿವುಡ್ ನಟಿ ಜಾಕ್ವೆಲಿನ್ ಇದೀಗ ಹಾಲಿವುಡ್‌ನತ್ತ ಮುಖ ಮಾಡಿದ್ದಾರೆ. 'ಕಿಲ್ ದೆಮ್ ಆಲ್ 2' ಎನ್ನುತ್ತಾ ನಟಿ ಆಕ್ಷನ್ ಅವತಾರ ತಾಳಿದ್ದಾರೆ. ಜಾಕ್ವೆಲಿನ್ ನಟಿಸಿದ ಮೊದಲ ಹಾಲಿವುಡ್ ಸಿನಿಮಾ 'ಕಿಲ್ ದೆಮ್ ಆಲ್ 2' ಚಿತ್ರದ ಟ್ರೈಲರ್‌ಗೆ ರಿಲೀಸ್ ಆಗಿ ಸಿನಿ ಪ್ರೇಕ್ಷಕರ ಮೆಚ್ಚುಗೆ ಗಳಿಸಿದೆ. ಹೀರೋ ಜೀನ್ ಕ್ಲೌಡ್ ವ್ಯಾನ್ ಡೆಮೆಗೆ ನಾಯಕಿಯಾಗಿ ಜಾಕ್ವೆಲಿನ್ ಕಾಣಿಸಿಕೊಂಡಿದ್ದಾರೆ. ಗನ್ ಹಿಡಿದು ನಟಿ ಅಖಾಡಕ್ಕೆ ಕೂಡ ಇಳಿದಿದ್ದಾರೆ. ಈ ಸಿನಿಮಾದ ಮೊದಲ ಸರಣಿ 2017ರಲ್ಲಿ ಸೂಪರ್ ಹಿಟ್ ಆಗಿತ್ತು. ನಟಿಯ ಮೊದಲ ಹಾಲಿವುಡ್ ಚಿತ್ರವಾಗಿದ್ರೂ ಆತ್ಮವಿಶ್ವಾಸದಿಂದ ನಟಿಸಿದ್ದಾರೆ. ಬಿಟ್ಟಿರುವ ಟ್ರೈಲರ್ ನೋಡುಗರಿಗೆ ಇಂಟರೆಸ್ಟಿಂಗ್ ಎನಿಸಿದೆ. ಎಂದೂ ನಟಿಸಿರದ ವಿಭಿನ್ನ ಗೆಟಪ್‌ನಲ್ಲಿ ನಟಿ ಕಾಣಿಸಿಕೊಂಡಿದ್ದಾರೆ. ಅಂದಹಾಗೆ, ಶ್ರೀಲಂಕಾ ಸುಂದರಿಗೆ ಬಾಲಿವುಡ್‌ನಲ್ಲಿ ಗುರುತಿಸಿಕೊಂಡಿದ್ದಾರೆ. ಗಟ್ಟಿ ನೆಲೆ ಗಿಟ್ಟಿಸಿಕೊಳ್ಳುತ್ತಿರುವ ವೇಳೆಯಲ್ಲಿ ಹಾಲಿವುಡ್‌ಗೆ ನಟಿ ಹಾರಿದ್ದಾರೆ. ಮೊದಲ ಸಿನಿಮಾದಲ್ಲೇ ಯಶಸ್ಸು ಸಿಗುತ್ತಾ ಕಾಯಬೇಕಿದೆ.

### ತವರಿನಲ್ಲಿ ಶತಕ ಸಿಡಿಸಿದ ಅಶ್ವಿನ್
# ದಾಖಲೆಗಳ ಸರಮಾಲೆ

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಎರಡು ಟೆಸ್ಟ್ ಸರಣಿಯ ಮೊದಲ ಪಂದ್ಯದಲ್ಲಿ ಟೀಂ ಇಂಡಿಯಾವನ್ನು ಸಂಕಷ್ಟದಿಂದ ಪಾರು ಮಾಡಿದ ಆರ್ ಅಶ್ವಿನ್ 102 ರನ್‌ಗಳ ಇನ್ನಿಂಗ್ಸ್ ಆಡುವ ಮೂಲಕ ಹಲವು ದಾಖಲೆಗಳನ್ನು ಮುರಿದಿದಲ್ಲದೆ, ತಮ್ಮ ಹೆಸರಿನಲ್ಲಿ ಅಪರೂಪದ ದಾಖಲೆಯನ್ನು ನಿರ್ಮಿಸಿದರು.

ಈ ಶತಕದೊಂದಿಗೆ ಅಶ್ವಿನ್ ಈಗ ಟೆಸ್ಟ್‌ನಲ್ಲಿ 20 ಬಾರಿ ಐವತ್ತು ಪ್ಲಸ್ ಸ್ಕೋರ್ ಹಾಗೂ 500 ಕ್ಕೂ ಹೆಚ್ಚು ವಿಕೆಟ್‌ಗಳನ್ನು ಪಡೆದ ವಿಶ್ವದ ಮೊದಲ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಈ ವಿಷಯದಲ್ಲಿ ಅಶ್ವಿನ್ ನಂತರ ಇಂಗ್ಲೆಂಡ್‌ನ ಸ್ಟುವರ್ಟ್ ಬ್ರಾಡ್ ಎರಡನೇ ಸ್ಥಾನದಲ್ಲಿದ್ದು, ಅವರು ಟೆಸ್ಟ್‌ನಲ್ಲಿ 604 ವಿಕೆಟ್‌ಗಳೊಂದಿಗೆ 14 ಬಾರಿ ಐವತ್ತು ಪ್ಲಸ್ ಸ್ಕೋರ್ ಗಳಿಸಿದ್ದಾರೆ. ಈ ಪಂದ್ಯದಲ್ಲಿ 8ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಇಳಿದು ಅಮೋಘ ಶತಕ ಸಿಡಿಸಿದ ಅಶ್ವಿನ್, ಏಳನೇ ಕ್ರಮಾಂಕ ಅಥವಾ ಅದಕ್ಕಿಂತ ಕೆಳಗಿನ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡುವಾಗ ಭಾರತದ ಪರ ಅತಿ ಹೆಚ್ಚು ಶತಕಗಳನ್ನು ಗಳಿಸಿದ ಬ್ಯಾಟ್ಸ್‌ಮನ್‌ಗಳ ಪಟ್ಟಿಗೆ ಸೇರಿಕೊಂಡಿದ್ದಾರೆ. ಅವರಂತೆಯೇ ಶ್ರೇಷ್ಠ ಆಲ್‌ರೌಂಡರ್ ಕಪಿಲ್ ದೇವ್ ಮತ್ತು ಮಾಜಿ ನಾಯಕ ಎಂಎಸ್ ಧೋನಿ ಕೂಡ ಈ ಸಾಧನೆ ಮಾಡಿದ್ದಾರೆ. ಈ ಇಬ್ಬರೂ ದಿಗ್ಗಜರು ಭಾರತದಲ್ಲಿ 4 ಶತಕ ಬಾರಿಸಿದ್ದು, ಇದೀಗ ಅಶ್ವಿನ್ ಕೂಡ ಈ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ಅಶ್ವಿನ್ ಬಾಂಗ್ಲಾದೇಶ ವಿರುದ್ಧ ಕೇವಲ 108 ಎಸೆತಗಳಲ್ಲಿ ಶತಕ ಪೂರೈಸಿದರು. ಇದು ಅಶ್ವಿನ್ ಅವರ ಟೆಸ್ಟ್ ವೃತ್ತಿ ಜೀವನದ ವೇಗದ ಶತಕವೆನಿಸಿಕೊಂಡಿದೆ. ಇದಕ್ಕೂ ಮುನ್ನ ಅವರು 2011ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ 117 ಎಸೆತಗಳಲ್ಲಿ ತಮ್ಮ ವೇಗದ ಟೆಸ್ಟ್ ಶತಕ ದಾಖಲಿಸಿದ್ದರು.

ಬಾಂಗ್ಲಾದೇಶದ ವಿರುದ್ಧ 7ನೇ ವಿಕೆಟ್‌ಗೆ ಭಾರತ ದಾಖಲಿಸಿದ ಅತ್ಯಧಿಕ ರನ್ ಜೊತೆಯಾಟದ ದಾಖಲೆ ಸೌರವ್ ಗಂಗೂಲಿ ಮತ್ತು ಸುನಿಲ್ ಜೋಶಿ ಹೆಸರಿನಲ್ಲಿತ್ತು. ಈ ಇಬ್ಬರು 2000 ರಲ್ಲಿ ಢಾಕಾ ಟೆಸ್ಟ್ ಪಂದ್ಯದಲ್ಲಿ 121 ರನ್‌ಗಳ ಜೊತೆಯಾಟವನ್ನು ಮಾಡಿದ್ದರು. ಇದೀಗ ಆ ದಾಖಲೆ 195 ರನ್‌ಗಳ ಜೊತೆಯಾಟವನ್ನಾಡಿರುವ ಅಶ್ವಿನ್ ಮತ್ತು ಜಡೇಜಾ ಪಾಲಾಗಿದೆ.

ಇನ್ನು ಈ ಮೈದಾನದಲ್ಲಿ ಇದುವರೆಗೆ 5 ಟೆಸ್ಟ್ ಪಂದ್ಯಗಳನ್ನು ಆಡಿರುವ ಅಶ್ವಿನ್ ಬ್ಯಾಟಿಂಗ್‌ನಲ್ಲಿ 48 ಸರಾಸರಿಯಲ್ಲಿ ಸುಮಾರು 300 ರನ್ ಗಳಿಸಿದ್ದಾರೆ. ಈ ಮೈದಾನದಲ್ಲಿ ಶತಕ ಕೂಡ ಬಾರಿಸಿದ್ದಾರೆ. ಬೌಲಿಂಗ್‌ನಲ್ಲೂ ಮ್ಯಾಜಿಕ್ ಮಾಡಿರುವ ಅಶ್ವಿನ್ ನಾಲ್ಕು ಬಾರಿ ಇನ್ನಿಂಗ್ಸ್‌ನಲ್ಲಿ ಐದು ವಿಕೆಟ್ ಪಡೆದಿದ್ದು, ಒಟ್ಟಾರೆ 30 ವಿಕೆಟ್ ಪಡೆದಿದ್ದಾರೆ.

# 2ನೇ ದಿನದಾಟದಲ್ಲೂ ಬಾಂಗ್ಲಾದೇಶ ವಿರುದ್ಧ ಭಾರತದ್ದೇ ಪಾರುಪತ್ಯ

## ಮೊದಲ ಇನ್ನಿಂಗ್ಸ್‌ನಲ್ಲಿ 227 ರನ್‌ಗಳ ಮುನ್ನಡೆ ಪಡೆದಿರುವ ಟೀಂ ಇಂಡಿಯಾ ಇದೀಗ ಬಾಂಗ್ಲಾದೇಶಕ್ಕೆ ದೊಡ್ಡ ಟಾರ್ಗೆಟ್ ನೀಡಲು ಸ್ಕೆಚ್

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯ ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿದೆ. ಮೊದಲ ಇನ್ನಿಂಗ್ಸ್‌ನಲ್ಲಿ 227 ರನ್‌ಗಳ ಮುನ್ನಡೆ ಪಡೆದಿರುವ ಟೀಂ ಇಂಡಿಯಾ ಇದೀಗ ಬಾಂಗ್ಲಾದೇಶಕ್ಕೆ ದೊಡ್ಡ ಟಾರ್ಗೆಟ್ ನೀಡಲು ಕಣ್ಣಿಟ್ಟಿದೆ.

2ನೇ ದಿನದಾಟದಂತ್ಯಕ್ಕೆ 3 ವಿಕೆಟ್ ಕಳೆದುಕೊಂಡಿರುವ ಟೀಂ ಇಂಡಿಯಾ 81 ರನ್ ಕಲೆಹಾಕಿದೆ. ಇದರೊಂದಿಗೆ ತಂಡದ ಮುನ್ನಡೆ 308 ರನ್‌ಗಳಿಗೇರಿದೆ.

ಬಾಂಗ್ಲಾದೇಶವನ್ನು 149 ರನ್‌ಗಳಿಗೆ ಆಲೌಟ್ ಮಾಡಿ 2ನೇ ಇನ್ನಿಂಗ್ಸ್ ಆರಂಭಿಸಿದ ಭಾರತ ತಂಡಕ್ಕೆ ಮತ್ತೊಮ್ಮೆ ಉತ್ತಮ ಆರಂಭ ಸಿಗಲಿಲ್ಲ. ನಾಯಕ ರೋಹಿತ್ ಶರ್ಮಾ ಮತ್ತೊಮ್ಮೆ ಒಂದಂಕಿಗೆ ಸುಸ್ತಾದರೆ, ಮೊದಲ ಇನ್ನಿಂಗ್ಸ್‌ನಲ್ಲಿ ಅರ್ಧಶತಕದ ಇನ್ನಿಂಗ್ಸ್ ಆಡಿದ್ದ ಯಶಸ್ವಿ ಜೈಸ್ವಾಲ್ ಎರಡನೇ ಇನ್ನಿಂಗ್ಸ್‌ನಲ್ಲಿ 10 ರನ್‌ಗಳಿಗೆ ವಿಕೆಟ್ ಒಪ್ಪಿಸಿದರು. ಮತ್ತೊಮ್ಮೆ ನಿರಾಸೆ ಮೂಡಿಸಿದ ವಿರಾಟ್ ಕೊಹ್ಲಿ 17 ರನ್‌ಗಳಿಗೆ ಬ್ಯಾಟ್ ಎತ್ತಿಟ್ಟರು. ಮೊದಲ ಇನ್ನಿಂಗ್ಸ್‌ನಲ್ಲಿ ಬೇಡದ ಶಾಟ್ ಆಡಲು ಹೋಗಿ ವಿಕೆಟ್ ಒಪ್ಪಿಸಿದ್ದ ಕೊಹ್ಲಿ, ಎರಡನೇ ಇನ್ನಿಂಗ್ಸ್‌ನಲ್ಲಿ ಔಟಿಲ್ಲದಿದ್ದರೂ, ತಾನು ಮಾಡಿಕೊಂಡ ಎಡವಟ್ಟಿನಿಂದಾಗಿ ವಿಕೆಟ್ ಕಳೆದುಕೊಂಡರು.



**2ನೇ ದಿನದಾಟದಲ್ಲೂ ಬಾರತದ್ದೇ ಪಾರುಪತ್ಯ**

ಇನ್ನು ಬಾಂಗ್ಲಾದೇಶದ ಮೊದಲ ಇನ್ನಿಂಗ್ಸ್ ಬಗ್ಗೆ ಹೇಳುವುದಾದರೆ.. ಪ್ರವಾಸಿ ತಂಡ ಪೂರ್ಣ ದಿನವನ್ನು ಆಡಲಾಗದೆ, ಕೇವಲ ಮೂರನೇ ಸೆಷನ್‌ನಲ್ಲಿಯೇ ಆಲೌಟ್ ಆಯಿತು.

### ಬುಮ್ರಾ ಎದುರು ಕುಸಿದ ಬಾಂಗ್ಲಾ

**ಟೀಂ ಇಂಡಿಯಾ ಪರ ಬೌಲಿಂಗ್‌ನಲ್ಲಿ ಮಿಂಚಿದ ಜಸ್ಪ್ರೀತ್ ಬುಮ್ರಾ 11 ಓವರ್‌ಗಳಲ್ಲಿ 50 ರನ್ ನೀಡಿ 4 ವಿಕೆಟ್ ಪಡೆದರು. ಇದರೊಂದಿಗೆ ಬುಮ್ರಾ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ 400 ವಿಕೆಟ್ ಪೂರೈಸಿದ ಸಾಧನೆಯನ್ನು ಮಾಡಿದರು. ಉಳಿದಂತೆ ಮೊಹಮ್ಮದ್ ಸಿರಾಜ್, ಆಕಾಶ್ ದೀಪ್ ಹಾಗೂ ರವೀಂದ್ರ ಜಡೇಜಾ ತಲಾ 2 ವಿಕೆಟ್ ಪಡೆದರೆ, ಬ್ಯಾಟಿಂಗ್‌ನಲ್ಲಿ ಶತಕ ಬಾರಿಸಿದ್ದ ಅಶ್ವಿನ್‌ಗೆ ಬೌಲಿಂಗ್‌ನಲ್ಲಿ ಮಾತ್ರ ಯಾವುದೇ ವಿಕೆಟ್ ಸಿಗಲಿಲ್ಲ.**

ಮೊದಲ ದಿನದಂತೆಯೇ ಎರಡನೇ ದಿನದ ಆಟದಲ್ಲೂ ಭಾರತದ ಆಟಗಾರರು ಬಾಂಗ್ಲಾದೇಶದ ಮೇಲೆ ಪಾರುಪತ್ಯ ಸಾಧಿಸಿದರು. ಮೊದಲ ದಿನದ ಆಟದಲ್ಲಿ ಭಾರತದ ಬ್ಯಾಟ್ಸ್‌ಮನ್‌ಗಳ ಜಾದೂ ಕಂಡುಬಂದರೆ ಎರಡನೇ ದಿನ ಜಸ್ಪ್ರೀತ್ ಬುಮ್ರಾ ನಾಯಕತ್ವದಲ್ಲಿ ಬೌಲರ್‌ಗಳ ಮ್ಯಾಜಿಕ್ ಕಂಡುಬಂದಿತು. ಇದರಿಂದಾಗಿ ಬಾಂಗ್ಲಾದೇಶದ ಮೊದಲ ಇನ್ನಿಂಗ್ಸ್ 149 ರನ್‌ಗಳಿಗೆ ಕೊನೆಗೊಂಡಿತು.

**ಭಾರತದ ಇನ್ನಿಂಗ್ ಹೀಗಿತ್ತು**

ಇದಕ್ಕೂ ಮುನ್ನ ಟೀಂ ಇಂಡಿಯಾ 376 ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಮುಗಿಸಿತು. ದಿನದ ಮೊದಲ ಸೆಷನ್‌ನಲ್ಲಿ ಟೀಂ ಇಂಡಿಯಾ ಕೇವಲ 37 ರನ್‌ಗಳಿಗೆ ತನ್ನ ಉಳಿದ 4 ವಿಕೆಟ್‌ಗಳನ್ನು ಕಳೆದುಕೊಂಡಿತು. ತಂಡದ ಪರ ರವಿಚಂದ್ರನ್ ಅಶ್ವಿನ್ 112 ರನ್ ಗಳಿಸಿ ಔಟಾದರೆ, ರವೀಂದ್ರ ಜಡೇಜಾ ಐದನೇ ಟೆಸ್ಟ್ ಶತಕ ವಂಚಿತರಾಗಿ 86 ರನ್‌ಗಳಿಸಿ ಔಟಾದರು. ಬಾಂಗ್ಲಾದೇಶ ಪರ ಹಸನ್ ಮಹಮೂದ್ 5 ವಿಕೆಟ್ ಪಡೆದರು.

# ಡಿಆರ್‌ಎಸ್ ಇದ್ದರೂ ತೆಗೆದುಕೊಳ್ಳದ ಕೊಹ್ಲಿ



ಅಂಪೈರ್‌ಗೆ ನಗು ರೋಹಿತ್‌ಗೆ ಕೋಪ

ಎರಡನೇ ಇನ್ನಿಂಗ್ಸ್‌ನಲ್ಲಿ ಔಟಿಲ್ಲದಿದ್ದರೂ, ತಾನು ಮಾಡಿಕೊಂಡ ಎಡವಟ್ಟಿನಿಂದಾಗಿ ವಿಕೆಟ್ ಕಳೆದುಕೊಂಡರು. ಹೀಗಾಗಿ ಚೆನ್ನೈ ಟೆಸ್ಟ್‌ನಲ್ಲಿ ತನ್ನದೇ ತಪ್ಪುಗಳಿಂದ ವಿಕೆಟ್ ಕೈಚೆಲ್ಲಿದ ಕೊಹ್ಲಿಗೆ ಎರಡೂ ಇನ್ನಿಂಗ್ಸ್‌ಗಳಿಂದ ಕಲೆಹಾಕಲು ಸಾಧ್ಯವಾಗಿದ್ದು ಕೇವಲ 23 ರನ್ ಮಾತ್ರ. ಇನ್ನು ಎರಡನೇ ಇನ್ನಿಂಗ್ಸ್‌ನಲ್ಲಿ ಔಟಾಗುವುದರಿಂದ ಬಚಾವ್ ಆಗಲು ಮೂರು ಮೂರು ಅವಕಾಶಗಳಿದ್ದರೂ ಅದನ್ನು ಸರಿಯಾಗಿ ಬಳಸಿಕೊಳ್ಳದ ಕೊಹ್ಲಿಯ ನಡೆಗೆ ನಾಯಕ ರೋಹಿತ್ ಶರ್ಮಾ ಕೂಡ ಅಚ್ಚರಿ ವ್ಯಕ್ತಪಡಿಸಿದರು. ಅದರ ವಿಡಿಯೋ ಇದೀಗ ಎಲ್ಲೆಡೆ ವೈರಲ್ ಆಗುತ್ತಿದೆ. ಅಷ್ಟಕ್ಕೂ ಕೊಹ್ಲಿ ಮಾಡಿದ ಎಡವಟ್ಟಾದರೂ ಏನು ಮೂರು ಡಿಆರ್‌ಎಸ್ ಇದ್ದರೂ ಕೊಹ್ಲಿ ಏಕೆ ಅದನ್ನು ಬಳಸಿಕೊಳ್ಳಲಿಲ್ಲ ಎಂಬುದಕ್ಕೆಲ್ಲ ವಿವರ ಇಲ್ಲಿದೆ. ವಾಸ್ತವವಾಗಿ ಯಶಸ್ವಿ ಜೈಸ್ವಾಲ್ ವಿಕೆಟ್ ಪತನದ ಬಳಿಕ ಕ್ರೀಸ್‌ಗೆ ಬಂದ ಕೊಹ್ಲಿ, ಮತ್ತೊಮ್ಮೆ ಉತ್ತಮ ಆರಂಭ ಪಡೆದುಕೊಂಡರು. ಎಚ್ಚರಿಕೆಯಿಂದ ಬ್ಯಾಟ್ ಬೀಸಿದ ಕೊಹ್ಲಿ, ಗಿಲ್ ಜೊತೆಗೆ ಉತ್ತಮ ಜೊತೆಯಾಟ ಕಟ್ಟುತ್ತಿದ್ದರು. ಆದರೆ ಈ ವೇಳೆ ಬಾಂಗ್ಲಾದೇಶ ಸ್ಪಿನ್ನರ್ ಮೆಹದಿ ಹಸನ್ ಬೌಲಿಂಗ್‌ನಲ್ಲಿ ಕೊಹ್ಲಿ ಎಲ್‌ಬಿಡಬ್ಲ್ಯು ಆದರು. ಈ ವೇಳೆ ಕೊಹ್ಲಿ ವಿರುದ್ಧ ಬಾಂಗ್ಲಾ ಬೌಲರ್‌ಗಳು ಅಂಪೈರ್ ಬಳಿ ಮನವಿ ಮಾಡಿದರು. ಸ್ವಲ್ಪ ಸಮಯ ಸುಮ್ಮನಿದ್ದ ಅಂಪೈರ್, ಕೊಹ್ಲಿ ಔಟೆಂದು ತೀರ್ಪು ನೀಡಿದರು.


**ಡಿಆರ್‌ಎಸ್ ತೆಗೆದುಕೊಳ್ಳದ ಕೊಹ್ಲಿ**

ಇದನ್ನು ಗಮನಿಸಿದ ಕೊಹ್ಲಿ, ನಾನ್ ಸ್ಟ್ರೈಕ್‌ನಲ್ಲಿ ನಿಂತಿದ್ದ ಶುಭ್‌ಮನ್ ಗಿಲ್ ಬಳಿ ಬಂದು ಡಿಆರ್‌ಎಸ್ ತೆಗದುಕೊಳ್ಳುವ ಬಗ್ಗೆ ಚರ್ಚಿಸಿದರು. ಈ ವೇಳೆ ಗಿಲ್, ಚೆಂಡು ಬ್ಯಾಟ್‌ಗೆ ತಾಗಿದೆಯೋ, ಇಲ್ಲವೋ ಎಂಬುದನ್ನು ಕೊಹ್ಲಿ ಬಳಿ ಕೇಳಿದರು. ಇದಕ್ಕೆ ಕೊಹ್ಲಿ, ಚೆಂಡು ಬ್ಯಾಟಿಗೆ ತಾಗಿಲವೆಂಬ ಉತ್ತರ ನೀಡಿದರು. ಹಾಗಾಗಿ ಚೆಂಡು ವಿಕೆಟ್‌ಗೆ ಹೋಗುತ್ತಿದ್ದ ಕಾರಣ ಗಿಲ್, ಅದು ಔಟೆಂದು ಹೇಳಿದರು. ಇದನ್ನು ಕೇಳಿದ ಕೊಹ್ಲಿ ಕೂಡ ಡಿಆರ್‌ಎಸ್ ತೆಗೆದುಕೊಳ್ಳದೆ ಪೆವಿಲಿಯನ್ ಸೇರಿಕೊಂಡರು.

**ರೋಹಿತ್ ಅಸಮಾಧಾನ**

ಆದರೆ ಸ್ವಲ್ಪ ಸಮಯದ ನಂತರ ತೋರಿದ ರಿವ್ಯೂನಲ್ಲಿ ಚೆಂಡು, ಕೊಹ್ಲಿಯ ಬ್ಯಾಟ್‌ಗೆ ತಾಗಿರುವುದು ಸ್ಪಷ್ಟವಾಗಿ ಗೋಚರಿಸಿತು. ಇದನ್ನು ನೋಡಿದ ನಾಯಕ ರೋಹಿತ್, ಡಗೌಟ್‌ನಲ್ಲೇ ಅಸಮಾಧಾನ ಹೊರಹಾಕಿದರು. ಕೊಹ್ಲಿ ಡಿಆರ್‌ಎಸ್ ತೆಗೆದುಕೊಳ್ಳಬೇಕಿತ್ತು ಎಂಬುದು ಅವರ ಮುಖಭಾವದಲ್ಲಿ ಕಾಣಿಸುತ್ತಿತ್ತು. ಇತ್ತ ಕೊಹ್ಲಿ ವಿರುದ್ಧ ತೀರ್ಪು ನೀಡಿದ ಅಂಪೈರ್ ಕೂಡ, ಕೊಹ್ಲಿ ಡಿಆರ್‌ಎಸ್ ತೆಗೆದುಕೊಳ್ಳದಿರುವುದರ ಬಗ್ಗೆ ತಮಾಷೆಯಾಗಿ ನಕ್ಕರು.





# ಬ್ಯಾಕ್ ಟು ಬ್ಯಾಕ್ ವಿಕೆಟ್ ತೆಗೆದ ಆಕಾಶ್

ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ ಭಾರತದ ಆಕಾಶ್ ದೀಪ್ ತಮ್ಮ ಬೌಲಿಂಗ್ ಮೂಲಕ ಸದ್ದು ಮಾಡುತ್ತಿದ್ದಾರೆ. ಬಾಂಗ್ಲಾದೇಶದ ಮೊದಲ ಇನ್ನಿಂಗ್ಸ್‌ನಲ್ಲಿ ಅವರು ಸತತ ಎರಡು ಎಸೆತಗಳಲ್ಲಿ ಎರಡು ವಿಕೆಟ್ ಪಡೆದರು. ತಮ್ಮ ಖೋಟಾದ ಎರಡನೇ ಓವರ್‌ನ ಸತತ ಎರಡು ಎಸೆತಗಳಲ್ಲಿ ಅವರು, ಬಾಂಗ್ಲಾದೇಶದ ಝಾಕಿರ್ ಹಸನ್ ಮತ್ತು ಮೊಮಿನುಲ್ ಹಕ್ ಅವರನ್ನು ಔಟ್ ಮಾಡಿದರು. ಆಕಾಶ್ ಎಸೆದ ಓವರ್‌ನ ಮೊದಲ ಎಸೆತದಲ್ಲೇ ಝಾಕಿರ್ ಔಟಾದರೆ, ನಂತರ ಬಂದ ಮೊಮಿನುಲ್ ತಾವು ಎದುರಿಸಿದ ಮೊದಲ ಎಸೆತದಲ್ಲೇ ಆಕಾಶ್ ಕ್ಲೀನ್ ಬೌಲ್ಡ್ ಮಾಡಿದರು. ಇದು ಆಕಾಶ್ ಅವರ ಎರಡನೇ ಟೆಸ್ಟ್ ಪಂದ್ಯವಾಗಿದ್ದು, ಈ ವರ್ಷದ ಫೆಬ್ರುವರಿಯಲ್ಲಿ ಇಂಗ್ಲೆಂಡ್ ವಿರುದ್ಧ ಪಾದಾರ್ಪಣೆ ಮಾಡಿದ ಅವರು ತಮ್ಮ ಬೌಲಿಂಗ್‌ನಿಂದ ಆಂಗ್ಲ ತಂಡಕ್ಕೆ ಸಾಕಷ್ಟು ತೊಂದರೆ ಕೊಟ್ಟಿದ್ದರು.

ಬಾಂಗ್ಲಾದೇಶದ ಮೊದಲ ಇನ್ನಿಂಗ್ಸ್ ಬಗ್ಗೆ ಹೇಳುವುದಾದರೆ.. ಪ್ರವಾಸಿ ತಂಡ ಪೂರ್ಣ ದಿನವನ್ನು ಆಡಲಾಗದೆ, ಕೇವಲ ಮೂರನೇ ಸೆಷನ್‌ನಲ್ಲಿಯೇ ಆಲೌಟ್ ಆಯಿತು. ಮೊದಲ ದಿನದಂತೆಯೇ ಎರಡನೇ ದಿನದ ಆಟದಲ್ಲೂ ಭಾರತದ ಆಟಗಾರರು ಬಾಂಗ್ಲಾದೇಶದ ಮೇಲೆ ಪಾರುಪತ್ಯ ಸಾಧಿಸಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966